ಸಂಪುಟ: 05 ಸಂಚಿಕೆ: 216 ಪುಟಗಳು: 08 ಸೋಮವಾರ 20 ಅಕ್ಟೋಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ದೀಪಾವಳಿ ವಿಶೇಷಾಂಕ



























# ರಸ್ತೆ ಬಗ್ಗೆ ಟೀಕಿಸಿದ ಉದ್ಯಮಿಗಳ ವಿರುದ್ಧ ಮತ್ತೆ ಗರಂ ಆದ ಡಿಕೆಶಿ

**ಬೆಂಗಳೂರಿನ ಅಭಿವೃದ್ಧಿಗೆ 1.04 ಲಕ್ಷ ಕೋಟಿ ಮೊತ್ತದ ಯೋಜನೆಗಳು, ಜನರ ಕಲ್ಯಾಣ ಯೋಜನೆಗಳಿಗೆ ಪ್ರತಿ ವರ್ಷ 1 ಲಕ್ಷ ಕೋಟಿ ವೆಚ್ಚ**

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನ ಸೌಲಭ್ಯಗಳನ್ನು ಬಳಸಿಕೊಂಡು ಉದ್ಯಮ ಆರಂಭಿಸಿ ದೊಡ್ಡ ಮಟ್ಟಕ್ಕೆ ಬೆಳೆದವರು. ಈಗ ಬೆಂಗಳೂರಿನ ಬಗ್ಗೆ ಟೀಕೆ ಮಾಡಿ ಟ್ವೀಟ್ ಮಾಡುತ್ತಿದ್ದಾರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರಿನ ಘನತೆಗೆ ಚ್ಯುತಿ ತರುತ್ತಿರುವವರ ವಿರುದ್ಧ, ಅದರಲ್ಲೂ ಉದ್ಯಮಿ ಕಿರಣ್ ಮಜುಂದಾರ್ ಷಾ ವಿರುದ್ಧ ಪರೋಕ್ಷ ವಾಗ್ದಾಳಿ ನಡೆಸಿದರು.

ಬೆಂಗಳೂರಿನ ಕೋರಮಂಗಲದ ವೀರ ಯೋಧ ಉದ್ಯಾನವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಬೆಂಗಳೂರು ನಡಿಗೆ ಅಭಿಯಾನದ ಅಂಗವಾಗಿ ನಾಗರಿಕರೊಂದಿಗೆ ಸಂವಾದ ನಡೆಸಿ, ಅವರ ಅಹವಾಲುಗಳನ್ನು ಆಲಿಸಿ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಮಾತನಾಡಿದರು. ಬೆಂಗಳೂರಿಗೆ ಬಂದು ಬೆಳೆದಿರುವವರು ಹಿಂದೆ ಹೇಗಿದ್ದೆವು, ಪ್ರಸ್ತುತ ಹೇಗಿದ್ದೇವೆ ಎಂಬುದನ್ನು ಮರೆತು ಟ್ವೀಟ್ ಮಾಡುತ್ತಿದ್ದಾರೆ. ನಾವು ನಮ್ಮ ಮೂಲವನ್ನು ಮರೆಯಬಾರದು, ಮೂಲವನ್ನು ಮರೆತರೆ ಯಶಸ್ಸು ಸಾಧಿಸುವುದಿಲ್ಲ ಎಂದು ನಾನು ನಂಬಿದ್ದೇನೆ ಎಂದು ತಿಳಿಸಿದರು.



ನಗರದಾದ್ಯಂತ ಎಲ್ಲೆಲ್ಲಿ ರಸ್ತೆಗುಂಡಿಗಳಿವೆ ಎಂಬುದನ್ನು ಸಾರ್ವಜನಿಕರೇ ಫೋಟೋ ತೆಗೆದು ಅದನ್ನು ಮೊಬೈಲ್ ಆ್ಯಪ್ ಮೂಲಕ ಸರ್ಕಾರದ ಗಮನಕ್ಕೆ ತರುವ ವ್ಯವಸ್ಥೆಯನ್ನು ಇಡೀ ದೇಶದಲ್ಲಿಯೇ ಮೊದಲ ಬಾರಿಗೆ ನಾವು ರೂಪಿಸಿದ್ದೇವೆ. ಮಾಧ್ಯಮಗಳೂ ಸಹ ಸುದ್ದಿ ಮಾಡುತ್ತಿವೆ. ನಾನು ಟೀಕೆ ಹಾಗೂ ವಿಮರ್ಶೆಗಳನ್ನು ಸ್ವಾಗತಿಸುತ್ತೇನೆ. ಟೀಕೆಗಳು ಇದ್ದಾಗಲೇ ಪ್ರಜಾಪ್ರಭುತ್ವಕ್ಕೆ ಹೆಚ್ಚು ಮೌಲ್ಯ ಇರುತ್ತದೆ. ಆದರೆ ಕೆಲವರು ವಿಕೋಪಕ್ಕೆ ಹೋಗಿ ಟೀಕೆ ಮಾಡುತ್ತಿದ್ದಾರೆ. ಅಂತಹವರ ಟೀಕೆ ಬಗ್ಗೆ ನಾನು ತಲೆ ಕೆಡಿಸಿಕೊಳ್ಳುವುದಿಲ್ಲ. ಜನ ನಮಗೆ ಅವಕಾಶ ನೀಡಿದ್ದು, ನಾವು ನಮ್ಮ ಕೆಲಸ ಮಾಡುತ್ತಿದ್ದೇವೆ ಎಂದರು.

ಇಡೀ ದೇಶದಲ್ಲಿ ಸಮಸ್ಯೆಯಿದೆ. ಅವರೆಲ್ಲಾ ಮಾಧ್ಯಮಗಳನ್ನು ನಿಯಂತ್ರಣ ಮಾಡುತ್ತಿದ್ದಾರೆ. ನಾವು ಮುಕ್ತವಾಗಿ ಬಿಟ್ಟಿದ್ದೇವೆ. ದೆಹಲಿ, ಮುಂಬೈ ಸೇರಿದಂತೆ ಎಲ್ಲಿಗೆ ಬೇಕಾದರೂ ಕರೆದುಕೊಂಡು ಹೋಗಿ ರಸ್ತೆಗಳ ಸಮಸ್ಯೆಗಳನ್ನು ನಾವು ತೋರಿಸುವೆ ಎಂದರು. ಜನರ ಬಳಿಗೆ ಸರ್ಕಾರ ಹೋಗಬೇಕು ಎಂದು ಐದು ಪಾಲಿಕೆಗಳನ್ನು ಮಾಡಲಾಗಿದೆ. ಬಿ ಖಾತಾದಿಂದ ಎ ಖಾತೆಗೆ ಬದಲಾವಣೆ ಮಾಡಿಕೊಳ್ಳಲು ಸರ್ಕಾರ ಅತ್ಯುತ್ತಮ ಅವಕಾಶ ನೀಡಿದೆ. ಸಿಎ ನಿವೇಶನಗಳ ಬಗ್ಗೆಯೂ ಪ್ರತ್ಯೇಕ ನೀತಿ ತರಲಾಗುತ್ತಿದೆ.

ಗೊಂದಲ ಉಂಟಾಗುವುದು ಬೇಡವೆಂದು ನಗರ ಯೋಜನೆ ಕೆಲಸವನ್ನು ಬಿಡಿಎಯಿಂದ ಜಿಬಿಎಗೆ ನೀಡಲಾಗಿದೆ. ದೊಡ್ಡ ಯೋಜನೆಗಳನ್ನು ಸರ್ಕಾರ ಮಾಡಿದರೆ. ಚಿಕ್ಕ ಕೆಲಸಗಳನ್ನು ಪಾಲಿಕೆಗಳು ಮಾಡುತ್ತವೆ ಎಂದರು.

ನಗರದಲ್ಲಿ ನಿತ್ಯ ಮೂರು ಸಾವಿರ ವಾಹನಗಳು ನೋಂದಣಿ ಆಗುತ್ತಿವೆ. ಜನಸಂಖ್ಯೆ 1.40 ಕೋಟಿ ಮುಟ್ಟಿದೆ. 70 ಲಕ್ಷ ಮಂದಿ ಪ್ರತಿದಿನ ಹೊರಗಿನಿಂದ ಬಂದು ಹೋಗುತ್ತಿದ್ದಾರೆ. ಉದ್ಯೋಗ, ಶಿಕ್ಷಣ, ವಹಿವಾಟು, ಉದ್ದಿಮೆ ಹೀಗೆ ಅನೇಕ ಕೆಲಸಗಳಿಗಾಗಿ ಬೆಂಗಳೂರನ್ನು ಅವಲಂಬಿಸಿದ್ದಾರೆ ಎಂದರು.

ಜಿಬಿಎ ಮಾಡುವಾಗ ವಿರೋಧ ಪಕ್ಷದವರೂ ಸಹಕಾರ ನೀಡಿದರು. ಈ ಮೊದಲು 198 ವಾರ್ಡ್ ಗಳಿದ್ದವು ಈಗ ಐದು ಪಾಲಿಕೆಗಳಿಂದ 369 ವಾರ್ಡ್ ಗಳಾಗಿವೆ. ಇಷ್ಟು ಬೇಗ ಪಾಲಿಕೆ ವಿಭಜನೆಯಿಂದ ಹಿಡಿದು ಎಲ್ಲಾ ಕೆಲಸಗಳನ್ನು ಮಾಡಲು ಸಾಧ್ಯವೇ ಎಂದು ದೇಶದಾದ್ಯಂತ ಪ್ರಶಂಸೆ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

**ಟೆಂಡರ್ ಇಲ್ಲದೆ ಐದು ಪಾಲಿಕೆಗಳು 50 ಕೋಟಿ ಖರ್ಚು ಮಾಡಲು ಅವಕಾಶ**

**5 ಪಾಲಿಕೆಗಳು ಸೇರಿ 50 ಕೋಟಿ ಮೊತ್ತದ ಕೆಲಸಗಳಿಗೆ ನೇರ ಅನುಮೋದನೆ ನೀಡುವ ಅವಕಾಶ ಕಲ್ಪಿಸಲಾಗಿದೆ. ಟೆಂಡರ್ ಇಲ್ಲದೇ ಪ್ರತಿ ಪಾಲಿಕೆಯ ಕೌನ್ಸಿಲ್ 10 ಕೋಟಿ ಮೊತ್ತದ ಕಾಮಗಾರಿಗಳಿಗೆ ಹಾಗೂ ಪಾಲಿಕೆ ಆಯುಕ್ತರು 3 ಕೋಟಿ ರೂಪಾಯಿ ಖರ್ಚು ಮಾಡಲು ಅವಕಾಶ ನೀಡಲಾಗಿದೆ. ಬಿಬಿಎಂಪಿ ಇದ್ದಾಗ 10 ಕೋಟಿ ಖರ್ಚು ಮಾಡಬಹುದಾಗಿತ್ತು. ಪಾಲಿಕೆ ಆಯುಕ್ತರ ವೆಚ್ಚ ಮಿತಿಯನ್ನು 1ರಿಂದ 3 ಕೋಟಿಗೆ, ಸ್ಥಾಯಿ ಸಮಿತಿ ವೆಚ್ಚ ಮಿತಿಯನ್ನು 3ರಿಂದ 5 ಕೋಟಿಗೆ, ಪಾಲಿಕೆ ಮೇಯರ್ ವೆಚ್ಚ ಮಿತಿಯನ್ನು 5ರಿಂದ 10 ಕೋಟಿಗೆ ಏರಿಸಲಾಗಿದೆ. ಆಮೂಲಕ ಪಾಲಿಕೆಗಳಿಗೆ ಆರ್ಥಿಕ ಉತ್ತೇಜನ ನೀಡಲಾಗಿದೆ. ನಮ್ಮ ಈ ನಿರ್ಧಾರದಿಂದ ಬಿಜೆಪಿ ನಾಯಕರು ಸಂತೋಷಗೊಂಡಿದ್ದು, ಅದನ್ನು ಬಹಿರಂಗವಾಗಿ ವ್ಯಕ್ತಪಡಿಸುತ್ತಿಲ್ಲ. ನೀವು ನಮಗೆ ಸಹಕಾರ ನೀಡಿ ಎಂದರು.**

## ಇನ್ಮುಂದೆ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲೂ ಸಿಗಲಿದೆ ಇ-ಸ್ವತ್ತು ಸೌಲಭ್ಯ

• **ಉದಯವಾಹಿನಿ, ಬೆಂಗಳೂರು**

ಗ್ರಾಮೀಣ ಜನತೆಯ ಜೀವನವನ್ನು ಸರಳಗೊಳಿಸುವ ಮತ್ತು ಗ್ರಾಮ ಪಂಚಾಯಿತಿಗಳ ಆಡಳಿತವನ್ನು ಆಧುನಿಕಗೊಳಿಸುವ ನಿಟ್ಟಿನಲ್ಲಿ ಮಹತ್ವದ ಕ್ರಮವೊಂದನ್ನು ರಾಜ್ಯ ಸರ್ಕಾರ ಕೈಗೊಂಡಿದೆ. ಕರ್ನಾಟಕ ಗ್ರಾಮ ಸ್ವರಾಜ್ ಪಂ. ರಾಜ್ ಅಧಿನಿಯಮ 1993ಕ್ಕೆ ತಿದ್ದುಪಡಿಗಳನ್ನು ರಾಜ್ಯ ಸರ್ಕಾರ ತಂದಿದ್ದು, ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಆಸ್ತಿಗಳಿಗೆ ಇ-ಸ್ವತ್ತು ಪ್ರಮಾಣ ಪತ್ರ ವಿತರಣೆಯನ್ನು ಪ್ರಾರಂಭಿಸಿದೆ. ರಾಜ್ಯ ಸರ್ಕಾರದ ಈ ಕ್ರಮವು ಗ್ರಾಮೀಣ ಜನರಿಗೆ ಆಸ್ತಿ ಸಂಬಂಧಿತ ದಾಖಲೆಗಳನ್ನು ಪಾರದರ್ಶಕವಾಗಿ, ವೈಜ್ಞಾನಿಕವಾಗಿ ಮತ್ತು ತ್ವರಿತವಾಗಿ ಪಡೆಯಲು ಅನುವು ಮಾಡಿಕೊಡಲಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು ಯೋಜನೆಗೆ ಚಾಲನೆ ನೀಡಿದ್ದಾರೆ. ಇದಕ್ಕಾಗಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ಕ್ಕೆ ತಿದ್ದುಪಡಿ ತರಲಾಗಿದೆ. ಈ ನಿಯಮಗಳ ಜಾರಿಯಿಂದ 95,75,935 ಆಸ್ತಿಗಳಿಗೆ ಆಸ್ತಿ ಪ್ರಮಾಣ ಪತ್ರ ನೀಡಲು ಅವಕಾಶ ಕಲ್ಪಿಸಲಾಗುತ್ತಿದೆ, ಹದಿನೈದು ದಿನಗಳೊಳಗಾಗಿ ತಂತ್ರಾಂಶದಲ್ಲಿ ತಾಂತ್ರಿಕ ಬದಲಾವಣೆಗಳನ್ನು ತಂದು ಗ್ರಾಮೀಣ ಜನರಿಗೆ ಸೌಲಭ್ಯವನ್ನು ಒದಗಿಸಲಾಗುವುದು ಎಂದು ಹೇಳಿದ್ದಾರೆ.

## ಕಾಂಗ್ರೆಸ್‌ನಲ್ಲಿ ಯಾವ ಕ್ರಾಂತಿಯೂ ನಡೆಯೋದಿಲ್ಲ: ಹೆಚ್‌ಡಿಕೆ ಭವಿಷ್ಯ

• **ಉದಯವಾಹಿನಿ, ಬೆಂಗಳೂರು**

ಕಾಂಗ್ರೆಸ್‌ನಲ್ಲಿ ಯಾವ ಕ್ರಾಂತಿಯೂ ನಡೆಯೋದಿಲ್ಲ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭವಿಷ್ಯ ನುಡಿದರು. ಬೆಂಗಳೂರಿನಲ್ಲಿ ಮಾತಾಡಿದ ಕುಮಾರಸ್ವಾಮಿ, ಯಾವ ಕ್ರಾಂತಿಯೂ ನಡೆಯಲ್ಲ. ನವೆಂಬರ್ ಕ್ರಾಂತಿಯೂ ನಡೆಯಲ್ಲ. ಇವರು ಜನರಿಗೆ ಅಭಿವೃದ್ಧಿ ಕ್ರಾಂತಿ ಮಾಡಲಿ ಸಾಕು ಅಂತ ಗುಡುಗಿದರು.

ಸರ್ಕಾರದಿಂದ ಸಂಘದ ಚಟುವಟಿಕೆಗಳಿಗೆ ನಿರ್ಬಂಧ ಪ್ರಯತ್ನಗಳು ನಡೆಯುತ್ತಿವೆ. ಈ ಸರ್ಕಾರ ಹಲವು ಸಮಸ್ಯೆ ಇದ್ರೂ ಬಗೆಹರಿಸ್ತಿಲ್ಲ. ಆರ್‌ಎಸ್‌ಎಸ್ ಬಗ್ಗೆ ಚರ್ಚೆ ಮಾಡ್ತಿದೆ. ಇದರಿಂದ ಜನತೆಗೇನು ಉಪಯೋಗ ಆರ್‌ಎಸ್‌ಎಸ್ ಪಥಸಂಚಲನದಿಂದ ರಾಜ್ಯದಲ್ಲಿ ಎಲ್ಲೂ ಸಮಸ್ಯೆ ಆಗಿಲ್ಲ, ಅಶಾಂತಿ ಮೂಡಿಲ್ಲ. ಅವರು ಮೊದಲಿಂದಲೂ ಪಥಸಂಚಲನ ಮಾಡ್ಕೊಂಡು ಬರ್ತಿದ್ದಾರೆ. ಇವರು ಈಗ ಅದಕ್ಕೆ ಮಹತ್ವ ಕೊಡ್ತಿದ್ದಾರೆ. ಆಕಾಶದಲ್ಲಿ ಹಾರಾಡ್ಕೊಂಡಿದ್ರೆ ಜನತೆ ಕಷ್ಟ ಕಾಣ್ಸಲ್ಲ, ನೆಲಕ್ಕೆ ಇಳೀರಿ ಜನರ ಕಷ್ಟ ಗೊತ್ತಾಗುತ್ತೆ ಅಂತ ಕಿಡಿಕಾರಿದರು.

## ಸಾಮಾಜಿಕ, ಆರ್ಥಿಕ ಸಮೀಕ್ಷೆಯಲ್ಲಿ ಭಾಗಿಯಾದ ಆರ್ ಅಶೋಕ್

• **ಉದಯವಾಹಿನಿ, ಬೆಂಗಳೂರು**

ಸರ್ಕಾರದ ಸಾಮಾಜಿಕ, ಆರ್ಥಿಕ ಸಮೀಕ್ಷೆಯಲ್ಲಿ ವಿಧಾನಸಭೆಯ ವಿಪಕ್ಷ ನಾಯಕ ಆರ್. ಅಶೋಕ್ ಭಾಗವಹಿಸಿದ್ದಾರೆ. ಅಶೋಕ್ ಅವರ ಜಾಲಹಳ್ಳಿಯ ನಿವಾಸಕ್ಕೆ ಗಣತಿದಾರರು ಆಗಮಿಸಿದ್ದಾರೆ. ಈ ವೇಳೆ ತಮ್ಮ ಕುಟುಂಬಸ್ಥರ ಬಗ್ಗೆ ಮಾಹಿತಿ ನೀಡಿದ್ದಾರೆ. ಆದರೆ ಕೆಲ ವೈಯಕ್ತಿಕ ಮಾಹಿತಿಯನ್ನು ಹಂಚಿಕೊಂಡಿಲ್ಲ. ಸಮೀಕ್ಷೆಯಲ್ಲಿ ಪಾಲ್ಗೊಂಡ ವಿಚಾರವನ್ನು ತಮ್ಮ ಸಾಮಾಜಿಕ ಜಾಲತಾಣ ಖಾತೆಗಳಲ್ಲಿ ಅಶೋಕ್ ಬಹಿರಂಗಗೊಳಿಸಿಲ್ಲ. ಒಕ್ಕಲಿಗ ಸಮಾಜದ ಪ್ರಭಾವಿ ನಾಯಕರಾಗಿರುವ ಅಶೋಕ್ ಅವರು ಸಮಾಜ ಜಾತಿಗಣತಿ ವಿಚಾರದ ಬಗ್ಗೆ ಆಯೋಜಿಸಿದ್ದ ಸಭೆಯಲ್ಲಿ ಈ ಹಿಂದೆ ಭಾಗವಹಿಸಿದ್ದರು. ಈ ಸಭೆಯಲ್ಲಿ ಜಾತಿಗಳಿಗೆ ಕ್ರಿಶ್ಚಿಯನ್ ಸೇರಿಸಿರುವುದನ್ನ ಕೈ ಬಿಡಬೇಕು. ಸಮುದಾಯದ ಎಲ್ಲರೂ ಒಕ್ಕಲಿಗ ಎಂದೇ ಜಾತಿ ಬರೆಸಬೇಕು ಎಂಬ ಮಹತ್ವದ ನಿರ್ಧಾರವನ್ನು ಕೈಗೊಳ್ಳಲಾಗಿತ್ತು.

## ಮಂಗಳೂರು ಬದಲು ಬೆಂಗಳೂರಿನಲ್ಲಿ ವಿಮಾನ ಲ್ಯಾಂಡಿಂಗ್

• **ಉದಯವಾಹಿನಿ, ಬೆಂಗಳೂರು**

ರಾತ್ರಿ ದುಬೈನಿಂದ ಮಂಗಳೂರಿಗೆ ಪ್ರಯಾಣಿಸುತ್ತಿದ್ದ ಇಂಡಿಗೊ ವಿಮಾನದ ಶೌಚಾಲಯದಲ್ಲಿ ಪ್ರಯಾಣಿಕರೊಬ್ಬರು ಬರೆದಿದ್ದ ಬಾಂಬ್ ಬರಹ ಕೆಲ ಕಾಲ ಆತಂಕ ಸೃಷ್ಟಿಸಿತ್ತು.168 ಪ್ರಯಾಣಿಕರನ್ನು ಹೊತ್ತ ವಿಮಾನವು ದುಬೈನಿಂದ ಮಂಗಳೂರಿಗೆ ಸಂಜೆ ಹಾರಾಟ ಆರಂಭಿಸಿತ್ತು. ಮಾರ್ಗ ಮಧ್ಯೆ ಪ್ರಯಾಣಿಕರೊಬ್ಬರು ವಿಮಾನದ ಶೌಚಾಲಯಕ್ಕೆ ಹೋಗಿ ಬಾಂಬ್ ಎಂದು ಬರೆದು ಹೊರಬಂದಿದ್ದಾರೆ. ಸ್ವಲ್ಪ ಸಮಯದ ಬಳಿಕ ಶೌಚಾಲಯಕ್ಕೆ ಹೋದ ಸಹ ಪ್ರಯಾಣಿಕರು, ಬಾಂಬ್ ಎಂಬ ಬರಹ ನೋಡಿ ಗಾಬರಿಯಾಗಿ ವಿಮಾನದ ಸಿಬ್ಬಂದಿಗೆ ವಿಷಯ ತಿಳಿಸಿದ್ದರು. ಬಳಿಕ ಸುರಕ್ಷತಾ ದೃಷ್ಟಿಯಿಂದ ವಿಮಾನವನ್ನು ಮಂಗಳೂರಿನ ಬದಲಿಗೆ ತುರ್ತಾಗಿ ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಳಿಸಲಾಯಿತು. ಕೆಐಎಎಲ್‌ನಲ್ಲಿ ಭದ್ರತಾ ಸಿಬ್ಬಂದಿ ಮಧ್ಯರಾತ್ರಿವರೆಗೆ ಇಡೀ ವಿಮಾನವನ್ನು ತಪಾಸಣೆ ಮಾಡಿದರು. ಅಲ್ಲದೇ, ಪ್ರಯಾಣಿಕರನ್ನೂ ತಪಾಸಣೆಗೆ ಒಳಪಡಿಸಿದರು. ಆದರೆ, ಯಾವುದೇ ಸ್ಫೋಟಕ ವಸ್ತುಗಳು ಪತ್ತೆಯಾಗಿಲ್ಲ. ಬಾಂಬ್‌ನ ಅಪಾಯವಿಲ್ಲವೆಂದು ತಿಳಿದ ಬಳಿಕ ಪ್ರಯಾಣಿಕರು ಹಾಗೂ ಸಿಬ್ಬಂದಿ ನಿಟ್ಟುಸಿರು ಬಿಟ್ಟರು. ವಿಮಾನದ ಶೌಚಾಲಯದಲ್ಲಿ ಬರೆದಿದ್ದ ಬಾಂಬ್ ಎಂಬ ಬರಹವು ಪ್ರಯಾಣಿಕರಲ್ಲಿ ಆತಂಕ ಹುಟ್ಟಿಸಿತ್ತು. ವಿಚಾರ ತಿಳಿದ ಕೂಡಲೇ ಸುರಕ್ಷತಾ ದೃಷ್ಟಿಯಿಂದ ವಿಮಾನದ ಮಾರ್ಗ ಬದಲಾವಣೆ ಮಾಡಿ ಕೆಐಎಎಲ್‌ನಲ್ಲಿ ಇಳಿಸಿ ತಪಾಸಣೆ ಮಾಡಲಾಗಿದೆ. ಬರಹ ಬರೆದ ಪ್ರಯಾಣಿಕನ ಬಗ್ಗೆ ಮಾಹಿತಿ ಸಿಕ್ಕಿಲ್ಲ. ಹೆಚ್ಚಿನ ತನಿಖೆ ನಡೆಯುತ್ತಿದ್ದು, ಪ್ರಯಾಣಿಕನ ಗುರುತು ಪತ್ತೆಯಾದ ನಂತರ ಆತನ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುತ್ತದೆ' ಎಂದು ಪೊಲೀಸರು ತಿಳಿಸಿದ್ದಾರೆ.

## ಮರಕ್ಕೆ ಬೈಕ್ ಡಿಕ್ಕಿ: ಸಾವು ಸ್ವಚ್ಛತಾ ಕಾರ್ಮಿಕ

• **ಉದಯವಾಹಿನಿ, ಬೆಂಗಳೂರು**

ಕಾಡುಬೀಸನಹಳ್ಳಿ ಬಳಿಯ ಕರಿಯಮ್ಮನ ಅಗ್ರಹಾರ ಮುಖ್ಯರಸ್ತೆಯಲ್ಲಿ ರಾತ್ರಿ ದ್ವಿಚಕ್ರ ವಾಹನವು ಮರಕ್ಕೆ ಡಿಕ್ಕಿ ಹೊಡೆದು ಸಂಭವಿಸಿದ ಅಪಘಾತದಲ್ಲಿ ಯುವಕರ ಮೃತಪಟ್ಟಿದ್ದಾನೆ. ಅಸ್ಸಾಂ ರಾಜ್ಯದ ಸಾಹಿಲ್ ಅಹಮ್ಮದ್ (19) ಮೃತ ಯುವಕ. ನಗರದ ದೇವರ ಬೀಸನಹಳ್ಳಿಯಲ್ಲಿ ವಾಸವಾಗಿದ್ದ ಸಾಹಿಲ್, ಖಾಸಗಿ ಕಂಪನಿಯಲ್ಲಿ ಸ್ವಚ್ಛತಾ ಕೆಲಸ ಮಾಡುತ್ತಿದ್ದರು. ದ್ವಿಚಕ್ರ ವಾಹನದಲ್ಲಿ ರಾತ್ರಿ ಮನೆಗೆ ಹೋಗುತ್ತಿದ್ದಾಗ ಈ ದುರ್ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ನಿರ್ಲಕ್ಷ್ಯದಿಂದ ಅತಿ ವೇಗವಾಗಿ ದ್ವಿಚಕ್ರ ವಾಹನ ಚಾಲನೆ ಮಾಡುತ್ತಿದ್ದ ವೇಳೆ ನಿಯಂತ್ರಣ ತಪ್ಪಿ ರಸ್ತೆ ಬದಿಯ ಮರಕ್ಕೆ ವಾಹನ ಡಿಕ್ಕಿ ಹೊಡೆದಿದೆ. ಪರಿಣಾಮ ತಲೆಗೆ ತೀವ್ರ ಪೆಟ್ಟಾಗಿ ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ ಎಂದು ಪೊಲೀಸರು ಹೇಳಿದ್ದಾರೆ. ಎಚ್‌ಎಎಲ್ ಸಂಚಾರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಹಸ್ತಾಂತರಿಸಲಾಯಿತು. ಪ್ರಕರಣ ದಾಖಲಿಸಿಕೊಂಡು, ತನಿಖೆ ಕೈಗೊಂಡಿದ್ದಾರೆ.

## ಕೆಎಂಎಫ್ ಸಕ್ಕರೆ ರಹಿತ ನಂದಿನಿ ಸಿಹಿ ಉತ್ಪನ್ನಗಳ ಬಿಡುಗಡೆ

• **ಉದಯವಾಹಿನಿ, ಬೆಂಗಳೂರು**

ದೀಪಾವಳಿ ಹಬ್ಬದ ಪ್ರಯುಕ್ತ ಕರ್ನಾಟಕ ಹಾಲು ಮಹಾಮಂಡಳಿ(ಕೆಎಂಎಫ್) ಸಕ್ಕರೆ ರಹಿತ ನಂದಿನಿ ಸಿಹಿ ಉತ್ಪನ್ನಗಳನ್ನು ಬಿಡುಗಡೆ ಮಾಡಿದೆ. 500 ಗ್ರಾಂ ನಂದಿನಿ ಖೋವಾ ಗುಲಾಬ್ ಜಾಮೂನ್ (220), 200 ಗ್ರಾಂನ ನಂದಿನಿ ಹಾಲಿನ ಪೇಡಾ (170), ನಂದಿನಿ ಬೆಲ್ಲದ ಓಟ್ಸ್ ಆ್ಯಂಡ್ ನಟ್ಸ್ ಬರ್ಫಿ(170) ಅನ್ನು ಮಾರುಕಟ್ಟೆಗೆ ಪರಿಚಯಿಸಿದೆ. ಗ್ರಾಹಕರು ಸಕ್ಕರೆ ರಹಿತ ಸಿಹಿ ತಿನಿಸುಗಳನ್ನು ಬಯಸುತ್ತಾರೆ. ಇವು ಮಧುಮೇಹ ಇರುವವರಿಗೆ ಅನುಕೂಲಕರವಾಗಿದ್ದು, ತೂಕ ನಿಯಂತ್ರಣಕ್ಕೆ ಸಹಕಾರಿ ಹಾಗೂ ಹಲ್ಲುಗಳ ಆರೈಕೆಗೆ ಉತ್ತಮ. ಸಕ್ಕರೆ ಇಲ್ಲದಿದ್ದರೂ ಸಹಜ ಸಿಹಿ ಮತ್ತು ರುಚಿ ಇರುವ ಈ ಉತ್ಪನ್ನಗಳು ಜನಪ್ರಿಯವಾಗುತ್ತಿವೆ ಎಂದು ಮಹಾಮಂಡಳಿ ತಿಳಿಸಿದೆ. ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್ ಅವರು ವಿಧಾನಸೌಧದಲ್ಲಿ 3 ಉತ್ಪನ್ನಗಳನ್ನು ಬಿಡುಗಡೆ ಮಾಡಿದರು. ಕೆಎಂಎಫ್ ಆಡಳಿತಾಧಿಕಾರಿ ಟಿಎಚ್ ಎಂ ಕುಮಾರ್, ನಿರ್ದೇಶಕ ಬಿ.ಶಿವಸ್ವಾಮಿ ಹಾಜರಿದ್ದರು.

## ಸಂಚಾರ ದಟ್ಟಣೆ, ಮೂಲಸೌಕರ್ಯ ಸಮಸ್ಯೆ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ನಗರಕ್ಕೆ ಸಭೆಗಳು, ಪ್ರೋತ್ಸಾಹಕಗಳು, ಸಮ್ಮೇಳನಗಳು ಮತ್ತು ಪ್ರದರ್ಶನಗಳ ಭಾಗವಾಗಿ ಆಗಮಿಸುವ ಪ್ರವಾಸಿಗರು, ಉದ್ಯಮಿಗಳಿಗೆ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಅದರ ಸುತ್ತಮುತ್ತಲಿನ ಪ್ರದೇಶಗಳು ಪ್ರವಾಸೋದ್ಯಮ ಕೇಂದ್ರವಾಗಿ ಹೊರಹೊಮ್ಮಿದೆ. ಇದು ವ್ಯಾಪಾರ ಪ್ರವಾಸೋದ್ಯಮದ ಒಂದು ಭಾಗವಾಗಿದೆ.

ಪ್ರವಾಸ ನಿರ್ವಾಹಕರು ಮತ್ತು ಪಾಲುದಾರರು ಬೆಂಗಳೂರಿಗೆ ಬರದೇ ಕೆಂಪೇಗೌಡ ಏರ್ ಪೋರ್ಟ್ ಹತ್ತಿರ ಸೇರಿ ಸಭೆ-ಸಂವಹನಗಳನ್ನು ನಡೆಸಿ ಸಂಜೆ ವಿಮಾನ ಹತ್ತಿ ಹೋಗುತ್ತಾರೆ. ವಿಮಾನ ಹತ್ತುವ ಮೊದಲು ವಿಮಾನ ನಿಲ್ದಾಣದಲ್ಲಿ ಮತ್ತು ಸುತ್ತಮುತ್ತ ಪ್ರದೇಶದಲ್ಲಿ ರಜೆ ಕಳೆಯುತ್ತಿದ್ದಾರೆ. ಪ್ರಯಾಣ ಮತ್ತು ಪ್ರವಾಸೋದ್ಯಮ ವೃತ್ತಿಪರರ ಸಂಘವಾದ ಸ್ಕಲ್ ಇಂಡಿಯಾ-ಬೆಂಗಳೂರು ವೃತ್ತದ ಸುವರ್ಣ ಮಹೋತ್ಸವ ಆಚರಣೆಯ ಅಂಗವಾಗಿ ನಿನ್ನೆ ನಡೆದ ಕಾರ್ಯಾಗಾರ ಸಂದರ್ಭದಲ್ಲಿ ಪ್ರವಾಸ ನಿರ್ವಾಹಕರು ಮತ್ತು ಪಾಲುದಾರರಲ್ಲಿ ಚರ್ಚಿಸಲಾದ ಹೊಸ ಪ್ರವೃತ್ತಿ ಕಂಡುಬಂತು.

ವಿಮಾನ ನಿಲ್ದಾಣದ ಬಳಿ ಸ್ಟಾರ್ ಹೋಟೆಲ್‌ಗಳಿದ್ದರೂ, ವಿಮಾನ ನಿಲ್ದಾಣದಿಂದ ಸ್ವಲ್ಪ ದೂರದಲ್ಲಿ ಮಣ್ಣಿನ ಹೋಂಸ್ಟೇಗಳು, ರೆಸಾರ್ಟ್‌ಗಳು ಸಹ ಇವೆ. ವಿಮಾನ ನಿಲ್ದಾಣವು ಒಳಗೆ ಮತ್ತು ಹೊರಗೆ ವಿಸ್ತಾರ ಪ್ರದೇಶ ಹೊಂದಿದ್ದು, ಸಂಚಾರ ದಟ್ಟಣೆಯನ್ನು ತಪ್ಪಿಸಲು ಬಯಸುವವರಿಗೆ ಇದು ಜನಪ್ರಿಯ ತಾಣವಾಗಿದೆ ಎಂದು ಪ್ರವಾಸ ನಿರ್ವಾಹಕರು ಹೇಳುತ್ತಾರೆ.



ಉದಯವಾಹಿನಿ ಚಿತ್ರ

**ಸಂಚಾರ ದಟ್ಟಣೆ ಇಲ್ಲದ ಆಂಧ್ರಪ್ರದೇಶ ಸೇರಿದಂತೆ ದೇವನಹಳ್ಳಿ ಮತ್ತು ಪಕ್ಕದ ಪ್ರದೇಶಗಳಲ್ಲಿ ಹೋಟೆಲ್, ರೆಸ್ಟೋರೆಂಟ್‌ಗಳು ಮತ್ತು ರೆಸಾರ್ಟ್‌ಗಳ ಉಪಸ್ಥಿತಿಯು ಕೆಂಪೇಗೌಡ ಏರ್ ಪೋರ್ಟ್ ನಲ್ಲಿ ಇಳಿಯುವ ಪ್ರವಾಸಿಗರನ್ನು ಹೆಚ್ಚು ಆಕರ್ಷಿಸುತ್ತಿದೆ. ಇದಲ್ಲದೆ, ಕೆಐಎ ಆವರಣದಲ್ಲಿರುವ ತಿಂಡಿತಿನಿಸು ಕೇಂದ್ರಗಳು, ಅದರ ಸುತ್ತಮುತ್ತಲಿನ ಹೊಟೇಲ್‌ಗಳು ಪ್ರವಾಸಿಗರಿಗೆ ದೊಡ್ಡ ಆಕರ್ಷಣೆಯಾಗಿದೆ ಎಂದು ಅವರು ಹೇಳಿದರು.**

## ಸಂಚಾರ ಪೊಲೀಸರಿಗೆ ಹಸ್ತಾಂತರಿಸುವ ಕಾರ್ಯಕ್ರಮ

• **ಉದಯವಾಹಿನಿ, ಬೆಂಗಳೂರು**

ಮುಂಬೈ, ಕೋಲ್ಕತ್ತಾ ಮತ್ತು ದೆಹಲಿಯಂತಹ ಇತರ ಪ್ರಮುಖ ಮೆಟ್ರೋಪಾಲಿಟನ್ ನಗರಗಳಿಗೆ ಹೋಲಿಸಿದರೆ ಬೆಂಗಳೂರಿನ ಸಂಚಾರ ನಿರ್ವಹಣಾ ವ್ಯವಸ್ಥೆಯು ಉತ್ತಮ ಸ್ಥಿತಿಯಲ್ಲಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ಹೇಳಿದ್ದಾರೆ.

ವಿಧಾನಸೌಧ ಮುಂಭಾಗದಲ್ಲಿ ನಡೆದ ಬೆಂಗಳೂರು ನಗರ ಸಂಚಾರ ಪೊಲೀಸ್ ಹಾಗೂ ಹೋಂಡಾ ಇಂಡಿಯಾ ಫೌಂಡೇಶನ್ ರವರ ಸಹಯೋಗದಲ್ಲಿ 50 ಸಂಚಾರ ಗಸ್ತು ವಾಹನಗಳನ್ನು ಬೆಂಗಳೂರು ನಗರ ಸಂಚಾರ ಪೊಲೀಸರಿಗೆ ಹಸ್ತಾಂತರಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಬಳಿಕ ಪರಮೇಶ್ವರ್ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಚಿವರು, ಬೆಂಗಳೂರು ನಗರ ಸಂಚಾರ ಪೊಲೀಸ್ ವತಿಯಿಂದ ಬಿಟಿಪಿ ಅಸ್ತ್ರಂ ಆ್ಯಪ್‌ನಲ್ಲಿ ನೂತನವಾಗಿ ಸೇರ್ಪಡೆ ಮಾಡಿರುವ 'ಇ-ಆ್ಯಕ್ಸಿಡೆಂಟ್' ಹೊಸ ಆವಿಷ್ಕಾರವನ್ನು ಬಿಡುಗಡೆ ಮಾಡಿದರು.ಅಪಘಾತದ ಸಂದರ್ಭದಲ್ಲಿ ತುರ್ತಾಗಿ ಸ್ಪಂದಿಸಲು, ವಿಮೆ ಪಡೆದುಕೊಳ್ಳಲು ಸರಳಗೊಳಿಸುವ ನಿಟ್ಟಿನಲ್ಲಿ ಆ್ಯಪ್‌ನ್ನು ಪರಿಚಯಿಸಲಾಗಿದೆ. ಬಿಟಿಪಿ ಅಸ್ತ್ರಂ ಆ್ಯಪ್‌ನಲ್ಲಿ ಇ- ಆ್ಯಕ್ಸಿಡೆಂಟ್ ಮೂಲಕ ರಿಪೋರ್ಟ್ ಮಾಡಿದರೆ ಸುಲಭವಾಗಿ ವಿಮೆ ಪಡೆದುಕೊಳ್ಳಲು ಸಹಾಯವಾಗುತ್ತದೆ ಎಂದು ಹೇಳಿದರು.

ಇದೇ ವೇಳೆ ಸಂಚಾರ ದಟ್ಟಣೆ ಸಮಸ್ಯೆ ಕುರಿತು ಮಾತನಾಡಿದ ಅವರು, ಮುಂಬೈ, ಕೋಲ್ಕತ್ತಾ ಮತ್ತು ದೆಹಲಿಯಂತಹ ಇತರ ಪ್ರಮುಖ ಮೆಟ್ರೋಪಾಲಿಟನ್ ನಗರಗಳಿಗೆ ಹೋಲಿಸಿದರೆ ಬೆಂಗಳೂರಿನ ಸಂಚಾರ ನಿರ್ವಹಣಾ ವ್ಯವಸ್ಥೆಯು ಉತ್ತಮ ಸ್ಥಿತಿಯಲ್ಲಿದೆ ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

**ಕಾರ್ಪೊರೇಟ್ ಕಂಪನಿಗಳು ಕೈಗಾರಿಕೆಗಳು ಸಾಮಾಜಿಕ ಜವಾಬ್ದಾರಿ ಅಡಿಯಲ್ಲಿ ತಮ್ಮ ಲಾಭದ ಕನಿಷ್ಠ ಶೇ.2 ರಷ್ಟು ಹಣ ಖರ್ಚು ಮಾಡುವ ಮೂಲಕ ಸಾರ್ವಜನಿಕ ಕಲ್ಯಾಣ ಚಟುವಟಿಕೆಗಳಿಗೆ ಕೊಡುಗೆ ನೀಡಬೇಕು. ಅನೇಕ ಕಂಪನಿಗಳು ಈ ದಿಕ್ಕಿನಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ. ಹೋಂಡಾ ಇಂಡಿಯಾ ಫೌಂಡೇಶನ್ ಬೆಂಗಳೂರು ನಗರ ಸಂಚಾರ ಪೊಲೀಸರಿಗೆ 1.3 ಕೋಟಿ ರೂ. ಮೌಲ್ಯದ 50 ಗಸ್ತು ಬೈಕ್‌ಗಳನ್ನು ದೇಣಿಗೆ ನೀಡುವ ಮೂಲಕ ತನ್ನ ಬದ್ಧತೆಯನ್ನು ಪ್ರದರ್ಶಿಸಿದೆ. ಈ ದ್ವಿಚಕ್ರ ವಾಹನಗಳು ಪೊಲೀಸರು ಸಂಚಾರವನ್ನು ಹೆಚ್ಚು ಪರಿಣಾಮಕಾರಿಯಾಗಿ ನಿಯಂತ್ರಿಸಲು ಸಹಾಯ ಮಾಡುತ್ತವೆ ಎಂದು ತಿಳಿಸಿದರು.**

## ಚೀನಾದೊಂದಿಗೆ ಭಾರತದ ಸಹಯೋಗ ಹೆಚ್ಚಲಿ: ಸಿಂಧ್ಯ

• **ಉದಯವಾಹಿನಿ, ಬೆಂಗಳೂರು**

ಎಲ್ಲಾ ಕ್ಷೇತ್ರಗಳಲ್ಲೂ ಪ್ರಗತಿ ಸಾಧಿಸಿ ವಿಶ್ವದಲ್ಲೇ ಆರ್ಥಿಕವಾಗಿ ಸದೃಢವಾಗುತ್ತಿರುವ ಚೀನಾ ಹಾಗೂ ಭಾರತ ವ್ಯಾಪಾರ ಇನ್ನಿತರ ಕ್ಷೇತ್ರಗಳಲ್ಲಿ ಸಹಯೋಗವನ್ನು ಹೆಚ್ಚಿಸಿಕೊಳ್ಳಬೇಕು' ಎಂದು ಮಾಜಿ ಸಚಿವ ಪಿ.ಜಿ.ಆರ್. ಸಿಂಧ್ಯ ಸಲಹೆ ನೀಡಿದರು.ಭಾರತ-ಚೀನಾ ಸ್ನೇಹ ಸಂಘದ ಕರ್ನಾಟಕ ಘಟಕವು ನಗರದ ಚಿತ್ರಕಲಾ ಪರಿಷತ್‌ನಲ್ಲಿ ಭಾನುವಾರ ಆಯೋಜಿಸಿದ್ದ ಚೀನಾ ಜನತಾ ಗಣರಾಜ್ಯದ 76ನೇ ವಾರ್ಷಿಕೋತ್ಸವ, ಭಾರತ ಮತ್ತು ಚೀನಾ ನಡುವಿನ ರಾಜತಾಂತ್ರಿಕ ಸಂಬಂಧ ಸ್ಥಾಪನೆಯ 75ನೇ ವಾರ್ಷಿಕೋತ್ಸವ, ಚೀನಾದ ಛಾಯಾಚಿತ್ರಗಳ ಪ್ರದರ್ಶನ ಉದ್ಘಾಟಿಸಿ ಮಾತನಾಡಿದರು.

75 ವರ್ಷದಲ್ಲಿ ಚೀನಾ ಸಾಧಿಸಿರುವ ಪರಿ ಅಗಾಧವಾದದ್ದು. ಆಟೊಮೊಬೈಲ್ ನಂತರ ತಂತ್ರಜ್ಞಾನ ವಲಯದಲ್ಲೂ ಚೀನಾ ಜಾಗತಿಕ ನಾಯಕತ್ವ ಪಡೆದುಕೊಂಡಿದೆ. ಭಾರತ ಕೂಡ ಚೀನಾಕ್ಕೆ ಕಡಿಮೆ ಇಲ್ಲದಂತೆ ಬೆಳೆದಿದೆ. ಜವಾಹರಲಾಲ್ ನೆಹರೂ, ರಾಜೀವ್ ಗಾಂಧಿ ಅವರ ಅವಧಿಯಲ್ಲಿ ಚೀನಾದೊಂದಿಗೆ ಉತ್ತಮ ಸಂಬಂಧ ಉಳಿಸಿಕೊಂಡು ಬರಲಾಗಿತ್ತು ಎಂದು ತಿಳಿಸಿದರು.

ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿಧಿಸಿದ ಸುಂಕದ ಹೊರೆಯನ್ನು ಚೀನಾ ಸಮರ್ಥವಾಗಿಯೇ ಎದುರಿಸುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಚೀನಾದೊಂದಿಗೆ ರಾಜತಾಂತ್ರಿಕ ಸಂಬಂಧ ಗಟ್ಟಿಗೊಳಿಸುವ ನಿಟ್ಟಿನಲ್ಲಿ ಯೋಚಿಸಬೇಕು ಎಂದು ಸಲಹೆ ನೀಡಿದರು. ಮುಂಬೈನಲ್ಲಿರುವ ಚೀನಾದ ಕಾನ್ಸುಲ್ ಜನರಲ್ ಕಿನ್ ಜೀ ಮಾತನಾಡಿ, ಭಾರತ ಹಾಗೂ ಚೀನಾ ಕಾಲಕಾಲಕ್ಕೆ ಅಗತ್ಯ ಬದಲಾವಣೆಗಳೊಂದಿಗೆ ಬೆಳವಣಿಗೆ ಕಂಡ ದೇಶಗಳು. ಜನಸಂಖ್ಯೆ ಹೆಚ್ಚಿರುವುದು ಎರಡೂ ದೇಶಗಳಿಗೆ ವರದಾನವೇ ಆಗಿದೆ. ನೆಹರೂ ಕಾಲದಿಂದಲೂ ರಾಜತಾಂತ್ರಿಕ ಸಂಬಂಧಗಳು ಗಟ್ಟಿಯಾಗಿದ್ದು ನಿರಂತರವಾಗಿ ಕಾಪಾಡಿಕೊಳ್ಳುವ ವಿಶ್ವಾಸವಿದೆ ಎಂದರು.



ಉದಯವಾಹಿನಿ ಚಿತ್ರ

**ಕರ್ನಾಟಕದಿಂದಲೂ ಉನ್ನತ ಶಿಕ್ಷಣಕ್ಕೆಂದು ಸಹಸ್ರಾರು ವಿದ್ಯಾರ್ಥಿಗಳು ಚೀನಾಕ್ಕೆ ತೆರಳುತ್ತಿದ್ದಾರೆ. ಅಲ್ಲಿಂದಲೂ ಭಾರತಕ್ಕೂ ಬರುತ್ತಾರೆ. ಜ್ಞಾನವೂ ಎರಡೂ ದೇಶಗಳ ಸಂಬಂಧವನ್ನು ಬೆಸೆದಿದೆ.**

**-ಪಿಜಿಆರ್ ಸಿಂಧ್ಯ, ಮಾಜಿ ಸಚಿವ**

## ರಸ್ತೆಯಲ್ಲಿ ನಮಾಜ್ ಮಾಡಲು ಅನುಮತಿ ನಿರಾಕರಣೆ ಕುರಿತು ಪರಿಶೀಲನೆ

• **ಉದಯವಾಹಿನಿ, ಬೆಂಗಳೂರು**


ರಸ್ತೆಯಲ್ಲಿ ನಮಾಜ್ ಮಾಡಲು ಅನುಮತಿ ನೀಡದಿರುವ ಬಗ್ಗೆ ಪರಿಶೀಲನೆ ನಡೆಸಲಾಗುತ್ತದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಖಾಸಗಿ ಸಂಘ ಸಂಸ್ಥೆಗಳು ಸರ್ಕಾರಿ ಜಾಗದಲ್ಲಿ ತಮ್ಮ ಚಟುವಟಿಕೆ ನಡೆಯಬಾರದು ಎಂದು ತೀರ್ಮಾನ ತೆಗೆದುಕೊಂಡಿದೆ. ಸಹಜವಾಗಿಯೇ ಮುಸ್ಲಿಮರಿಗೆ ರಸ್ತೆಯಲ್ಲಿ ನಮಾಜ್ ಮಾಡಲು ಅವಕಾಶ ನಿರಾಕರಿಸಲಾಗುತ್ತಿದೆಯೇ ಎಂದು ಕೇಳಲಾಗುತ್ತಿದೆ.

ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಸರ್ಕಾರ ಒಬ್ಬರಿಗೊಂದು ಮತ್ತೊಬ್ಬರಿಗೆ ಇನ್ನೊಂದು ನಿಯಮ ಮಾಡಲು ಸಾಧ್ಯವಿಲ್ಲ. ರಸ್ತೆಯಲ್ಲಿನ ಚಟುವಟಿಕೆಗಳನ್ನು ನಿಯಂತ್ರಿಸಲು ಪರಿಶೀಲನೆ ನಡೆಸಲಾಗುತ್ತದೆ ಎಂದರು. ಆರ್‌ಎಸ್‌ಎಸ್ ಹೊಸತೇನಲ್ಲ. 100 ವರ್ಷಗಳ ಇತಿಹಾಸ ಹೊಂದಿದೆ. ಅಂದಿನಿಂದಲೂ ದೇಶದಲ್ಲಿ ಗೊಂದಲಗಳಾಗುತ್ತಲೇ ಇದೆ. ಈ ಬಗ್ಗೆ ಪದೇ ಪದೇ ಚರ್ಚೆಗಳಾಗಿವೆ. ಕಾಲಕಾಲಕ್ಕೆ ಸರ್ಕಾರಗಳು ಕ್ರಮಗಳನ್ನು ತೆಗೆದುಕೊಂಡಿವೆ ಎಂದರು. ಜಗದೀಶ್‌ಶೆಟ್ಟರ್ 2013ರಲ್ಲಿ ಮುಖ್ಯಮಂತ್ರಿಯಾಗಿದ್ದಾಗ ಅವರದೇ ಪಕ್ಷದ ಅಂಗ ಸಂಸ್ಥೆಯಾದ ಆರ್‌ಎಸ್‌ಎಸ್‌ನ ಚಟುವಟಿಕೆಗಳಿಗೆ ನಿಯಂತ್ರಣ ಹಾಕಿದ್ದರು. ಕಾಂಗ್ರೆಸ್ ಸರ್ಕಾರ ಆದೇಶ ಹೊರಡಿಸಿದ್ದರೆ, ಗಲಾಟೆ ಮಾಡುತ್ತಾರೆ. ಜಗದೀಶ್ ಶೆಟ್ಟರ್ ಆದೇಶವನ್ನು ಕಂಡೂ ಕಾಣದಂತಿರುತ್ತಾರೆ. ಅನಗತ್ಯ ಪ್ರಚೋದನೆ ಬೇಡ ಎಂದು ನಾವು ಸುಮನಿದ್ದೇವೆ ಎಂದರು. ಭಜರಂಗ ದಳವನ್ನು ನಿಷೇಧ ಮಾಡುವ ಬಗ್ಗೆ ಸದ್ಯಕ್ಕೆ ಯಾವುದೇ ಚರ್ಚೆಗಳು ನಡೆಯುತ್ತಿಲ್ಲ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಆರ್‌ಎಸ್‌ಎಸ್ ಪಥ ಸಂಚಲನದಲ್ಲಿ ಭಾಗವಹಿಸಿದ್ದ ಪಿಡಿಓ ಅವರನ್ನು ಅಮಾನತುಗೊಳಿಸಿರುವ ಕ್ರಮ ಸಮರ್ಥನೀಯ.

ಸರ್ಕಾರಿ ನೌಕರರು ಖಾಸಗಿ ಸಂಸ್ಥೆಗಳ ಚಟುವಟಿಕೆಗಳಲ್ಲಿ ಭಾಗವಹಿಸುವಂತಿಲ್ಲ, ಸದಸ್ಯತ್ವ ಪಡೆಯುವಂತಿಲ್ಲ, ಗೊಂದಲಗಳ ನಡುವೆಯೂ ಪಥ ಸಂಚಲನದಲ್ಲಿ ಭಾಗಿಯಾಗಿರುವುದು ಸೂಕ್ತವಲ್ಲ ಎಂದು ಹೇಳಿದರು. ಖಾಸಗಿ ಸಂಘ ಸಂಸ್ಥೆಗಳ ಚಟುವಟಿಕೆಗಳಿಗೆ ಸರ್ಕಾರಿ ಸ್ವತ್ತುಗಳಲ್ಲಿ ಅವಕಾಶ ಇಲ್ಲ ಎಂದು ಕಳೆದ ಸಂಪುಟದಲ್ಲೇ ತೀರ್ಮಾನ ತೆಗೆದುಕೊಂಡಿದ್ದೇವೆ. ಈ ಬಗ್ಗೆ ನಿನ್ನೆ ಸಂಜೆ ಅಧಿಕೃತ ಆದೇಶ ಪ್ರಕಟಿಸಲಾಗಿದೆ.

ಅದರ ಹಿನ್ನೆಲೆಯಲ್ಲಿ ಕಲಬುರ್ಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನಲ್ಲಿ ಆರ್‌ಎಸ್‌ಎಸ್ ಪಥ ಸಂಚಲನಕ್ಕೆ ಅನುಮತಿ ನೀಡಲಾಗಿಲ್ಲ. ಎಲ್ಲಾ ಸಂಘಟನೆಗಳಿಗೂ ಈ ನಿಯಮ ಅನ್ವಯವಾಗಲಿದ್ದು, ಭೀಮ್ ಆರ್ಮಿ ಅಥವಾ ಯಾವುದೇ ಸಂಘಟನೆ ಇರಲಿ, ನಿಬಂಧನೆಗಳನ್ನು ಅನುಸರಿಸಿ ಅನುಮತಿ ನೀಡಲಾಗುವುದು ಎಂದು ಹೇಳಿದರು.

ಬೆಂಗಳೂರಿನಲ್ಲಿ ರಸ್ತೆ ಗುಂಡಿಗಳನ್ನು ನಾವೇ ಮುಚ್ಚಿದ್ದೇವೆ ಎಂದು ಉದ್ಯಮಿ ಕಿರಣ್ ಮಜುಂದಾರ್ ಷಾ ನೀಡಿರುವ ಹೇಳಿಕೆ ಆಕ್ಷೇಪಾರ್ಹವಾದದ್ದು, ಅವರು ಸಾಕಷ್ಟು ಪ್ರಭಾವಿಯಾಗಿದ್ದಾರೆ. ಅಂತಾರಾಷ್ಟ್ರೀಯ ಮಟ್ಟದಲ್ಲೂ ಗುರುತಿಸಿಕೊಂಡಿದ್ದಾರೆ. ತಮ್ಮ ಹೇಳಿಕೆ ಪರಿಣಾಮ ಏನಾಗುತ್ತದೆ ಎಂಬುದರ ಬಗ್ಗೆ ಅವರು ಗಮನ ಕೊಡಬೇಕು. ಸಮಸ್ಯೆಗಳಿದ್ದರೆ, ಸಿಎಂ ಜೊತೆ ಮಾತನಾಡಿ ಬಗೆ ಹರಿಸಿಕೊಳ್ಳಬೇಕು. ಅದನ್ನು ಬಿಟ್ಟು ಮಾಧ್ಯಮಗಳಲ್ಲಿ ಮಾತನಾಡುವುದು ಸೂಕ್ತವಲ್ಲ ಎಂದರು.



## ರಾಜ್ಯ ಕ್ಷಯರೋಗ ನಿವಾರಣಾ ಸಂಸ್ಥೆ ವಿಲೀನ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ರಾಜ್ಯ ಕ್ಷಯರೋಗ ನಿವಾರಣಾ ಸಂಸ್ಥೆಯು ಸಮರ್ಪಕವಾಗಿ ಕಾರ್ಯಾಚರಣೆ ನಡೆಸದ ಕಾರಣ, ಆರೋಗ್ಯ ಇಲಾಖೆಯ ಕ್ಷಯರೋಗ ವಿಭಾಗದಲ್ಲಿ ವಿಲೀನ ಮಾಡಿ ಆದೇಶ ಹೊರಡಿಸಲಾಗಿದೆ.2024ರ ಡಿಸೆಂಬರ್‌ನಲ್ಲಿ ನಡೆದ ಸಂಸ್ಥೆಯ ವಿಶೇಷ ಸರ್ವಸದಸ್ಯರ ಸಭೆಯಲ್ಲಿಯೇ ವಿಲೀನಗೊಳಿಸುವ ಬಗ್ಗೆ ತೀರ್ಮಾನ ಕೈಗೊಳ್ಳಲಾಗಿತ್ತು. ಅದರಂತೆ ವಿಲೀನ ಮಾಡಲಾಗಿದ್ದು, ಸಂಸ್ಥೆಯ ಆಸ್ತಿ, ಹೊಣೆಗಾರಿಕೆ ಮತ್ತು ಕೆಲಸಗಳನ್ನು ಇಲಾಖೆಯ ಕ್ಷಯರೋಗ ವಿಭಾಗ ನಿರ್ವಹಿಸಲಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಘೋಷಾ ಆಸ್ಪತ್ರೆಯ ಹಿಂಭಾಗದಲ್ಲಿ 40x60 ಚದರ ಅಡಿ ನಿವೇಶನದಲ್ಲಿ ಸಂಸ್ಥೆಯ ಕಟ್ಟಡವಿದೆ. ಎದೆ ಮತ್ತು ಶ್ವಾಸಕೋಶದ ಆರೋಗ್ಯದ ಮೇಲೆ ಗಮನಹರಿಸುವ ಆರೋಗ್ಯ ಸೌಲಭ್ಯಕ್ಕೆ ಈ ಕಟ್ಟಡವನ್ನು ಉಳಿಸಿಕೊಂಡು, ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರವನ್ನಾಗಿ ಪರಿವರ್ತಿಸಲು ಕ್ರಮಕೈಗೊಳ್ಳಬೇಕು ಎಂದು ಹೇಳಲಾಗಿದೆ.

ಸಂಸ್ಥೆಯು ಸುಮಾರು 98 ಲಕ್ಷ ಸ್ಥಿರ ಠೇವಣಿ ಮೊತ್ತವನ್ನು ಹೊಂದಿದ್ದು, ಅದನ್ನು ಬಾಕಿ ವೇತನ ಮತ್ತು ಪಿಂಚಣಿ ಪಾವತಿ, ಕಟ್ಟಡದ ನವೀಕರಣ ಹಾಗೂ ಉಪಕರಣಗಳ ಪೂರೈಕೆಗೆ ಬಳಸಿಕೊಳ್ಳಬಹುದು.

# ಜಾತಿ ಗಣತಿ ದಿನಾಂಕ ಮತ್ತೆ ವಿಸ್ತರಣೆ ಮಾಡಿದ ಸರ್ಕಾರ

**ಶಿಕ್ಷಕರನ್ನ ಹೊರತುಪಡಿಸಿ ಇತರೆ ಇಲಾಖೆಯ ಸಿಬ್ಬಂದಿ ಸಮೀಕ್ಷಾ ಕಾರ್ಯಕ್ಕೆ ಬಳಕೆ, ದೀಪಾವಳಿ ರಜೆ ಬಳಿಕ ಶಾಲೆಗಳು ಎಂದಿನಂತೆ ನಡೆಯಲಿವೆ**

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಕೈಗೊಳ್ಳಲಾಗಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಅ. 31ರವರೆಗೆ ವಿಸ್ತರಿಸಲು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ. ಸಮೀಕ್ಷೆಯನ್ನು ಅ.31 ವರೆಗೂ ವಿಸ್ತರಣೆ ಮಾಡಲಾಗಿದೆ. ಆದರೆ, ಶಿಕ್ಷಕರನ್ನು ಬಳಕೆ ಮಾಡಿಕೊಳ್ಳದಿರಲು ತೀರ್ಮಾನಿಸಲಾಗಿದೆ. ಹೀಗಾಗಿ, ಶಾಲೆಗಳು ಎಂದಿನಂತೆ ನಡೆಯಲಿವೆ. ಸಮೀಕ್ಷೆಗಾಗಿ ದಸರಾ ರಜೆ ವಿಸ್ತರಣೆ ಮಾಡಿಲ್ಲ. ಗೃಹ ಕಚೇರಿ ಕೃಷ್ಣದಲ್ಲಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಭಾನುವಾರ ನಡೆದ ಸಭೆಯ ಬಳಿಕ ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವ ಶಿವರಾಜ್ ಎಸ್ ತಂಗಡಗಿ ಅವರು ಈ ಬಗ್ಗೆ ಮಾಹಿತಿ ನೀಡಿದರು.

ಸಮೀಕ್ಷಾದಾರರಿಗೆ ಮೂರು ದಿನ ರಜೆ ಮುಖ್ಯಮಂತ್ರಿಗಳ ನಿರ್ದೇಶನದಂತೆ ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಅಕ್ಟೋಬರ್ 20, 21, 22 ರಂದು ಸಮೀಕ್ಷೆಯಲ್ಲಿ ಪಾಲ್ಗೊಳ್ಳುವ ಸಿಬ್ಬಂದಿಗೆ ರಜೆ ನೀಡಲಾಗಿದೆ. ಅ.23 ಮೂರರಿಂದ ಸಮೀಕ್ಷೆ ಪುನಃ ಪ್ರಾರಂಭವಾಗಲಿದೆ. ಆಯಾ ಜಿಲ್ಲಾಧಿಕಾರಿಗಳು ಜಿಲ್ಲೆಯಲ್ಲಿನ ವಿವಿಧ ಇಲಾಖೆಯ ಸಿಬ್ಬಂದಿಗಳನ್ನ ಬಳಸಿ ಅಕ್ಟೋಬರ್ 23 ರಿಂದ 31 ರವರೆಗೆ ಸಮೀಕ್ಷೆ ಕಾರ್ಯವನ್ನ ಪೂರ್ಣಗೊಳಿಸಲಿದ್ದಾರೆ ಎಂದು ತಿಳಿಸಿದರು. ಶಾಸಕರ ಮೂಲಕ ಜನತೆಗೆ ಜಾಗೃತಿ ಬೆಂಗಳೂರಿನ ಜನರಲ್ಲಿ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ ಬಗ್ಗೆ ಜಾಗೃತಿ ಮೂಡಿಸುವಂತೆ ಶಾಸಕರಿಗೆ ನಿರ್ದೇಶನ ನೀಡಲು ಮುಖ್ಯಮಂತ್ರಿಗಳು ಸೂಚನೆ ನೀಡಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿಗಳ ಕಚೇರಿಯಿಂದ ಸೂಚನೆ ರವಾನೆಯಾಗಲಿದೆ ಎಂದು ಹೇಳಿದರು. ಜವಾಬ್ದಾರಿ ಸ್ಥಾನದಲ್ಲಿ ಇರುವವರು ತಿಳಿದು ಮಾತನಾಡಲಿ ಸುಧಾಮೂರ್ತಿಯವರು ಸಮೀಕ್ಷೆಯಲ್ಲಿ ಪಾಲ್ಗೊಳ್ಳುವುದಿಲ್ಲ ಎಂಬ ಹೇಳಿಕೆಗೆ ಪ್ರತಿಕ್ರಿಯಿಸಿದ ಸಚಿವರು, ಇನ್ಫೋಸಿಸ್ ಸುಧಾಮೂರ್ತಿ ಅವರು ಸಮಾಜದಲ್ಲಿ ಜವಾಬ್ದಾರಿ ಸ್ಥಾನದಲ್ಲಿ ಇರುವವರು. ಇಂತಹ ಹೇಳಿಕೆ ನೀಡುವ ಬದಲು ಅದರ ಬಗ್ಗೆ ಸೂಕ್ತ ಮಾಹಿತಿಯನ್ನು ಪಡೆದುಕೊಳ್ಳಬೇಕು. ಸರ್ಕಾರ ನಡೆಸುತ್ತಿರುವುದು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ. ಈ ಸಮೀಕ್ಷೆಯಿಂದ ರಾಜ್ಯದ ಪ್ರತಿಯೊಂದು ಸಮುದಾಯದ ಅಥವಾ ಸಮಾಜದ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಹಾಗೂ ಔದ್ಯೋಗಿಕ ಮಾಹಿತಿ ದೊರೆಯಲಿದೆ. ಇದು ಯಾವುದೋ ಹಿಂದುಳಿದ ವರ್ಗ, ಎಸ್ಸಿ, ಎಸ್ ಟಿ ಸಮುದಾಯಕ್ಕೆ ಮಾತ್ರ ಸೀಮಿತವಾದ ಸಮೀಕ್ಷೆಯಲ್ಲ. ದಯವಿಟ್ಟು ಜನರನ್ನ ತಪ್ಪು ದಾರಿಗೆ ಕೊಂಡೊಯ್ಯುವ ಪ್ರಯತ್ನ ಮಾಡಬಾರದು ಎಂದು ತೀಕ್ಷ್ಣವಾಗಿ ಪ್ರತಿಕ್ರಿಸಿದರು.

**ರಾಜ್ಯಾದ್ಯಂತ 95 ರಷ್ಟು ಸಮೀಕ್ಷೆ ಗ್ರೇಟರ್ ಬೆಂಗಳೂರು ಹೊರತುಪಡಿಸಿ ರಾಜ್ಯಾದ್ಯಂತ ಶೇಕಡ 95ರಷ್ಟು ಸಮೀಕ್ಷೆ ಕಾರ್ಯ ಪೂರ್ಣಗೊಂಡಿದ್ದು, ರಾಮನಗರ ಶೇ.86%, ಧಾರವಾಡ ಶೇ.88%, ಬೀದರ್ ಜಿಲ್ಲೆಗಳಲ್ಲಿ ಶೇ 79.46% ಸಮೀಕ್ಷೆ ಕಾರ್ಯ ತುಸು ಕುಂಠಿತವಾಗಿದೆ. ಬೆಂಗಳೂರಿನಲ್ಲಿ ಶೇಕಡ 45ರಷ್ಟು ಸಮೀಕ್ಷೆ ಕಾರ್ಯ ನಡೆದಿದೆ. ಬೆಂಗಳೂರಿನಲ್ಲಿ ತಡವಾಗಿ ಸಮೀಕ್ಷೆ ಪ್ರಾರಂಭವಾದ ಕಾರಣ ಸಮೀಕ್ಷೆ ಕಡಿಮೆಯಾಗಿದೆ. ಕೆಲ ಜಿಲ್ಲೆಗಳಲ್ಲಿ ನೂರರಷ್ಟು ಸಮೀಕ್ಷೆ ಪೂರ್ಣಗೊಂಡಿದೆ. ಬಾಕಿ ಉಳಿದಿರುವ ಜಿಲ್ಲೆಗಳಲ್ಲಿ ಮಾತ್ರ ಸಮೀಕ್ಷೆ ಅಕ್ಟೋಬರ್ 31ರವರೆಗೆ ನಡೆಯಲಿದ್ದು, ಕೆಲ ಜಿಲ್ಲೆಗಳಲ್ಲಿ ಈ ಕಾರ್ಯ ಶೀಘ್ರವೇ ಪೂರ್ಣಗೊಳ್ಳಬಹುದು.**

**-ಸಿದ್ದರಾಮಯ್ಯ, ಸಿಎಂ**



**ದೊಡ್ಡ ಜವಾಬ್ದಾರಿಯಲ್ಲಿರುವವರು ಘನತೆಗೆ ತಕ್ಕಂತೆ ನಡೆದುಕೊಳ್ಳಬೇಕು**

**ಧಾರವಾಡದಲ್ಲಿ ಶೇಕಡವಾರು ಸಮೀಕ್ಷೆ ಕಡಿಮೆಯಾಗಲು ರಾಜಕೀಯ ಕಾರಣಗಳು ಇರಬಹುದೇ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸ್ಥಳೀಯ ಸಂಸದರು ಹಾಗೂ ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ ಅವರು ನಾನು ಸಮೀಕ್ಷೆಯಲ್ಲಿ ಪಾಲ್ಗೊಳ್ಳುವುದಿಲ್ಲ. ನೀವು ಪಾಲ್ಗೊಳ್ಳಬೇಡಿ ಎಂದು ಜನರಿಗೆ ಹೇಳಿದರು. ಇಂತಹ ವರ್ತನೆ ನಿಜಕ್ಕೂ ಸರಿಯಲ್ಲ. ಜವಾಬ್ದಾರಿಯಲ್ಲಿ ಸ್ಥಾನದಲ್ಲಿರುವವರನ್ನು ಜನತೆ ಗಮನಿಸುತ್ತಿರುತ್ತಾರೆ. ಈ ಹಾಗಾದರೆ ನಾವು ಕೇಂದ್ರ ಸರ್ಕಾರ ನಡೆಸುವ ಗಣತಿಯನ್ನ ಭವಿಷ್ಯದಲ್ಲಿ ವಿರೋಧ ಮಾಡಬಹುದೇ? ದೊಡ್ಡ ಜವಾಬ್ದಾರಿಯಲ್ಲಿರುವವರು ಘನತೆಗೆ ತಕ್ಕಂತೆ ನಡೆದುಕೊಳ್ಳಬೇಕು ಎಂದು ಖಾರವಾಗಿ ಪ್ರತಿಕ್ರಿಸಿದರು.**

ಸಂಪುಟ: 05 ಸಂಚಿಕೆ: 216 ಪುಟಗಳು: 08 ಸೋಮವಾರ 20 ಅಕ್ಟೋಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5
UV ಉದಯವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ
ದೀಪಾವಳಿ ವಿಶೇಷಾಂಕ

## ಶಿಷ್ಟಾಚಾರ ಪಾಲಿಸದೆ ಕೇಂದ್ರ ಸಚಿವ ಕುಮಾರಸ್ವಾಮಿಯವರಿಗೆ ಆರೋಪ

• **ಉದಯವಾಹಿನಿ, ಹಾಸನ**

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಹಾಸನಾಂಬ ದರ್ಶನಕ್ಕಾಗಿ ಭೇಟಿ ನೀಡಿದ ವೇಳೆಯಲ್ಲಿ ಜಿಲ್ಲಾಡಳಿತ ಶಿಷ್ಟಾಚಾರ ಪಾಲಿಸಿಲ್ಲ ಎಂದು ಆರೋಪಿಸಿ ಜೆಡಿಎಸ್ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ನೇತೃತ್ವದಲ್ಲಿ ಹಾಸನಾಂಬ ಮುಖ್ಯ ದ್ವಾರದ ಬಳಿ ಬೃಹತ್ ಪ್ರತಿಭಟನೆ ನಡೆಸಲಾಯಿತು. ಜಿಲ್ಲಾಡಳಿತ ವಿರುದ್ಧ ಶಾಸಕ ಸ್ವರೂಪ್ ಪ್ರಕಾಶ್ ನೇತೃತ್ವದಲ್ಲಿ ಮಾಜಿ ಸಚಿವ ಎಚ್.ಕೆ.ಕುಮಾರಸ್ವಾಮಿ, ಮಾಜಿ ಶಾಸಕ ಲಿಂಗೇಶ್, ಮುಖಂಡರಾದ ಮಂಜೇಗೌಡ ಹಾಗೂ ಜೆಡಿಎಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಹಾಸನಾಂಬೆ ದರ್ಶನಕ್ಕೆ ಆಗಮಿಸಿದ್ದ ಕೇಂದ್ರ ಸಚಿವ ಕುಮಾರಸ್ವಾಮಿ ಅವರ ಜೊತೆ ಸ್ಥಳೀಯ ಶಾಸಕ ಸ್ವರೂಪ್ ಪ್ರಕಾಶ್ ಸೇರಿ ಹತ್ತಕ್ಕೂ ಹೆಚ್ಚು ಶಾಸಕರು ಆಗಮಿಸಿದ್ದರು. ಆಗ ಕುಮಾರಸ್ವಾಮಿ ಅವರನ್ನು ಜಿಲ್ಲಾಧಿಕಾರಿಯವರು ಸ್ವಾಗತಿಲಿಲ್ಲ ಎಂಬ ಆರೋಪ ಮಾಡಿದ್ದಾರೆ. ದೇವಾಲಯದ ಅಭಿವೃದ್ಧಿಗೆ ಜನಪ್ರತಿನಿಧಿಗಳು ಕಾರಣ. ಕುಮಾರಸ್ವಾಮಿ ಅವರ ಕೊಡುಗೆಯೂ ಇದೆ. ಬಿಜೆಪಿ-ಜೆಡಿಎಸ್ ಮೈತ್ರಿ ಸರ್ಕಾರದ ಅವಧಿಯಲ್ಲಿ ಎರಡು ಕೋಟಿ ರೂ. ಅನುದಾನ ಕೊಡಲಾಗಿತ್ತು. ಗೋಪುರ ನಿರ್ಮಿಸಲಾಗಿದೆ. ಜಿಲ್ಲೆಯ ರೈತರ ಮಗನಾದ ಕುಮಾರಸ್ವಾಮಿ ಅವರು ದೇವಾಲಯಕ್ಕೆ ಬಂದಾಗ ಜಿಲ್ಲಾಧಿಕಾರಿ, ಉಪ ವಿಭಾಗಾಧಿಕಾರಿಗಳು ಶಿಷ್ಟಾಚಾರದಂತೆ ಗೌರವ ನೀಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

## ಗುತ್ತಿಗೆದಾರರನ್ನು ಬೆದರಿಸುವ ಆಟ ನಡೆಯುವುದಿಲ್ಲ: ಆರ್.ಅಶೋಕ್

• **ಉದಯವಾಹಿನಿ, ಬೆಂಗಳೂರು**

ಗುತ್ತಿಗೆದಾರರ ಮೇಲೆ ಸರ್ಕಾರದ ಬೆದರಿಕೆ ನಡೆಯುವುದಿಲ್ಲ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ. ಗುತ್ತಿಗೆದಾರರು ಬೇಕಾದರೆ ಹೈಕಮಾಂಡ್ ಮುಂದೆ ಹೋಗಲಿ. ಅದಕ್ಕೆ ನಾನೇ ಸಮಯ ಅವಕಾಶ ಕೊಡಿಸುತ್ತೇನೆ ಎಂದು ಡಿ.ಕೆ.ಶಿವ ಕುಮಾರ್ ಹೇಳಿದ್ದರು. ಇದಕ್ಕೆ ತಮ ಎಕ್ಸ್ ಖಾತೆಯಲ್ಲಿ ತಿರುಗೇಟು ನೀಡಿರುವ ಅಶೋಕ್, ಬಾಕಿ ಬಿಲ್ ಕೊಡಿ ಎಂದು ಕೇಳಿದರೆ ಅದು ಧಮ್ಕಿ ಹೇಗೆ ಆಗುತ್ತದೆ ಡಿಸಿಎಂ ಶಿವಕುಮಾರ್ ಅವರೇ? ಬಾಕಿ ಬಿಲ್ ಕೊಡದಿದ್ದರೆ ತಮ ಹಕ್ಕಿಗಾಗಿ ಮುಷ್ಕರ ಮಾಡಬೇಕಾಗುತ್ತದೆ ಎಂದು ಹೇಳುವುದು ಧಮ್ಕಿ ಹೇಗೆ ಆಗುತ್ತದೆ ಎಂದು ಪ್ರಶ್ನಿಸಿದ್ದಾರೆ. ಬಹುಶಃ ಕಾಂಗ್ರೆಸ್‌ನವರು ಜೇಬಿನಲ್ಲಿ ಇಟ್ಟುಕೊಂಡು ಓಡಾಡುವ ಸಂವಿಧಾನ ಪುಸ್ತಕದಲ್ಲಿ ನಾಗರೀಕರಿಗೆ ಮುಷ್ಕರ, ಹೋರಾಟ ಮಾಡುವ ಹಕ್ಕಿಲ್ಲ ಅನ್ನಿಸುತ್ತದೆ. ಆದರೆ ಬಾಬಾಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನದಲ್ಲಿ ನಾಗರಿಕರು, ಗುತ್ತಿಗೆದಾರರು ತಮ ಹಕ್ಕಿಗಾಗಿ ಸರ್ಕಾರವನ್ನು ಪ್ರಶ್ನಿಸಲೂಬಹುದು, ಮುಷ್ಕರ ಮಾಡಬಹುದು, ಹೋರಾಟವನ್ನೂ ಮಾಡಬಹುದು ಎಂದು ಹೇಳಿದ್ದಾರೆ.

## ಭಯ ಹುಟ್ಟಿಸಬಹುದೇ ಹೊರತು ಭರವಸೆ ಮೂಡಿಸಲು ಸಾಧ್ಯವಿಲ್ಲ

• **ಉದಯವಾಹಿನಿ, ಬೆಂಗಳೂರು**

ಕೈಯಲ್ಲಿ ದೊಣ್ಣೆ ಹಿಡಿದು ಜನರಲ್ಲಿ ಭಯ ಹುಟ್ಟಿಸಬಹುದೇ ಹೊರತು ಭರವಸೆ ಮೂಡಿಸಲು ಸಾಧ್ಯವಿಲ್ಲ ಎಂದು ಕಾಂಗ್ರೆಸ್‌ನ ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ತಿರುಗೇಟು ನೀಡಿದ್ದಾರೆ. ತಮ ಸಾಮಾಜಿಕ ಜಾಲತಾಣದಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅವರು, ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಅವರಿಗೆ ತಿರುಗೇಟು ನೀಡಿದ್ದಾರೆ. ದೇಶದ ಜನರಲ್ಲಿ ಆತವಿಶ್ವಾಸ, ಧೈರ್ಯ, ಭರವಸೆ ಮೂಡಿಸಿರುವುದು ಬಾಬಾ ಸಾಹೇಬರು ನೀಡಿರುವ ಸಂವಿಧಾನದಿಂದ ಮಾತ್ರ. ಪಥ ಸಂಚಲನ ಸಾಗುವ ದ್ವೇಷದ ಬೀದಿಯಲ್ಲಿ ಪ್ರೀತಿ ಹುಟ್ಟುವುದಾದರೂ ಹೇಗೆ? ದೊಣ್ಣೆ, ಲಾಠಿ, ಬೂಟಿನ ಪಥ ಸಂಚಲನದಿಂದ ಸಮಾಜದಲ್ಲಿ ಭಯ, ದ್ವೇಷದ ವಾತಾವರಣ ಸೃಷ್ಟಿಸಲಾಗುತ್ತಿದೆ ಎಂದಿದ್ದಾರೆ.

## ರಾಜ್ಯದಲ್ಲಿ ಇನ್ನೊಂದು ವಾರ ಮಳೆ ಮುಂದುವರಿಕೆ

• **ಉದಯವಾಹಿನಿ, ಬೆಂಗಳೂರು**

ವಾತಾವರಣದಲ್ಲಿ ಸಾಕಷ್ಟು ಬದಲಾವಣೆಗಳಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಮಳೆ ಪ್ರಮಾಣ ಹೆಚ್ಚಾಗಲಿದ್ದು, ವಾರಾಂತ್ಯದವರೆಗೆ ಮುಂದುವರೆಯುವ ಸಾಧ್ಯತೆಗಳಿವೆ. ಕಳೆದ ಮೂರು ನಾಲ್ಕು ದಿನಗಳಿಂದ ರಾಜ್ಯದ ಕರಾವಳಿ, ಮಲೆನಾಡು ಹಾಗೂ ದಕ್ಷಿಣ ಒಳನಾಡಿನ ಹಲವು ಕಡೆಗಳಲ್ಲಿ ಮಳೆಯಾಗುತ್ತಿದೆ. ರಾಜಧಾನಿ ಬೆಂಗಳೂರು ಸೇರಿದಂತೆ ಹಲವೆಡೆ ನಿನ್ನೆ ಸಾಧಾರಣ ಮಳೆಯಾಗಿದೆ. ಅರಬ್ಬೀ ಸಮುದ್ರದಲ್ಲಿ ಹಾಗೂ ಬಂಗಾಳ ಕೊಲ್ಲಿಯಲ್ಲಿ ಮೇಲ್ಮೈ ಸುಳಿಗಾಳಿ ಉಂಟಾಗಿರುವ ಪರಿಣಾಮದಿಂದ ರಾಜ್ಯದಲ್ಲಿ ಭಾಗಶಃ ಮೋಡ ಕವಿದ ವಾತಾವರಣ ಕಂಡು ಬರುತ್ತಿದ್ದು, ಆಗಾಗ್ಗೆ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗುತ್ತಿದೆ. ಹವಾಮಾನ ಮುನ್ಸೂಚನೆ ಪ್ರಕಾರ ಅ.25ರವರೆಗೆ ಮಳೆ ಮುಂದುವರೆಯಲಿದೆ. ಮುಂಗಾರು ಮಾರುತಗಳು ಮರಳಿದ್ದು, ಹಿಂಗಾರು ಮಾರುತಗಳು ಕ್ರಿಯಾಶೀಲವಾಗಿರುವ ಹಿನ್ನಲೆಯಲ್ಲಿ ವಾತಾವರಣದಲ್ಲಿ ಹಲವು ಬದಲಾವಣೆಗಳಾಗುತ್ತಿವೆ. ಇದರ ಪರಿಣಾಮದಿಂದ ರಾಜ್ಯದಲ್ಲಿ ಮಳೆಯಾಗುತ್ತಿದೆ ಎಂದು ಹವಾಮಾನ ತಜ್ಞರು ತಿಳಿಸಿದ್ದಾರೆ.

## ಪಥಸಂಚಲನಕ್ಕೆ ಹೈ ಅನುಮತಿ ಹರ್ಷ ವ್ಯಕ್ತಪಡಿಸಿದ ಬಿವೈವಿ

• **ಉದಯವಾಹಿನಿ, ಬೆಂಗಳೂರು**

ಚಿತ್ತಾಪುರದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಪಥಸಂಚಲನಕ್ಕೆ ಅನುಮತಿ ನೀಡಿದ ಘನ ಉಚ್ಚ ನ್ಯಾಯಾಲಯದ ತೀರ್ಪು ಜನತಂತ್ರದ ವಿಜಯ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹರ್ಷ ವ್ಯಕ್ತಪಡಿಸಿದ್ದಾರೆ. ಚಿತ್ತಾಪುರದಲ್ಲಿ ನ.2ರಂದು ಆರ್‌ಎಸ್‌ಎಸ್ ಪಥ ಸಂಚಲನಕ್ಕೆ ಕಲಬುರಗಿ ಸಂಚಾರಿ ಪೀಠ ಅನುಮತಿ ನೀಡಿರುವುದಕ್ಕೆ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಅವರು, ಪ್ರಜಾತಂತ್ರದ ಹಕ್ಕು ಕಸಿಯಲು ಹೊರಟ ಕಾಂಗ್ರೇಸ್ ಸರ್ಕಾರಕ್ಕೆ ಉಚ್ಚ ನ್ಯಾಯಾಲಯ ಚಾಟಿ ಬೀಸಿ ಸಂವಿಧಾನದ ಘನತೆಯನ್ನು ಎತ್ತಿ ಹಿಡಿದಿದೆ ಎಂದು ಹೇಳಿದರು. ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥಸಂಚಲನ ನಿರ್ಬಂಧಿಸಲು ಹೊರಟವರಿಗೆ ಮುಖಭಂಗವಾಗಿದೆ. ನ್ಯಾಯಾಲಯದ ತೀರ್ಪು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರ್ವಾಧಿಕಾರಿ ಆಡಳಿತ ನಡೆಸಲು ಅವಕಾಶವಿಲ್ಲ ಎಂಬ ಸ್ಪಷ್ಟ ಸಂದೇಶ ಸಾರಿದೆಯಲ್ಲದೇ, ದಿನಬೆಳಗಾದರೆ ಸಂವಿಧಾನದ ಬಗ್ಗೆ ಬೊಗಳೆ ಮಾತನಾಡುವವರಿಗೆ ತಕ್ಕ ಪಾಠ ಹೇಳಿದೆ ಎಂದು ತಿರುಗೇಟು ನೀಡಿದ್ದಾರೆ.

# ಆರ್‌ಎಸ್‌ಎಸ್ ಸಂಘ ಖರ್ಗೆ ಮುಖಭಂಗ

### ಸಚಿವ ಖರ್ಗೆ ಹೈ ಚಾಟಿ ಚಿತ್ತಾಪುರದಲ್ಲಿ RSS ಪಥಸಂಚಲನ


• **ಉದಯವಾಹಿನಿ, ಬೆಂಗಳೂರು**

ಚಿತ್ತಾಪುರದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಪಥಸಂಚಲನಕ್ಕೆ ಅನುಮತಿ ನೀಡಿದ ಘನ ಉಚ್ಚ ನ್ಯಾಯಾಲಯದ ತೀರ್ಪು ಜನತಂತ್ರದ ವಿಜಯವಾಗಿದೆ ಎಂದು ಬಿಜೆಪಿ ಭಾನುವಾರ ಹೇಳಿದೆ. ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು, ಚಿತ್ತಾಪುರದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಪಥಸಂಚಲನಕ್ಕೆ ಅನುಮತಿ ನೀಡಿದ ಘನ ಉಚ್ಚ ನ್ಯಾಯಾಲಯದ ತೀರ್ಪು ಜನತಂತ್ರದ ವಿಜಯವಾಗಿದೆ. ಪ್ರಜಾತಂತ್ರದ ಹಕ್ಕು ಕಸಿಯಲು ಹೊರಟ ಕಾಂಗ್ರೇಸ್ ಸರ್ಕಾರಕ್ಕೆ ಉಚ್ಚ ನ್ಯಾಯಾಲಯವು ಚಾಟಿಯನ್ನು ಬೀಸಿ ಸಂವಿಧಾನದ ಘನತೆಯನ್ನು ಎತ್ತಿ ಹಿಡಿದಿದೆ ಎಂದು ಹೇಳಿದ್ದಾರೆ.

ಚಿತ್ತಾಪುರದಲ್ಲಿ ಆರ್'ಎಸ್‌ಎಸ್ ಪಥಸಂಚಲನ ನಿರ್ಬಂಧಿಸಲು ಹೊರಟವರಿಗೆ ಮುಖಭಂಗವಾಗಿದೆ. ಇಂದಿನ ನ್ಯಾಯಾಲಯದ ತೀರ್ಪು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರ್ವಾಧಿಕಾರಿ ಆಡಳಿತ ನಡೆಸಲು ಅವಕಾಶವಿಲ್ಲ ಎಂಬ ಸ್ಪಷ್ಟ ಸಂದೇಶ ಸಾರಿದೆಯಲ್ಲದೇ, ದಿನಬೆಳಗಾದರೆ ಸಂವಿಧಾನದ ಬಗ್ಗೆ ಬೊಗಳೆ ಮಾತನಾಡುವವರಿಗೆ ತಕ್ಕ ಪಾಠ ಹೇಳಿದೆ. ಸಾಂಸ್ಕೃತಿಕ ಹಾಗೂ ಸಾರ್ವಜನಿಕ ಜಾಗೃತಿ ಕಾರ್ಯಕ್ರಮಗಳಿಗೆ ಕಾನೂನು ಸುವ್ಯವಸ್ಥೆಯ ಷರತ್ತು ವಿಧಿಸಿ ಅನುಮತಿ ನೀಡಬೇಕಾಗಿರುವುದು ಸರ್ಕಾರದ ಕರ್ತವ್ಯ, ಆದರೆ ಕಾನೂನು ಸುವ್ಯವಸ್ಥೆಯ ಹೆಸರಿನಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಉಸಿರುಗಟ್ಟಿಸಲು ಹೋದರೆ ದೇಶದ ಸಂವಿಧಾನ ಅದಕ್ಕೆ ಅವಕಾಶ ಕೊಡುವುದಿಲ್ಲ ಎಂಬ ಸಂದೇಶ ಇಂದಿನ ತೀರ್ಪಿನ ಮೂಲಕ ರವಾನೆಯಾಗಿದೆ, ರಾಷ್ಟ್ರಭಕ್ತ ಸಂಘಟನೆಗಳನ್ನು ಮೆಟ್ಟಿ ನಿಲ್ಲುವ ಕಾಂಗ್ರೇಸ್‌ನ ಕುಟಿಲ ನೀತಿಯು ನ್ಯಾಯಾಲಯದ ತೀರ್ಪಿನಿಂದ ನಿಷ್ಕ್ರಿಯಗೊಂಡಂತಾಗಿದೆ ಎಂದು ತಿಳಿಸಿದ್ದಾರೆ.

ಮತ್ತೊಂದು ಪೋಸ್ಟ್‌ನಲ್ಲಿ ಚಿತ್ತಾಪುರದಲ್ಲಿ ಸಂವಿಧಾನದ ಹೆಸರಿನಲ್ಲಿ ಬೊಗಳೆ ಬಿಡುವವರಿಂದಲೇ ಸಾಂವಿಧಾನಿಕ ಹಕ್ಕು ಕಸಿಯಲಾಗುತ್ತಿದೆ. ರಾಷ್ಟ್ರೀಯ ಸ್ವಯಂಸೇವಕ ಸಂಘದ ಶತಮಾನೋತ್ಸವದ ಸಂಭ್ರಮಾಚರಣೆಗೆ ತಹಶೀಲ್ದಾರರ ಮೂಲಕ 12 ಮಾಹಿತಿ ಹಾಗೂ ದಾಖಲೆಗಳನ್ನು ಸಲ್ಲಿಸಿಲ್ಲವೆಂದು ಅನುಮತಿ ನಿರಾಕರಿಸಿರುವ ಪರಿ ಉತ್ತರ ಕೋರಿಯಾದ ತಿಕ್ಕಲು ಸರ್ವಾಧಿಕಾರಿ ಕಿಂಗ್ ಜಾಂಗ್ ಉನ್ ಆಡಳಿತ ವೈಖರಿಯನ್ನು ನೆನಪಿಸುತ್ತಿದೆ. ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ದೇಶದ ಮೇಲೆ ತುರ್ತು ಪರಿಸ್ಥಿತಿ ಹೇರಿದ್ದ ಕಾಂಗ್ರೇಸ್ ಪಕ್ಷದ ಕರಾಳ ಇತಿಹಾಸ ಅತ್ಯಂತ ಪ್ರಿಯವಾಗಿರುವಂತಿದೆ, ಈ ಕಾರಣಕ್ಕಾಗಿಯೇ ಕಲಬುರಗಿ ಜಿಲ್ಲೆಯಲ್ಲಿ ತುರ್ತುಪರಿಸ್ಥಿತಿ ನೆನಪಿಸುವ ರೀತಿಯ ಆಡಳಿತವನ್ನು ಜಾರಿಗೆ ತರಲು ಹೊರಟಿದ್ದಾರೆ, ಇದಕ್ಕಾಗಿ ಚಿತ್ತಾಪುರವನ್ನು ಚಿಮ್ಮುವ ಹಲಗೆಯಂತೆ ಪ್ರಯೋಗಿಸುತ್ತಿದ್ದಾರೆ.






**ಸರ್ಕಾರದ ವಾದ ಮತ್ತು ಹೈಕೋರ್ಟ್ ನಿರ್ದೇಶನ**

ವಿಚಾರಣೆ ವೇಳೆ ಸರ್ಕಾರದ ಪರ ವಕೀಲರು, ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ, ಹಲವು ಸಂಘಟನೆಗಳು ಒಂದೇ ದಿನ, ಒಂದೇ ಸ್ಥಳ ಮತ್ತು ಒಂದೇ ಮಾರ್ಗದಲ್ಲಿ ರ್‍ಯಾಲಿ ನಡೆಸಲು ಅವಕಾಶ ನೀಡುವುದು ಸೂಕ್ತವಲ್ಲ ಎಂದು ನ್ಯಾಯಪೀಠಕ್ಕೆ ಮನವರಿಕೆ ಮಾಡಿದರು. ಈ ವಾದವನ್ನು ಪರಿಗಣಿಸಿದ ನ್ಯಾಯಾಲಯ, ಎರಡೂ ಸಂಘಟನೆಗಳಿಗೆ ಪ್ರತ್ಯೇಕ ದಿನಾಂಕಗಳನ್ನು ನಿಗದಿಪಡಿಸುವಂತೆ ಸರ್ಕಾರಕ್ಕೆ ತಿಳಿಸಿತು. ಅರ್ಜಿದಾರರು ಇಂದೇ ಪಥಸಂಚಲನದ ಮಾರ್ಗವನ್ನು ಸ್ಪಷ್ಟಪಡಿಸಿ ಜಿಲ್ಲಾಡಳಿತ ಮತ್ತು ತಾಲ್ಲೂಕು ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್‌ಗೆ ಹೊಸದಾಗಿ ಮನವಿ ಸಲ್ಲಿಸಬೇಕು. ಆ ಮನವಿಯನ್ನು ಪರಿಗಣಿಸಿ, ಜಿಲ್ಲಾ ಮತ್ತು ತಾಲ್ಲೂಕು ಆಡಳಿತವು ಕಾನೂನು ಪ್ರಕಾರ ಕ್ರಮ ಕೈಗೊಂಡು ನ್ಯಾಯಾಲಯಕ್ಕೆ ವರದಿ ಸಲ್ಲಿಸಬೇಕು.

**ಹೊಸದಾಗಿ ಅರ್ಜಿ ಸಲ್ಲಿಸುವಂತೆ ಹೈಕೋರ್ಟ್ ಸೂಚನೆ**

### ವಾದ-ಪ್ರತಿವಾದದ ಪ್ರಮುಖಾಂಶಗಳು

**ಅರ್ಜಿದಾರರಾದ ಆರ್‌ಎಸ್‌ಎಸ್ ಕಲಬುರಗಿ ಜಿಲ್ಲಾ ಪ್ರಮುಖ ಅಶೋಕ್ ಪಾಟೀಲ್ ಪರವಾಗಿ ಹಿರಿಯ ವಕೀಲ ಅರುಣ್ ಶ್ಯಾಮ್ ವಾದ ಮಂಡಿಸಿದರು. ನಾವು ಅಕ್ಟೋಬರ್ 13ರಂದೇ ಪೊಲೀಸರಿಗೆ ಮಾಹಿತಿ ನೀಡಿದ್ದೆವು ಮತ್ತು ಅ.17ರಂದು ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್‌ಗೆ ಅರ್ಜಿ ಸಲ್ಲಿಸಿದ್ದೆವು. ಆದರೆ, ಕೊನೆಯ ಕ್ಷಣದಲ್ಲಿ ಅನುಮತಿ ನಿರಾಕರಿಸಲಾಗಿದೆ, ಎಂದು ವಾದಿಸಿದರು. ಈ ವೇಳೆ, ಯಾವುದೇ ಘೋಷಣೆ ಕೂಗದೆ, ಶಾಂತಿಯುತವಾಗಿ ನಡೆಯಲು ಅನುಮತಿ ಅಗತ್ಯವೇ..? ಯಾವ ಕಾನೂನಿನ ಅಡಿಯಲ್ಲಿ ಅನುಮತಿ ಪಡೆಯಬೇಕು? ಎಂದು ಹೈಕೋರ್ಟ್ ಪ್ರಶ್ನಿಸಿತು. ಇದಕ್ಕೆ ಉತ್ತರಿಸಿದ ವಕೀಲರು, ಇಂತಹ ವಿಚಾರಗಳಿಗೆ ಸ್ಪಷ್ಟ ಕಾನೂನು ಇಲ್ಲ ಎಂದು ತಿಳಿಸಿದರು.**

### ಸೇಡಂನಲ್ಲಿ ಗಣವೇಷಧಾರಿಗಳು ಪೊಲೀಸರ ವಶಕ್ಕೆ

ಬೆಂಗಳೂರು ದಕ್ಷಿಣ ಜಿಲ್ಲೆಯ ಚನ್ನಪಟ್ಟಣದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘ ತನ್ನ ಶಕ್ತಿ ಪ್ರದರ್ಶನ ಮಾಡಿದೆ. ನಗರದ ಪ್ರಮುಖ ರಸ್ತೆಗಳಲ್ಲಿ ನಡೆದ ಆರ್‌ಎಸ್‌ಎಸ್ ಪಥ ಸಂಚಲನದಲ್ಲಿ ಕಾಂಗ್ರೆಸ್ ಶಾಸಕ ಸಿ.ಪಿ ಯೋಗೇಶ್ವರ್ ಬೆಂಬಲಿಗರು ಭಾಗಿಯಾಗಿರುವುದು ಎಲ್ಲರ ಗಮನ ಸೆಳೆಯಿತು. ಮತ್ತೊಂದೆಡೆ ಕಲಬುರ್ಗಿ ಜಿಲ್ಲೆ ಸೇಡಂನಲ್ಲಿ ಆರ್‌ಎಸ್‌ಎಸ್ ಪಥ ಸಂಚಲನ ಹೊರಟಿದ್ದ ನೂರಾರು ಗಣವೇಷಧಾರಿಗಳನ್ನು ಅರ್ಧ ದಾರಿಯಲ್ಲೇ ತಡೆದು ಪೊಲೀಸರು ವಶಕ್ಕೆ ಪಡೆದಿರುವ ಘಟನೆ ನಡೆದಿದೆ. ಚನ್ನಪಟ್ಟಣ ನಗರದಲ್ಲಿ ನಡೆದ ಆರ್‌ಎಸ್‌ಎಸ್ ಪಥ ಸಂಚಲನದಲ್ಲಿ ಪುಟ್ಟ ಮಕ್ಕಳು ಸೇರಿದಂತೆ ಸಾವಿರಾರು ಕಾರ್ಯಕರ್ತರು ಭಾಗಿಯಾಗಿದ್ದರು. ನಗರದ ಕೊಲ್ಲಾಪುರದಮ್ಮನ ದೇವಸ್ಥಾನದಿಂದ ಶುರುವಾದ ಪಥ ಸಂಚಲನ ಎಂಬ ಕಾರ್ಯವು ಎಂಜಿ ರಸ್ತೆ, ಜೆಸಿ ರಸ್ತೆ ಮೂಲಕ ಸಾಗಿತು. ಆರ್‌ಎಸ್‌ಎಸ್ ಗಣವೇಷ ತೊಟ್ಟು ಪಥ ಸಂಚಲನದಲ್ಲಿ ಭಾಗವಹಿಸಿದ ಶಾಸಕ ಸಿ.ಪಿ ಯೋಗೇಶ್ವರ್ ಬೆಂಬಲಿಗರು ಗೀತೆ ಹಾಡುವ ಮೂಲಕ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಟಕ್ಕರ್ ಕೊಟ್ಟಿದ್ದಾರೆ. ಪೊಲೀಸರ ಬಿಗಿ ಭದ್ರತೆಯಲ್ಲಿ ಪಥ ಸಂಚಲನ ಯಶಸ್ವಿಯಾಗಿ ನಡೆದಿದೆ.













ಕಂಪ್ಯೂಟರ್ ಮತ್ತು ಮೊಬೈಲ್ ಬಳಕೆ ಹೆಚ್ಚಾಗಿರಿಂದ ಕೆಟ್ಟು ಹೋದ ಈ ವಸ್ತುಗಳಿಂದ ಮನೆಗಳಲ್ಲಿ ಇ-ತ್ಯಾಜ್ಯ ಹೆಚ್ಚಾಗಿ ಉತ್ಪತ್ತಿಯಾಗುತ್ತಿದೆ

# ಅರಣ್ಯ ಒತ್ತುವರಿ ಮಾಡಿದರೆ ಕಠಿಣ ಕ್ರಮ: ಈಶ್ವರ ಖಂಡ್ರೆ

• ಉದಯವಾಹಿನಿ ಕಲಬುರಗಿ

ನೈಸರ್ಗಿಕ ಸಂಪತನ್ನು ಹಿತ-ಮಿತವಾಗಿ ಬಳಕೆ ಮಾಡದೆ ಮಾನವ ದುರಾಸೆಯಿಂದ ಅವ್ಯಾಹತವಾಗಿ ಬಳಕೆ ಮಾಡಿದ ಪರಿಣಾಮ ಇಂದು ಎಲ್ಲೆಡೆ ನೀರು, ಆಹಾರ, ಗಾಳಿ ಮಲೀನವಾಗಿ ನಾನಾ ಆರೋಗ್ಯ ಸಮಸ್ಯೆಗೆ ಕಾರಣವಾಗುತ್ತಿದೆ. ಪರಿಸರ ಸಮತೋಲನ ಕಾಪಾಡುವುದು ಅತೀ ಅವಶ್ಯಕವಾಗಿದೆ. ಈ ನಿಟ್ಟಿನಲ್ಲಿ ಯಾರಾದರು ಅರಣ್ಯ ಒತ್ತುವರಿ ಮಾಡಿದರೆ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ್ ಬಿ. ಖಂಡ್ರೆ ಹೇಳಿದರು.

ಕಲಬುರಗಿ ನಗರದ ರಿಂಗ್ ರಸ್ತೆಯ ಕೆ.ಸಿ.ಟಿ. ಇಂಜನಿಯರಿಂಗ್ ಕಾಲೇಜು ಮೈದಾನದಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲಾಡಳಿತ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇವುಗಳ ಸಹಯೋಗದಲ್ಲಿ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಗೊಂಡು 50 ವರ್ಷಗಳಾದ ಹಿನ್ನೆಲೆಯಲ್ಲಿ ಸುವರ್ಣ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಇಂದು ವಿಶ್ವಕ್ಕೆ ಪರಿಸರ ಸಮತೋಲನ ಕಾಪಾಡುವುದೇ ದೊಡ್ಡ ಸವಾಲಾಗಿದೆ. ಕೋವಿಡ್ ಮಹಾಮಾರಿಯಲ್ಲಿ ಆಮ್ಲಜನಕ ಕೊರತೆಯಿಂದ ಲಕ್ಷಾಂತರ ಜನ ಸಾವನಪ್ಪಿರುವ ಕರಾಳ ಘಟನೆ ಕಣ್ಮುಂದಿದೆ ಎಬುದನ್ನು ಯಾರು ಮರೆಯಬಾರದು. ಪರಿಸರ ಉಳಿದರೆ ಮಾತ್ರ ಭವಿಷ್ಯದ ಜೀವನ ಎಂಬುದನ್ನು ಅರಿಯಬೇಕು ಎಂದರು.

ಕಲಬುರಗಿಯಲ್ಲಿ ಈಗಾಗಲೆ ಲುಂಬಿನಿ ಉದ್ಯಾನವನ ಸ್ಥಾಪಿಸಲಾಗಿದೆ. 33 ಕೋಟಿ ರೂ. ವೆಚ್ಚದಲ್ಲಿ ಚಿತ್ತಾಪುರ ತಾಲ್ಲೂಕಿನ ಮಾಡಬೂಳದಲ್ಲಿ ಪ್ರಾಣಿ ಸಂಗ್ರಹಾಲಯ ಸ್ಥಾಪಿಸಲಾಗುತ್ತಿದೆ. ಹುಲಿ, ಸಿಂಹ ಸೇರಿದಂತೆ ಅನೇಕ ವನ್ಯಜೀವಿಗಳನ್ನು ಇಲ್ಲಿ ಕಾಣಬಹುದಾಗಿದೆ. ಚಿಂಚೋಳಿಯ ಚಂದ್ರಂಪಳ್ಳಿಯಲ್ಲಿ ಟ್ರೆಕ್ಕಿಂಗ್ ಆರಂಭಿಸಲಾಗಿದೆ ಎಂದ ಅವರು, ಬೀದರ ಜಿಲ್ಲೆಯಲ್ಲಿ ಈ ವರ್ಷ ದಾಖಲೆ ಪ್ರಮಾಣದಲ್ಲಿ ಸಸಿ ನೆಡಲಾಗಿದೆ ಎಂದರು.


ಉದಯವಾಹಿನಿ ಚಿತ್ರ

**ಗುಣಮಟ್ಟದ ವಾಯು, ನೀರು ಉಳಿಸಿಕೊಳ್ಳುವುದು ಅತ್ಯಗತ್ಯ:** ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ.ಎಂ. ನರೇಂದ್ರಸ್ವಾಮಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಪರಿಸರವನ್ನು ಉಳಿಸಿಕೊಳ್ಳಬೇಕಾದುದು ಅತ್ಯಂತ ಅಗತ್ಯ ಕೆಲಸವಾಗಿದೆ. ಗುಣಮಟ್ಟದ ವಾಯು , ಗುಣಮಟ್ಟದ ನೀರು ಇಲ್ಲದ ಭವಿಷ್ಯವನ್ನು ಊಹಿಸಿಕೊಳ್ಳಲು ಸಾಧ್ಯವಿಲ್ಲ ಎಂದರು.

ಕಲಬುರಗಿ ಜಿಲ್ಲೆಯಲ್ಲಿ ಹೆಚ್ಚಿನ ಸಿಮೆಂಟ್ ಕಾರ್ಖಾನೆಗಳಿವೆ. ಪಕ್ಕದ ಯಾದಗಿರಿಯಲ್ಲಿ ಫಾರ್ಮಾ ಫ್ಯಾಕ್ಟರಿಗಳಿದ್ದು, ಈ ಕೈಗಾರಿಕೆಗಳು ಬಿಡುತ್ತಿರುವ ನೀರಿನಿಂದ ಆಗುತ್ತಿರುವ ಜಲ ಮಾಲಿನ್ಯ ಮತ್ತು ಹೊಗೆಯಿಂದ ಆಗುತ್ತಿರುವ ವಾಯು ಮಾಲಿನ್ಯದ ಬಗ್ಗೆ ಮಂಡಳಿಯ ಪ್ರಾದೇಶಿಕ ಕಚೇರಿಗಳು ನಿಗಾ ಇಟ್ಟಿವೆ. ಮತ್ತೊಮ್ಮೆ ತಾವು ಕಲಬುರಗಿಗೆ ಬಂದು ಈ ಕೈಗಾರಿಕಗಳಿಗೆ ಭೇಟಿ ನೀಡಿ ಪರಿಶೀಲಿಸುವೆ. ಪ್ಲಾಸ್ಟಿಕ್ ಮುಕ್ತ ಕಲಬುರಗಿ ನಮ್ಮ ಗುರಿಯಾಗಿದೆ. ಪರಿಸರ ಉಳಿದರೆ ಮಾತ್ರ ಭವಿಷ್ಯ ಉಳಿಯುವುದು ಎಂಬುದನ್ನು ಸತ್ಯ ಎಲ್ಲರು ಅರಿಯಬೇಕಿದೆ.

> **ಇತ್ತೀಚೆಗೆ ಕಂಪ್ಯೂಟರ್ ಮತ್ತು ಮೊಬೈಲ್ ಬಳಕೆ ಹೆಚ್ಚಾಗಿರಿಂದ ಕೆಟ್ಟು ಹೋದ ಈ ವಸ್ತುಗಳಿಂದ ಮನೆಗಳಲ್ಲಿ ಇ-ತ್ಯಾಜ್ಯ ಹೆಚ್ಚಾಗಿ ಉತ್ಪತ್ತಿಯಾಗುತ್ತಿದೆ. ಈ ಕುರಿತು ಇದನ್ನು ಮರುಬಳಕೆ ಅಥವಾ ವೈಜ್ಞಾನಿಕ ವಿಲೇವಾರಿಗೆ ಚಿಂತನೆ ನಡೆದಿದೆ. ಇದಲ್ಲದೆ ಆಸ್ಪತ್ರೆಗಳಲ್ಲಿ ಉತ್ಪತ್ತಿಯಾಗುವ ವೈದ್ಯಕೀಯ ಘನತ್ಯಾಜ್ಯ ಎಲ್ಲೆಂದಲ್ಲಿ ಬಿಸಾಡಿದಲ್ಲಿ ಅದು ಪ್ರಾಣಿಗಳು ಮತ್ತು ಕಸ ಸಂಗ್ರಹಿಸುವ ಪೌರ ಕಾರ್ಮಿಕರ ಜೀವಕ್ಕೆ ಆಪತ್ತು ಎದುರಾಗುತ್ತದೆ. ಹೀಗಾಗಿ ಆಸ್ಪತ್ರೆಗಳು ವೈದ್ಯಕೀಯ ಘನತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಬೇಕು.**
> -ಈಶ್ವರ ಖಂಡ್ರೆ

ಇದಲ್ಲದೆ ನದಿ ನೀರಿನ ಮಾಲಿನ್ಯವನ್ನು ಮಾಪನ ಮಾಡುವುದಕ್ಕಾಗಿ ಪ್ರತಿ ತಿಂಗಳು ನದಿ ನೀರಿನ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆ ಮಾಡಲಾಗುತ್ತದೆ. ಜಿಲ್ಲೆಯ ಅಫಜಲಪೂರ ತಾಲ್ಲೂಕಿನ ಗಾಣಗಾಪೂರದಲ್ಲಿ ಹರಿಯುವ ಭೀಮಾ ನದಿ ನೀರಿನ ಗುಣಮಟ್ಟವನ್ನು ತಪಾಸಿಸುವುದಕ್ಕಾಗಿ ಉಪಕರಣ ಅಳವಡಿಸಲಾಗಿದೆ.

ಮಾಜಿ ಪ್ರಧಾನಿ ದಿವಂಗತ ಇಂದಿರಾ ಗಾಂಧಿ 1974ರಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅಧೀನದಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಗಳನ್ನು ಸ್ಥಾಪಿಸಿ ಮಾಲಿನ್ಯ ನಿಯಂತ್ರಣಕ್ಕೆ ಮುನ್ನುಡಿ ಬರೆದರು.

### 100 ಕೋಟಿ ರೂ. ಮೊತ್ತದ ಅರಣ್ಯ ಆವಿಷ್ಕಾರಕ್ಕೆ ಅನುಮೋದನೆ

**ಮುಂದಿನ 15 ದಿನದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಡಿಮೆ ಅರಣ್ಯ ಪ್ರದೇಶದ 5 ಜಿಲ್ಲೆಗಳಲ್ಲಿ ಅರಣ್ಯ ಇಲಾಖೆ ಮತ್ತು ಕೆ.ಕೆ.ಆರ್.ಡಿ.ಬಿ ಮಂಡಳಿಯ 50-50 ಯೊಜನೆಯಡಿ 100 ಕೋಟಿ ರೂ. ಮೊತ್ತದ ಅರಣ್ಯ ಆವಿಷ್ಕಾರ ಕಾರ್ಯಕ್ರಮದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ ಅರಣ್ಯೀಕರಣ ಕೆಲಸ ಪ್ರಾರಂಭಿಸಲಾಗುವುದು. ಇದರಲ್ಲಿ ಹೆಚ್ಚಿನ ಬಿಸಿಲಿಗೆ ಖ್ಯಾತಿಯಾಗಿರುವ ಕಲಬುರಗಿಯಲ್ಲಿಯೆ 25 ಕೋಟಿ ರೂ. ಖರ್ಚು ಮಾಡಿ ಸೂರ್ಯ ನಗರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಈಶ್ವರ ಬಿ. ಖಂಡ್ರೆ ತಿಳಿಸಿದರು.**

ಈಗ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ 50 ವರ್ಷ ಪೂರೈಸಿ ರಾಜ್ಯಾದ್ಯಂತ ಸುವರ್ಣ ಮಹೋತ್ಸವ ಆಚರಿಸಿಕೊಳ್ಳುತ್ತಿದೆ. ಇದರ ಅಂಗವಾಗಿ ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ನಿಯಂತ್ರಣ ಮಾಡುವುದರಲ್ಲಿ ಯುವಕರ ಪಾತ್ರ ಬಹಳ ಮಹತ್ವದ್ದು ಎಂದು ಪರಿಗಣಿಸಿ 'ಪರಿಸರದ ಬಗ್ಗೆ ರಿಲ್ಸ್ ಮಾಡಿ ಬಹುಮಾನ ಗೆಲ್ಲಿ' ಎಂಬ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆ. ಪರಿಸರ ಕಾಳಜಿ, ಸಂರಕ್ಷಣೆಯ ಸಂದೇಶ ಸಾರುವ ಉತ್ತಮ ರೀಲ್ಸ್‌ಗೆ 50 ಸಾವಿರ ರೂಪಾಯಿ ಪ್ರಥಮ ಬಹುಮಾನ, 25 ಸಾವಿರ ರೂಪಾಯಿ ದ್ವಿತೀಯ ಬಹುಮಾನ ಹಾಗೂ 10 ಸಾವಿರ ರೂಪಾಯಿ ತೃತೀಯ ಬಹುಮಾನ ರಾಜ್ಯ ಮಟ್ಟದ ಕಾರ್ಯಕ್ರಮದಲ್ಲಿ ನೀಡಲಾಗುವುದು ಎಂದು ಮಂಡಳಿಯ ಅಧ್ಯಕ್ಷರಾದ ನರೇಂದ್ರಸ್ವಾಮಿ ವಿವರಿಸಿದರು.

## ಪರಿಶ್ರಮದಿಂದ ಬದುಕಿನ ಶಿಲ್ಪಿಗಳಾಗಿ

• ಉದಯವಾಹಿನಿ ಕುಂದಾಪುರ

ದೇಶದ ಭವಿಷ್ಯವಾದ ಯುವ ಸಮುದಾಯ ನಾಯಕತ್ವದ ಗುಣಗಳನ್ನು ಮೈಗೂಡಿಸಿಕೊಂಡು, ಆರೋಗ್ಯಯುತ ಜೀವನಶೈಲಿ ಪಾಲಿಸಿ ಪರಿಶ್ರಮದಿಂದ ವ್ಯಕ್ತಿತ್ವ ನಿರ್ಮಾಣ ಮಾಡಿಕೊಂಡು ಕೀಳರಿಮೆಯಿಂದ ಹೊರಬಂದು ಬದುಕಿನ ಶಿಲ್ಪಿಗಳಾಗಬೇಕು' ಎಂದು ಉಡುಪಿ ದೊಡ್ಡನಗುಡ್ಡೆಯ ಡಾ.ಎ.ವಿ.ಬಾಳಿಗ ಸ್ಮಾರಕ ಆಸ್ಪತ್ರೆ ಮನಶಾಸ್ತ್ರಜ್ಞ ಡಾ.ವಿರೂಪಾಕ್ಷ ದೇವರುಮನೆ ಹೇಳಿದರು.

ಕೋಟೇಶ್ವರದ ಕಾಳಾವರ ವರದರಾಜ ಎಂ. ಶೆಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಅಧ್ಯಯನ ಕೇಂದ್ರದ 2025-26ನೇ ಸಾಲಿನ ವಿದ್ಯಾರ್ಥಿ ವೇದಿಕೆ ಉದ್ಘಾಟಿಸಿ ಅವರು ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ರಾಮರಾಯ ಅಚಾರ್ಯ ಪ್ರತಿಜ್ಞಾವಿಧಿ ಬೋಧಿಸಿದರು. ಐಕ್ಯುಎಸಿ ಸಂಚಾಲಕ, ವಾಣಿಜ್ಯಶಾಸ್ತ್ರ ಸಹ ಪ್ರಾಧ್ಯಾಪಕ ನಾಗರಾಜ ಯು. ಪರಿಚಯಿಸಿದರು. ವಾಣಿಜ್ಯಶಾಸ್ತ್ರ ಸಹಾಯಕ ಪ್ರಾಧ್ಯಾಪಕಿ ವಿದ್ಯಾ ಮಾರ್ಗದರ್ಶನದಲ್ಲಿ ವಿಶೇಷ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು. ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ಸಂಪತ್ ಕುಮಾರ್ ಶೆಟ್ಟಿ, ಶಿಕ್ಷಕ ರಕ್ಷಕ ಸಂಘದ ಅಧ್ಯಕ್ಷ ಪ್ರಭಾಕರ ಖಾರ್ವಿ ಭಾಗವಹಿಸಿದ್ದರು.

## ಪಂಚಾಯಿತಿ ತ್ಯಾಜ್ಯ ತಿನ್ನುತ್ತಿವೆ ಬಂಗಾರ ಹುಳು

• ಉದಯವಾಹಿನಿ ಉಡುಪಿ

ಮನೆ ಮನೆಗಳಿಂದ ಸಂಗ್ರಹಿಸುವ ಹಸಿ ತ್ಯಾಜ್ಯವನ್ನು 'ಬಂಗಾರ ಹುಳು' ಬಳಸಿ ಗೊಬ್ಬರವಾಗಿಸುವ ಪ್ರಾಯೋಗಿಕ ಘಟಕವು ಕುಂದಾಪುರ ತಾಲ್ಲೂಕಿನ ವಂಡ್ರೆ ಗ್ರಾಮ ಪಂಚಾಯಿತಿ ಅಧೀನದಲ್ಲಿ ಕಾರ್ಯಾಚರಿಸುತ್ತಿದೆ. ಬ್ರಹ್ಮಾವರ ಕೃಷಿ ವಿಜ್ಞಾನ ಕೇಂದ್ರದ ಕೀಟ ಶಾಸ್ತ್ರಜ್ಞ ರೇವಣ್ಣ ರೇವಣ್ಣನವರ್ ಅವರ ಮಾರ್ಗದರ್ಶನದಲ್ಲಿ ಕಳೆದ ಒಂಬತ್ತು ತಿಂಗಳಿಂದ ಈ ಪ್ರಯೋಗವು ಯಶಸ್ವಿಯಾಗಿ ನಡೆಯುತ್ತಿದೆ. ಇಂಗ್ಲಿಷ್‌ನಲ್ಲಿ ಬ್ಲ್ಯಾಕ್ ಸೋಲ್ಡರ್ ಫ್ಲೈ ಎಂಬುದಾಗಿ ಕರೆಯಲ್ಪಡುವ ಈ ಹುಳುಗಳು ಹಸಿ ತ್ಯಾಜ್ಯವನ್ನು ತಿಂದು ಅದನ್ನು ಗೊಬ್ಬರವಾಗಿ ಪರಿವರ್ತಿಸುತ್ತವೆ.

ವಂಡ್ರೆ ಗ್ರಾಮ ಪಂಚಾಯಿತಿಯ ಘನತ್ಯಾಜ್ಯ ವಿಲೇವಾರಿ ಘಟಕದಲ್ಲೇ ಈ ಹುಳುಗಳಿಂದ ಗೊಬ್ಬರ ತಯಾರಿಸುವ ಘಟಕವನ್ನು ಆರಂಭಿಸಲಾಗಿದೆ. ಈ ಘಟಕದಲ್ಲಿ ವಂಡ್ರೆ ಪಂಚಾಯಿತಿ ಮಾತ್ರವಲ್ಲದೆ ಚಿತ್ತೂರು, ಇಡೂರು ಕುಂಞಾಡಿ, ಅಲೂರು, ಹಕ್ಲಾಡಿ, ಹೆಮ್ಮಾಡಿ, ಕೆರಾಡಿ ಗ್ರಾಮ ಪಂಚಾಯಿತಿಗಳ ತ್ಯಾಜ್ಯವನ್ನೂ ವಿಲೇವಾರಿ ಮಾಡಲಾಗುತ್ತಿದೆ.

'ರಾಜ್ಯದಲ್ಲಿ ಕೆಲವು ಖಾಸಗಿ ಕಂಪನಿಯವರು ಈ ಪ್ರಯತ್ನ ಮಾಡಿದ್ದರೂ ಗ್ರಾಮ ಪಂಚಾಯಿತಿಯಲ್ಲಿ ಇಂತಹ ಪ್ರಯೋಗ ಮಾಡುತ್ತಿರುವುದು ಇದೇ ಮೊದಲು' ಎನ್ನುತ್ತಾರೆ ವಂಡ್ರೆ ಗ್ರಾಮ ಪಂಚಾಯಿತಿಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಸಮಿತಿ ಅಧ್ಯಕ್ಷ ಉದಯ್ ಕುಮಾರ್ ಶೆಟ್ಟಿ. ಇವರ ನೇತೃತ್ವದಲ್ಲೇ ಬಂಗಾರ ಹುಳುವಿನಿಂದ ಗೊಬ್ಬರ ತಯಾರಿಸುವ ಘಟಕ ಕಾರ್ಯ ನಿರ್ವಹಿಸುತ್ತಿದೆ.



ಉದಯವಾಹಿನಿ ಚಿತ್ರ

> **ಬಂಗಾರದ ಹುಳುಗಳು ಅದರ ದೇಹದ ತೂಕಕ್ಕಿಂತ 10 ಪಟ್ಟು ಹೆಚ್ಚು ಕಸವನ್ನು ತಿನ್ನುತ್ತವೆ. ಹಸಿ ಕಸ ವಿಲೇವಾರಿಗೆ ಇದೊಂದು ಪರಿಸರಕ್ಕೆ ಪೂರಕವಾದ ವಿಧಾನ.**
> **-ರೇವಣ್ಣ ರೇವಣ್ಣನವರ್ ಬ್ರಹ್ಮಾವರ ಕೃಷಿ ವಿಜ್ಞಾನ ಕೇಂದ್ರದ ಕೀಟ ಶಾಸ್ತ್ರಜ್ಞ**

ಈ ಘಟಕದಲ್ಲಿ ಪ್ರತಿದಿನ ಎರಡು ಕ್ವಿಂಟಲ್‌ನಷ್ಟು ಹಸಿ ಕಸವನ್ನು ವಿಲೇವಾರಿ ಮಾಡಲಾಗುತ್ತಿದೆ. ಅದರಿಂದ ಉತ್ಪತ್ತಿಯಾಗುವ ಗೊಬ್ಬರವನ್ನು ಪಂಚಾಯಿತಿ ವತಿಯಿಂದ ಕೆ.ಜಿ.ಗೆ ರೂ.12 ರಂತೆ ಮಾರಾಟ ಮಾಡುತ್ತಿದ್ದೇವೆ' ಎಂದು ಉದಯ್ ಕುಮಾರ್ ಶೆಟ್ಟಿ ತಿಳಿಸಿದರು. 'ಈ ಹುಳುಗಳನ್ನು ಬಳಸಿ ಹಸಿತ್ಯಾಜ್ಯ ವಿಲೇವಾರಿ ಮಾಡುವ ಪ್ರಕ್ರಿಯೆಯು ಸರಳವಾಗಿದ್ದು, ಅದರಿಂದ ಉತ್ಪತ್ತಿಯಾಗುವ ಗೊಬ್ಬರದಲ್ಲಿ ಸಾರಜನಕ, ರಂಜಕ, ಪೊಟ್ಯಾಷ್‌ನ ಪ್ರಮಾಣವು ಹೆಚ್ಚಿರುತ್ತದೆ ಎಂದೂ ಅವರು ತಿಳಿಸಿದರು.

ಬಂಗಾರದ ಹುಳುಗಳು ನಾಲ್ಕು ಹಂತಗಳಲ್ಲಿ ಬೆಳೆಯುತ್ತವೆ. ಮೊದಲನೆಯದಾಗಿ ರೆಕ್ಕೆ ಇರುವ ಪ್ರೌಢ ಕೀಟಗಳು ಸಾವಿರಾರು ಮೊಟ್ಟೆಗಳನ್ನು ಇಡುತ್ತವೆ. ಮೂರರಿಂದ ನಾಲ್ಕು ದಿನಗಳಲ್ಲಿ ಮೊಟ್ಟೆಯೊಡೆದು ಹುಳುಗಳು ಹೊರ ಬರುತ್ತವೆ. ನಾಲ್ಕೈದು ದಿನಗಳ ಬಳಿಕ ಹುಳುಗಳನ್ನು ಹಸಿ ತ್ಯಾಜ್ಯವಿರುವ ತೊಟ್ಟಿಗೆ ಹಾಕುತ್ತೇವೆ' ಎನ್ನುತ್ತಾರೆ ಬ್ರಹ್ಮಾವರ ಕೃಷಿ ವಿಜ್ಞಾನ ಕೇಂದ್ರದ ಕೀಟ ಶಾಸ್ತ್ರಜ್ಞ ರೇವಣ್ಣ ರೇವಣ್ಣನವರ್.

12 ರಿಂದ 15 ದಿನಗಳವರೆಗೆ ಹಸಿ ಕಸವನ್ನು ತಿನ್ನುವ ಹುಳುಗಳು ಅನಂತರ ಗೂಡಾಗಿ ಮಾರ್ಪಡುತ್ತವೆ. ಅದರೊಳಗಿನ ಕೀಟಗಳು ಹಾರಿ ಹೋಗುತ್ತವೆ. ಕೀಟಗಳು ಹಾರಿ ಹೋಗದಂತೆ ಸುತ್ತಲೂ ಬಲೆ ಅಳವಡಿಸಿದರೆ ಅವುಗಳು ಮತ್ತೆ ಅದೇ ತೊಟ್ಟಿಯಲ್ಲಿ ಮೊಟ್ಟೆ ಇಡುತ್ತವೆ. ಬಂಗಾರದ ಹುಳು ದರ ಕೆ.ಜಿ.ಗೆ ರೂ.10 ಸಾವಿರ ಬೆಲೆ ಇದೆ' ಎಂದೂ ಅವರು ವಿವರಿಸಿದರು.

## ಕಸ ವಿಲೇವಾರಿ ತಾಣವಾದ ಅಡ್ಯಾಳ ಹಳ್ಳ

• ಉದಯವಾಹಿನಿ ಕುಷ್ಟಗಿ

ಗ್ರಾಮ ಪಂಚಾಯಿತಿ ಮನಸ್ಸು ಮಾಡಿದ್ದರೆ ಸ್ವಚ್ಛಂದ ಪರಿಸರದಲ್ಲಿ ನೀರಿನ ಜುಳು ಜುಳು ನಿನಾದ ಮನಕ್ಕೆ ಮುದನೀಡಬಹುದಾಗಿತ್ತು. ಗ್ರಾಮದ ಹೊರವಲಯದಲ್ಲಿ ರಸ್ತೆ ಪಕ್ಕದಲ್ಲಿ ಜನರ ಗಮನಸೆಳೆಯುವಂತೆ ಒಂದು ಸುಂದರ ಕೊಳವನ್ನಾಗಿಸಿ ಜನರಿಗೆ ಪ್ರಾಯೋಗಿಕವಾಗಿ ನೈಸರ್ಗಿಕ ಜಲಮೂಲದ ಸಂರಕ್ಷಣೆ ಪಾಠ ಮಾಡಬಹುದಿತ್ತು. ಮುಳ್ಳುಕಂಟಿಗಳನ್ನು ತೆರವುಗೊಳಿಸಿದ್ದರೆ ಅದೊಂದು ವೈವಿಧ್ಯಮಯ ಕಣ್ಮನಸೆಳೆಯುವ ವಿಹಾರ ತಾಣವನ್ನಾಗಿಸುವುದಕ್ಕೆ ಎಲ್ಲಾ ಅವಕಾಶಗಳೂ ಇವೆ. ಆದರೆ, ಹಳ್ಳ, ಕೊಳವೆಲ್ಲ ಮಲಿನ ಮಡುವಾಗಿ ಪರಿವರ್ತನೆಗೊಂಡಿದೆ.

ಇದು ತಾಲ್ಲೂಕಿನ ಹಿರೇಮನ್ನಾಪುರ ಗ್ರಾಮದ ಹುಲಿಯಾಪುರ ಮಾರ್ಗದ ರಸ್ತೆಯ ಬದಿಯಲ್ಲಿನ ಅಡ್ಯಾಳ ಹಳ್ಳದಲ್ಲಿ ಕಣ್ಣಿಗೆ ರಾಚುವ ಚಿತ್ರಣ. ಇದೇ ಊರಲ್ಲಿಯೇ ಇರುವ ಗ್ರಾಮ ಪಂಚಾಯಿತಿ ನಿರ್ಲಕ್ಷ್ಯಕ್ಕೆ ಜ್ವಲಂತ ಸಾಕ್ಷಿ ಒದಗಿಸುವ ಈ ಹಳ್ಳ ಮತ್ತು ಕೊಳದ ಸ್ಥಿತಿಯನ್ನು ಗಮನಿಸುವ ದಾರಿಹೋಕರು ಶಪಿಸದೇ ಇರಲಾರರು. ಜಲಮೂಲಗಳು ಮಾಲಿನ್ಯಗೊಳ್ಳಬಾರದು ಎಂಬ ಆಶಯ ಮತ್ತು ದೂರದೃಷ್ಟಿಯಲ್ಲಿ ಜನರಿಗೆ ತಿಳಿವಳಿಕೆ ಮೂಡಿಸಬೇಕಿರುವ ಪಂಚಾಯಿತಿಯೇ ಗ್ರಾಮದಲ್ಲಿ ನಿತ್ಯ ಸಂಗ್ರಹವಾಗುವ ಮೂಟೆಗಟ್ಟಲೇ ಪ್ಲಾಸ್ಟಿಕ್, ಕೊಳಚೆ, ಕೊಳೆತ ಸಾಮಗ್ರಿಗಳು, ಸತ್ತ ಪ್ರಾಣಿಗಳು, ಆಸ್ಪತ್ರೆಗಳ ತ್ಯಾಜ್ಯ ಹೀಗೆ ಅಪಾಯಕಾರಿ, ವಿಷಕಾರಿ ಘನತ್ಯಾಜವನ್ನು ವಿವೇಚನೆ ಮರೆತು ವಿಲೇವಾರಿ ಮಾಡುವುದಕ್ಕೆ ಕೊಳದಂತಿರುವ ಹಳ್ಳವನ್ನೇ ಆಯ್ಕೆ ಮಾಡಿಕೊಂಡಿರುವುದು ದುರಂತ ಎಂಬುದು ಜನರ ಅಸಮಾಧಾನ. ಕಸವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಪಂಚಾಯಿತಿ ವ್ಯವಸ್ಥೆ ಮಾಡಿಕೊಂಡಿಲ್ಲ, ವಾಹನದಲ್ಲಿ ತುಂಬಿಕೊಂಡು ನೇರವಾಗಿ ತಂದು ಅಡ್ಯಾಳ ಹಳದಲ್ಲಿ ಅಳುಕಿಲ್ಲದೆ ಸುರಿಯಲಾಗುತ್ತಿದೆ.


ಉದಯವಾಹಿನಿ ಚಿತ್ರ

ಈ ವರ್ಷದಲ್ಲಿ ಉತ್ತಮ ಮಳೆಯಿಂದ ಹಳ್ಳಕ್ಕೆ ಮತ್ತು ಪಕ್ಕದಲ್ಲಿರುವ ಅಡ್ಯಾಳ ಕೆರೆಗೆ ಜೀವಕಳೆ ಬಂದಿದ್ದರೂ ತ್ಯಾಜ್ಯ ಹಾಕುತ್ತಿರುವುದರಿಂದ ದುರ್ಗಂಧ ಬೀರುತ್ತಿದೆ. ನೀರಿನಲ್ಲಿ ಕಾಲಿಡುವಂತಿಲ್ಲ, ಜಾನುವಾರುಗಳಿಗೆ ಕುಡಿಸುವಂತಿಲ್ಲ. ತೋಟಪಟ್ಟಿಗಳಿಗೆ ಹರಿಸಿಕೊಳ್ಳಬೇಕೆಂದರೆ ತರಹೇವಾರಿ ಅಪಾಯಕಾರಿ ತ್ಯಾಜ್ಯದಿಂದ ನೀರು ಬಳಕೆಗೆ ಯೋಗ್ಯವಿಲ್ಲದಂತಾಗಿದೆ. ಸುತ್ತಲೂ ಮುಳ್ಳು ಕಂಟಿಗಳು ಬೆಳೆದು ನಿಂತಿವೆ. ಜಲಮೂಲಗಳ ಸಂರಕ್ಷಣೆ ಪರಿಕಲ್ಪನೆಯಲ್ಲಿ ಗ್ರಾಪಂ ಮೂಲಕ ನರೇಗಾದಲ್ಲಿ 'ಅಮೃತ ಸರೋವರಗಳನ್ನು ನಿರ್ಮಿಸಲಾಗುತ್ತಿದೆ. ಆದರೆ ಅದಕ್ಕೆ ಯೋಗ್ಯವಿರುವ ಅಡ್ಯಾಳ ಹಳ್ಳವನ್ನು ಹಿರೇಮನ್ನಾಪುರ ಪಂಚಾಯಿತಿ ಮಾತ್ರ ಕೊಳಚೆ ಕೊಳವನ್ನಾಗಿಸಿರುವುದು ಕಂಡುಬಂದಿದೆ.

## ಸೈಬರ್ ಕ್ರೈಂ: ಜಾಗೃತಿ ಮಾಸಾಚರಣೆ

• ಉದಯವಾಹಿನಿ ಬಳ್ಳಾರಿ

ದೇಶದಲ್ಲಿ ಇತ್ತೀಚೆಗೆ ವ್ಯಾಪಕವಾಗಿ ಹೆಚ್ಚುತ್ತಿರುವ ಸೈಬರ್ ಅಪರಾಧ, ಡಿಜಿಟಲ್ ಅರೆಸ್ಟ್‌ನಂಥ ಕೃತ್ಯಗಳನ್ನು ಕೇಂದ್ರ ಗೃಹ ವ್ಯವಹಾರಗಳ ಸಚಿವಾಲಯವು ಗಂಭೀರವಾಗಿ ಪರಿಗಣಿಸಿದ್ದು. ಅಕ್ಟೋಬರ್ ತಿಂಗಳಲ್ಲಿ ರಾಷ್ಟ್ರೀಯ ಸೈಬರ್ ಭದ್ರತಾ ಜಾಗೃತಿ ಮಾಸಾಚರಣೆ ಆಚರಿಸುತ್ತಿದೆ.

ಕೇಂದ್ರದ ಸೂಚನೆಯಂತೆ ಬಳ್ಳಾರಿ ಜಿಲ್ಲೆಯಲ್ಲೂ ಜಾಗೃತಿ ಮಾಸಾಚಾರಣೆ ಮಾಡಲಾಗುತ್ತಿದ್ದು, ಅದಕ್ಕಾಗಿ ಪೊಲೀಸ್ ಇಲಾಖೆಯು ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಸಂಘ ಸಂಸ್ಥೆ, ಸಾಮಾಜಿಕ ಮಾಧ್ಯಮಗಳಲ್ಲಿ ಈ ಕುರಿತು ಹೆಚ್ಚಿನ ಅರಿವು ಮೂಡಿಸುವ ಪ್ರಯತ್ನ ನಡೆಯುತ್ತಿದೆ. ಶಿಕ್ಷಣ, ಸಹಭಾಗಿತ್ವದ ಆಧಾರದಲ್ಲಿ ವ್ಯಕ್ತಿಗಳು ಮತ್ತು ಸಂಸ್ಥೆಗಳಿಗೆ ಸೈಬರ್ ಸುರಕ್ಷತೆಯ ಮಹತ್ವವನ್ನು ತಿಳಿಸಿಕೊಡುವುದು ಈ ಮಾಸಾಚರಣೆಯ ಮುಖ್ಯ ಉದ್ದೇಶ.

ಸೈಬರ್ ಜಾಗೃತಿ ಭಾರತ್' ಅಥವಾ 'ಸೈಬರ್ ಸುರಕ್ಷಿತ ಭಾರತ' ಎಂಬುದು ಈ ವರ್ಷದ ಧ್ಯೇಯವಾಕ್ಯವಾಗಿದೆ. ಸಾರ್ವಜನಿಕ, ಖಾಸಗಿ ಮತ್ತು ಸರ್ಕಾರಿ ವಲಯಗಳಲ್ಲಿ ಸೈಬರ್ ವಂಚನೆಯ ಕುರಿತು ಮಾಹಿತಿ ನೀಡಿ, ವಂಚನೆಯ ಜಾಲದ ವಿರುದ್ಧ ದೇಶವನ್ನು ಗಟ್ಟಿಯಾಗಿ ನಿಲ್ಲಿಸಲು ಅಭಿಯಾನದ ಮೂಲಕ ಪ್ರಯತ್ನಿಸಲಾಗುತ್ತಿದೆ. ಅದಕ್ಕಾಗಿಯೇ ಜಿಲ್ಲೆಯಲ್ಲಿ ಪೊಲೀಸ್ ಇಲಾಖೆ ರೀಲ್ಸ್ ಸ್ಪರ್ಧೆಯನ್ನು ಏರ್ಪಡಿಸಿದೆ. ಡಿಜಿಟಲ್ ವಾಹನಗಳನ್ನು ಬೀದಿಗಿಳಿಸಿ ಅದರಲ್ಲಿ ಅರಿವು ಮೂಡಿಸುವ ವಿಡಿಯೋಗಳನ್ನು ಬಿತ್ತರಿಸುತ್ತಿದೆ. ಶಾಲೆ-ಕಾಲೇಜುಗಳಲ್ಲಿ ವಿಚಾರ ಸಂಕಿರಣ, ಸಂವಾದ, ಚರ್ಚೆಗಳನ್ನು ಏರ್ಪಡಿಸಲಾಗುತ್ತಿದೆ. ಬಸ್, ರೈಲ್ವೆ ನಿಲ್ದಾಣ, ದೇವಸ್ಥಾನ ಮತ್ತು ಜನನಿಬಿಡ ಪ್ರದೇಶಗಳಲ್ಲಿ ಸೈಬರ್ ಅಪರಾಧದ ಕುರಿತು ಮಾಹಿತಿ ನೀಡಲಾಗುತ್ತಿದೆ.

## ಘನ ತ್ಯಾಜ್ಯ ಘಟಕ ಕಾರ್ಯನಿರ್ವಹಣೆ ಸ್ಥಗಿತ

• ಉದಯವಾಹಿನಿ ಬಾದಾಮಿ

ಪಟ್ಟಣದ ಹೊರವಲಯದಲ್ಲಿರುವ ಪುರಸಭೆಯ ಘನತ್ಯಾಜ್ಯ ಘಟಕದ ಕಾರ್ಯನಿರ್ವಹಣೆ ಸಂಪೂರ್ಣ ಸ್ಥಗಿತವಾಗಿದೆ. ಕಟ್ಟಡಗಳು ಜಾಲಿ ಕಂಟಿಗಳಲ್ಲಿ ಮರೆಯಾಗುತ್ತಿವೆ. ಕೇಂದ್ರ ಸರ್ಕಾರದ ಹೃದಯ ಯೋಜನೆಯಲ್ಲಿ ಅಂದಾಜು 1.80 ಕೋಟಿಯನ್ನು ಘನತ್ಯಾಜ್ಯ ಘಟಕದ ಕಟ್ಟಡ, ಕಸ ಸಾಗಿಸುವ ವಾಹನ ಮತ್ತು ವಿವಿಧ ಪರಿಕರಗಳ ಖರೀದಿಗೆ ವೆಚ್ಚ ಮಾಡಲಾಗಿದೆ.

2021ರಲ್ಲಿ ತ್ಯಾಜ್ಯ ಘಟಕ ಆರಂಭವಾಗಿತ್ತು. ಎರಡು ವರ್ಷ ಹಸಿ ಮತ್ತು ಒಣ ಕಸ ಬೇರ್ಪಡಿಸುವ ವಾಹನಗಳು ಚಾಲುಕ್ಯ ನಗರ ಮತ್ತು ಆನಂದ ನಗರದ ವಾರ್ಡ್‌ಗಳಲ್ಲಿ ಕಸ ಸಂಗ್ರಹಿಸಿದವು. ತ್ಯಾಜ್ಯ ಘಟಕಗಳಲ್ಲಿ ಈ ಕಸವನ್ನು ಸಂಗ್ರಹ ಮಾಡಲಾಗುತ್ತಿತ್ತು. 15 ಕಾರ್ಮಿಕರು ಇಲ್ಲಿ ಕಾರ್ಯ ನಿರ್ವಹಿಸುತ್ತಿದ್ದರು. ತ್ಯಾಜ್ಯ ಘಟಕ ಬಂದ್ ಆಗಿ ಬಯೋಗ್ಯಾಸ್ ಘಟಕ ಮತ್ತು ಜನರೇಟರ್ ತುಕ್ಕು ಹಿಡಿಯುತ್ತಿವೆ. ಇಡೀ ಕಟ್ಟಡ ಪಾಳು ಬಿದ್ದು ಸಾರ್ವಜನಿಕರ ತೆರಿಗೆ ಹಣ ವ್ಯರ್ಥವಾಗಿದೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ. ಆರಂಭದಲ್ಲಿ ಹಸಿ ಕಸ, ಒಣ ಕಸ ಬೇರ್ಪಡಿಸಿ ಎರೆಹುಳು ಗೊಬ್ಬರವನ್ನೂ ತಯಾರಿಸಲಾಗುತ್ತಿತ್ತು. ಈಗ ಗೊಬ್ಬರದ ಘಟಕಗಳು ಖಾಲಿಯಾಗಿವೆ.

ವಾರ್ಡ್‌ಗಳಲ್ಲಿ ವಾಹನಗಳು ಬರುತ್ತಿವೆ. ವಾಹನಗಳ ಧ್ವನಿವರ್ಧಕದ ಮೂಲಕ ಹಸಿ ಕಸ ಮತ್ತು ಒಣ ಕಸ ಬೇರೆ ಹಾಕಿ ಎಂದು ಹೇಳಲಾಗುತ್ತಿದೆ. ಆದರೆ ಹಸಿ ಕಸ ಮತ್ತು ಒಣ ಕಸ ಬೇರ್ಪಡಿಸುತ್ತಿಲ್ಲ ಹಾಗೆಯೇ ಕಸವನ್ನು ಹಾಕುತ್ತೇವೆ' ಎಂದು ಆನಂದ ನಗರದ ಮಹಿಳೆ ಪರಿಮಳಾ ಹೇಳಿದರು.


ಉದಯವಾಹಿನಿ ಚಿತ್ರ

'ಕೇಂದ್ರ ಸರ್ಕಾರದಿಂದ ಅನುದಾನ ಬಂದರೂ ಯೋಜನೆ ಸರಿಯಾಗಿ ಅನುಷ್ಠಾನವಾಗಿಲ್ಲ. ಅಭಿವೃದ್ಧಿ ಕಾರ್ಯಗಳು ಜನರಿಗೆ ಉಪಯೋಗಕ್ಕೆ ಬಾರದಂತಾಗಿದೆ' ಎಂದು ನಿಸರ್ಗ ಬಳಗದ ಅಧ್ಯಕ್ಷ ಎಸ್.ಎಚ್. ವಾಸನ ಹೇಳಿದರು. ಪುರಸಭೆ ಅಧ್ಯಕ್ಷರಿಗೆ ಮತ್ತು ಮುಖ್ಯಾಧಿಕಾರಿಗೆ ಹಲವು ಬಾರಿ ಘಟಕದ ಆರಂಭದ ಬಗ್ಗೆ ಮೌಖಿಕವಾಗಿ ಮತ್ತು ಮನವಿ ಮೂಲಕ ಅನೇಕ ಬಾರಿ ತಿಳಿಸಿದರೂ ತ್ಯಾಜ್ಯ ಘಟಕ ಸರಿಯಾದ ಕಾರ್ಯನಿರ್ವಹಣೆ ಆಗುತ್ತಿಲ್ಲ' ಎಂದು ಅವರು ಅರೋಪಿಸಿದರು. ತ್ಯಾಜ್ಯ ಘಟಕಕ್ಕೆ ಭೇಟಿ ನೀಡಿದಾಗ ಮುಂದಿನ ಬಾಗಿಲು ಹಾಕಿ ರಬ್ಬರ್‌ನಿಂದ ಸುತ್ತಿ ಬಂದ್ ಮಾಡಲಾಗಿತ್ತು. ತ್ಯಾಜ್ಯ ಘಟಕದಲ್ಲೂ ಚಟುವಟಿಕೆ ಕಂಡು ಬರಲಿಲ್ಲ. ಯಾರೊಬ್ಬರೂ ಕಂಡು ಬರಲಿಲ್ಲ.

> **ನಿತ್ಯ 11 ಟನ್ ಕಸ ಸಂಗ್ರಹ'**
> **'ತ್ಯಾಜ್ಯ ಘಟಕದ ನಿರ್ವಹಣೆಯನ್ನು ಖಾಸಗಿ ಸಂಸ್ಥೆಗೆ ಕೊಡಲಾಗಿತ್ತು. ವರ್ಷದಿಂದ ಸ್ಥಗಿತವಾಗಿದೆ. ಪಟ್ಟಣದಿಂದ ನಿತ್ಯ ಆರೂವರೆ ಟನ್ ಹಸಿ ಕಸ ಮತ್ತು ನಾಲ್ಕೂವರೆ ಟನ್ ಒಣ ಕಸ ಸಂಗ್ರಹವಾಗುತ್ತದೆ. ಹಸಿ ಕಸವನ್ನು ಗುಂಡಿಯಲ್ಲಿ ಹಾಕಿ ಗೊಬ್ಬರ ತಯಾರಿಸಲಾಗುತ್ತಿದೆ' ಎಂದು ಪುರಸಭೆ ಆರೋಗ್ಯ ನಿರೀಕ್ಷಕ ಪ್ರವೀಣ ಕಂಬಳಿ ಹೇಳಿದರು.**






















ಉದಯ ವಾಹಿನಿ
ದೀಪಾವಳಿ ವಿಶೇಷಾಂಕ
ಸೋಮವಾರ 20 ಅಕ್ಟೋಬರ್ 2025
07

# ಚಿತ್ತಾಪುರ ಗಲಾಟೆ: ಸರ್ಕಾರ ಯಾವುದೇ ಸಂಘಟನೆಯನ್ನು ಗುರಿ ಮಾಡಿಲ್ಲ

## ಬಿಜೆಪಿ ಅನಗತ್ಯ ರಾಜಕೀಯ ಮಾಡುತ್ತಿದೆ ಎಂದು ಸಿಎಂ ಸಿದ್ದರಾಮಯ್ಯ ಮೈಸೂರಲ್ಲಿ ಪ್ರತಿಕ್ರಿಯೆ

• **ಉದಯವಾಹಿನಿ, ಮೈಸೂರು**

ನಾವು ಆರ್ ಎಸ್ ಎಸ್ ಟಾರ್ಗೆಟ್ ಮಾಡಿಲ್ಲ. ಎಲ್ಲಾ ಸಂಘಟನೆಗಳಿಗೂ ಕೂಡ ಅನ್ವಯ ಆಗುವಂತೆ ಆದೇಶ ಮಾಡಿದ್ದೇವೆ. ಬಿಜೆಪಿ ಇದರಲ್ಲಿ ವಿನಾಕಾರಣ ರಾಜಕಾರಣ ಮಾಡುತ್ತಿದೆ ಎಂದರು. ಮೈಸೂರಿನಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಚಿತ್ತಾಪುರದ ಗಲಾಟೆಯ ಬಗ್ಗೆ ಮಾಹಿತಿ ಪಡೆಯುತ್ತೇನೆ. ಯಾವುದೇ ಸಂಘಟನೆಯನ್ನು ಟಾರ್ಗೆಟ್ ಮಾಡಿಲ್ಲ ಎಂದರು.

ಇನ್ನು ಬಿಜೆಪಿ ಪ್ರತಿಕ್ರಿಯೆ ವಿಚಾರವಾಗಿ ಮಾತನಾಡಿ, ಮೊದಲಿನಿಂದಲೂ ಬಿಜೆಪಿ ಇದನ್ನೇ ಮಾಡಿಕೊಂಡು ಬರುತ್ತಿದೆ . ಬಿಜೆಪಿಯಿಂದ ಕರ್ನಾಟಕದಲ್ಲಿ ಶಾಂತಿ ಭಂಗ ಮಾಡಲು ಸಾಧ್ಯವಿಲ್ಲ ಎಂದರು.

ಯಾವುದೇ ಸಂಘಸಂಸ್ಥೆಗಳ ಚಟುವಟಿಕೆಗಳನ್ನು ಜನರಿಗೆ ತೊಂದರೆಯಾಗುವಂತೆ ಸಾರ್ವಜನಿಕ ಸ್ಥಳಗಳಲ್ಲಿ ನಡೆಸಲು ಅನುಮತಿ ಪಡೆಯುವಂತೆ ಆದೇಶ ನೀಡಲಾಗಿದ್ದು, ಇದರಲ್ಲಿ ಯಾವುದೇ ಸಂಘಸಂಸ್ಥೆಗಳನ್ನು ಗುರಿಯಾಗಿಸಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಚಿತ್ತಾಪುರದಲ್ಲಿ ಆರ್ ಎಸ್ ಎಸ್ ಪಥಸಂಚಲನದ ಬಗ್ಗೆ ಗೊಂದಲ ಎದ್ದಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಈ ಬಗ್ಗೆ ಹಿಂದೆ ಬಿಜೆಪಿಯ ಜಗದೀಶ್ ಶೆಟ್ಟರ್ ಅವರ ನೇತೃತ್ವದ ಸರ್ಕಾರ ಆದೇಶ ಹೊರಡಿಸಿದಂತೆ , ನಮ್ಮ ಸರ್ಕಾರವೂ ಆದೇಶವನ್ನು ಹೊರಡಿಸಿದೆ. ಬಿಜೆಪಿ ಸರ್ಕಾರ ಹೊರಡಿಸಿದ್ದ ಈ ಆದೇಶಕ್ಕೆ ಯಾವುದೇ ವಿರೋಧ ವ್ಯಕ್ತವಾಗಿರಲಿಲ್ಲ. ಈ ಆದೇಶದಲ್ಲಿ ಸರ್ಕಾರ ಯಾವುದೇ ನಿಗಧಿತವಾದ ಸಂಘಸಂಸ್ಥೆಯನ್ನು ಗುರಿ ಮಾಡಿಲ್ಲ. ಬಿಜೆಪಿ ಜನರ ಹಿತಚಿಂತನೆ ಮಾಡುವುದನ್ನು ಬಿಟ್ಟು ರಾಜಕೀಯದಲ್ಲಿ ತೊಡಗಿದ್ದಾರೆ. ಈ ವಿಷಯದಲ್ಲಿ ಸಮಾಜದ ಶಾಂತಿಭಂಗವಾಗದಂತೆ ಪೊಲೀಸ್ ಇಲಾಖೆ ನೋಡಿಕೊಳ್ಳುತ್ತದೆ ಎಂದರು.



**ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಉದ್ಯೋಗ ಮೇಳ**
**ಮೈಸೂರಿನ ಉದ್ಯೋಗ ಮೇಳ ಯಶಸ್ವಿಯಾಗಿರುವ ಬಗ್ಗೆ ತಮ್ಮ ಅಭಿಪ್ರಾಯ ತಿಳಿಸುತ್ತಾ, ನಿನ್ನೆಯ ಉದ್ಯೋಗ ಮೇಳ ಯಶಸ್ವಿಯಾಗಿ ನೆರವೇರಿದ್ದು, ಈ ಕಾರ್ಯಕ್ರಮವನ್ನು ರಾಜ್ಯದ ಉಳಿದ ಜಿಲ್ಲೆಗಳಲ್ಲಿ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.**

**ಘಟನೆ ಏನು?:** ಸಚಿವ ಪ್ರಿಯಾಂಕ್ ಖರ್ಗೆ ಅವರ ತವರು ಕ್ಷೇತ್ರವಾದ ಚಿತ್ತಾಪುರದಲ್ಲಿ, ರಾಷ್ಟ್ರೀಯ ಸ್ವಯಂಸೇವಕ ಸಂಘ ಆಯೋಜಿಸಿದ್ದ ಪಥ ಸಂಚಲನಕ್ಕಾಗಿ ಅಳವಡಿಸಲಾಗಿದ್ದ ಅಲಂಕಾರಿಕ ಕೇಸರಿ ಧ್ವಜಗಳು ಮತ್ತು ಬ್ಯಾನರ್‌ಗಳನ್ನು ತಡರಾತ್ರಿ ಪುರಸಭೆ ಸಿಬ್ಬಂದಿ ತೆರವುಗೊಳಿಸಿದ್ದಾರೆ. ವಿಜಯ ದಶಮಿ ಉತ್ಸವ ಹಾಗೂ ಆರ್‌ಎಸ್‌ಎಸ್‌ನ 100ನೇ ವರ್ಷದ ಸಂಭ್ರಮಾಚರಣೆಗಾಗಿ ಈ ಸಿದ್ಧತೆಗಳನ್ನು ಮಾಡಲಾಗಿತ್ತು. ಪರವಾನಗಿ ಇಲ್ಲದೆ ಅಳವಡಿಸಲಾಗಿದೆ ಎಂಬ ಕಾರಣ ನೀಡಿ ಈ ಕ್ರಮ ಕೈಗೊಳ್ಳಲಾಗಿದೆ.

**ಗುತ್ತಿಗೆದಾರರ ಬಾಕಿ- ಸಂಬಂಧಪಟ್ಟ ಸಚಿವರಿಂದ ಕ್ರಮ**
**ಗುತ್ತಿಗೆದಾರರ ಬಾಕಿ ಪಾವತಿಯಾಗದಿದ್ದರೆ ಮಾನ್ಯ ರಾಜ್ಯಪಾಲರನ್ನು ಭೇಟಿಮಾಡುವುದಾಗಿ ಕೂಗೆದ್ದಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಈ ಬಗ್ಗೆ ಸಂಬಂಧಪಟ್ಟ ಸಚಿವರು ಕ್ರಮ ಕೈಗೊಳ್ಳಲಿದ್ದಾರೆ ಎಂದು ಸ್ಪಷ್ಟಪಡಿಸಿದರು.**

# ಯುಜಿಡಿ ಕಾಮಗಾರಿ: ಗರಿಗೆದರಿದ ನಿರೀಕ್ಷೆ

• **ಉದಯವಾಹಿನಿ, ಚನ್ನಪಟ್ಟಣ**

ನಗರದಲ್ಲಿ 18 ವರ್ಷಗಳಿಂದ ಕುಂಟುತ್ತಾ ಸಾಗಿರುವ ನಗರ ಒಳಚರಂಡಿ ಯೋಜನೆ ಕಾಮಗಾರಿಗೆ (ಯುಜಿಡಿ) ಚುರುಕು ಮುಟ್ಟಿಸಲು ಸರ್ಕಾರ ನಗರಸಭೆ ಆಡಳಿತ ಮುಂದಾಗಿದೆ.

ರೂ.13.11 ಕೋಟಿ ಅಂದಾಜು ವೆಚ್ಚದಲ್ಲಿ 2007ರಲ್ಲಿ ನಗರದ ಯುಜಿಡಿ ಕಾಮಗಾರಿಗೆ ಮೊದಲು ಅಂಕಿತ ಹಾಕಲಾಗಿತ್ತು. ಆದರೆ ಅದು ಅಧಿಕೃತವಾಗಿ ಕಾರ್ಯಗತವಾಗಿದ್ದು 2015ರಲ್ಲಿ. ಆಗ ಕಾಮಗಾರಿ ಆರಂಭವಾದರೂ ದೊಡ್ಡಮಟ್ಟದಲ್ಲಿ ಬೆಳೆಯುತ್ತಿದ್ದ ಚನ್ನಪಟ್ಟಣಕ್ಕೆ ಅನುದಾನ ಸಾಲದೆ ಕಾಮಗಾರಿ ನನೆಗುದಿಗೆ ಬಿದ್ದಿತ್ತು.

ನಂತರ 2018ರಲ್ಲಿ ಮತ್ತೆ ಸುಮಾರು ರೂ.94 ಕೋಟಿ ವೆಚ್ಚದಲ್ಲಿ ಎರಡನೇ ಹಂತದ ಒಳಚರಂಡಿ ಕಾಮಗಾರಿಗೆ ಅನುಮೋದನೆ ದೊರೆಯಿತು. ಆದರೂ ವೆಟ್‌ವೆಲ್‌ಗೆ ಜಾಗ ಗುರುತಿಸಲು ನಗರಸಭೆ ವಿಫಲವಾದದ್ದು, ಸಲಕರಣೆಗಳ ಬೆಲೆ ಏರಿಕೆ, ಜನರ ವಿರೋಧ ಸೇರಿದಂತೆ ಹಲವು ಕಾರಣಗಳಿಂದ ಮತ್ತೆ ನನೆಗುದಿಗೆ ಬಿದ್ದಿತ್ತು.

ಈಗ ಮತ್ತೆ ಎರಡನೇ ಹಂತದ ಯುಜಿಡಿ ಕಾಮಗಾರಿಯ ಮುಂದುವರೆದ ಭಾಗವಾಗಿ ರೂ. 128 ಕೋಟಿ ಅನುದಾನ ನೀಡಲು ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ದೊರೆತಿದೆ. ಈಗ ಮತ್ತೆ ಯುಜಿಡಿ ಕಾಮಗಾರಿ ಆರಂಭವಾಗುವ ಲಕ್ಷಣಗಳು ಕಾಣುತ್ತಿವೆ. ಇದರ ಜೊತೆಗೆ ಇಲ್ಲಿನ ನಗರಸಭೆ ಆಡಳಿತವು ನಗರದ ಅಸುಪಾಸಿನಲ್ಲಿ ಯುಜಿಡಿಗೆ ಬೇಕಾದ ಜಮೀನು ಖರೀದಿಸಲು ತಾಲ್ಲೂಕಿನ ಕೂಲ್ಲೂರು ಬಳಿ ನಗರಸಭಾ ಹೆಸರಿನಲ್ಲಿರುವ ಮೂರು ಎಕರೆ ಜಮೀನು ಮಾರಾಟ ಮಾಡಲು ಮುಂದಾಗಿದೆ. ಈ ಎಲ್ಲಾ ಕಾರಣದಿಂದ ನಗರದ ಯುಜಿಡಿ ಸಮಸ್ಯೆಗೆ ಮುಕ್ತಿ ಸಿಗುತ್ತದೆ ಎಂಬ ಆಶಾಭಾವನೆ ಮೂಡಿದೆ.



ಶಾಸಕ ಸಿ.ಪಿ.ಯೋಗೇಶ್ವರ್ ಅವರು ಈಚೆಗೆ ನಗರದ ಕೆಲವೆಡೆ ಸಂಚರಿಸಿ ಯುಜಿಡಿ ಸಮಸ್ಯೆ ವೀಕ್ಷಣೆ ಮಾಡಿದ್ದರು. ನಗರವು ದೊಡ್ಡದಾಗಿ ಬೆಳೆಯುತ್ತಿರುವ ಕಾರಣ ಹಳೆಯ ಯುಜಿಡಿ ಯೋಜನೆಯ ನೀಲನಕ್ಷೆಯನ್ನು ಬದಲಿಸಿ ಹೊಸದಾಗಿ ಯೋಜನೆ ತಯಾರಿಸುವುದಾಗಿ ತಿಳಿಸಿದ್ದರು.

ಈ ನಿಟ್ಟಿನಲ್ಲಿ ಸರ್ಕಾರಕ್ಕೆ ರೂ. 128 ಕೋಟಿ ವೆಚ್ಚದ ವಿವರವಾದ ಯೋಜನಾ ವರದಿಯನ್ನು ಸಲ್ಲಿಸಿದ್ದರು. ಇದೀಗ ಸರ್ಕಾರ ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಿದೆ. ಸುಮಾರು ಹದಿನೆಂಟು ವರ್ಷಗಳಿಂದ ಆಮೆಗತಿಯಲ್ಲಿ ಸಾಗಿದ್ದ ಯುಜಿಡಿ ಕಾಮಗಾರಿಯಿಂದ ನಗರದಲ್ಲಿ ಅನೈರ್ಮಲ್ಯ ಪರಿಸ್ಥಿತಿ ಎದುರಾಗಿತ್ತು.

**ನಗರದ ಕೊಳಚೆ ನೀರು ನಗರ ವ್ಯಾಪ್ತಿಯ ಕೆಲವು ಕೆರೆಗಳಿಗೆ ಹರಿದು ಕೆರೆಗಳು ಸಹ ಕಲುಷಿತವಾಗಿದ್ದವು. ಕಳೆದ ಕೆಲವು ತಿಂಗಳುಗಳ ಹಿಂದೆ ತಾಲ್ಲೂಕಿನ ಕೆರೆಗಳನ್ನು ವೀಕ್ಷಣೆ ಮಾಡಲು ಆಗಮಿಸಿದ್ದ ರಾಜ್ಯ ಉಪ ಲೋಕಾಯುಕ್ತ ಎಂ.ಕೆ.ಫಣೀಂದ್ರ ಅವರು ನಗರ ವ್ಯಾಪ್ತಿಯ ಶೆಟ್ಟಿಹಳ್ಳಿ ಕೆರೆ ವೀಕ್ಷಣೆ ಮಾಡಿ ನಗರದ ಅನೈರ್ಮಲ್ಯ ಪರಿಸರದ ಬಗ್ಗೆ ಬೇಸರ ವ್ಯಕ್ತಪಡಿಸಿದ್ದರು.**

# ಆಸ್ಪತ್ರೆ ಸಂಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯತಪಾಸಣೆ ಶಿಬಿರ

• **ಉದಯವಾಹಿನಿ, ಬಂಗಾರಪೇಟೆ**

ತಾಲ್ಲೂಕಿನ ಡಿ.ಕೆ.ಹಳ್ಳಿ ಗ್ರಾಮ ಪಂಯಾಚಿತಿ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯಿತಿ ಮತ್ತು ಬೆಂಗಳೂರಿನ ವೈದೇಹಿ ಆಸ್ಪತ್ರೆ ಸಂಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಯಿತು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಜೆ. ಸುರೇಶ್ ಮಾತನಾಡಿ, 'ಆಧುನಿಕ ಜೀವನಶೈಲಿ ಮತ್ತು ಆಹಾರ ಪದ್ಧತಿಗಳು ಹಲವು ರೋಗಗಳಿಗೆ ಕಾರಣವಾಗುತ್ತಿವೆ. ದುಶ್ಚಟಗಳಿಂದ ಯುವ ಜನಾಂಗ ದೂರವಿರಬೇಕು. ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು' ಎಂದು ಹೇಳಿದರು.

'ಆರೋಗ್ಯವೇ ನಮಗೆ ನಿಜವಾದ ಸಂಪತ್ತು. ಹೀಗಾಗಿ, ಪ್ರತಿಯೊಬ್ಬರೂ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು. ಆದರೆ ಇಂದು ಆರೋಗ್ಯಕ್ಕಾಗಿ ಲಕ್ಷಾಂತರ ರೂಪಾಯಿ ವೆಚ್ಚ ಮಾಡಬೇಕಾದ ಅನಿವಾರ್ಯತೆ ಎದುರಾಗಿದೆ. ಬಡವರು ದೊಡ್ಡ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವುದು ದುಸ್ತರವಾಗಿದೆ. ಹೀಗಾಗಿ, ಗ್ರಾಮ ಪಂಚಾಯಿತಿ ಮೂಲಕ ಉಚಿತ ಆರೋಗ್ಯ ತಪಾಸಣೆ ಶಿಬಿರ ಆಯೋಜಿಸಲಾಗಿದೆ. ಇದು ಬಡವರು ಮತ್ತು ಕೂಲಿ ಕಾರ್ಮಿಕರು ವರದಾನವಾಗಿದೆ ಎಂದರು.

ಶಿಬಿರದಲ್ಲಿ ಹೃದ್ರೋಗ, ಸಾಮಾನ್ಯ ಆರೋಗ್ಯ ತಪಾಸಣೆ, ಮೂಳೆ ತಪಾಸಣೆ ಎಕೊ ಪರೀಕ್ಷೆ ಸೇರಿದಂತೆ ಹಲವು ತಪಾಸಣೆಗಳನ್ನು ಉಚಿತವಾಗಿ ಮಾಡಲಾಗುತ್ತಿದೆ. ಉಚಿತ ಆರೋಗ್ಯ ಶಿಬಿರವನ್ನು ಪ್ರತಿಯೊಬ್ಬರೂ ಸದುಪಯೋಗಪಡಿಸಿಕೊಳ್ಳಬೇಕು ಎಂದರು.



ಶಿಬಿರಗಳಲ್ಲಿ ಸಾಮಾನ್ಯ ಆರೋಗ್ಯ ತಪಾಸಣೆ, ನೇತ್ರ ತಪಾಸಣೆ, ದಂತ ಚಿಕಿತ್ಸೆ, ಹೃದ್ರೋಗ ಮತ್ತು ರಕ್ತದೊತ್ತಡ, ರಕ್ತ ಪರೀಕ್ಷೆ, ಮಧುಮೇಹ ಪರೀಕ್ಷೆ, ಎಕೊ ಪರೀಕ್ಷೆ ಮಾಡಲಾಯಿತು.

ಆರೋಗ್ಯಕರ ಜೀವನಶೈಲಿ ನಿಯಮಿತ ತಪಾಸಣೆಗಳ ಮಹತ್ವ, ಮಧುಮೇಹದಂತಹ ಕಾಯಿಲೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲಾಯಿತು. ತಪಾಸಣೆಯಲ್ಲಿ 200ಕ್ಕೂ ಹೆಚ್ಚಿನ ಜನರು ಭಾಗವಹಿಸಿದ್ದು, ಅಗತ್ಯವಿರುವವರಿಗೆ ಉಚಿತವಾಗಿ ಔಷಧಗಳನ್ನು ವಿತರಿಸಲಾಯಿತು.

# ಗಂಟ್ಲಮಲ್ಲಮ್ಮ; ಭೂಮಿಪೂಜೆಯ ತಿಕ್ಕಾಟ?

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನ.8ರಂದು ಶಿಡ್ಲಘಟ್ಟ ತಾಲ್ಲೂಕಿಗೆ ಭೇಟಿ ನೀಡುವರು. ಇಲ್ಲಿ ಜಿಲ್ಲೆಗೆ ಸಂಬಂಧಿಸಿದ ರೂ. 1 ಸಾವಿರ ಕೋಟಿ ವೆಚ್ಚದ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸುವರು.

ಇದೇ ಕಾರ್ಯಕ್ರಮದಲ್ಲಿ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ಗಂಟ್ಲಮಲ್ಲಮ್ಮ ಅಣೆಕಟ್ಟೆ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲು ಸಚಿವ ಡಾ.ಎಂ.ಸಿ.ಸುಧಾಕರ್ ಒಲವು ತೋರಿದ್ದಾರೆ. ಆದರೆ ಬಾಗೇಪಲ್ಲಿ ಶಾಸಕ ಎಸ್. ಎನ್.ಸುಬ್ಬಾರೆಡ್ಡಿ ಅವರು ಸ್ವಕ್ಷೇತ್ರ ಬಾಗೇಪಲ್ಲಿಯಲ್ಲಿಯೇ ಅಣೆಕಟ್ಟೆ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲು ದೃಢ ನಿರ್ಧಾರ ಮಾಡಿದ್ದಾರೆ. ಈ ವಿಚಾರ ಶಾಸಕರು ಮತ್ತು ಸಚಿವರ ನಡುವೆ ತಿಕ್ಕಾಟಕ್ಕೂ ಕಾರಣವಾಗಿದೆ ಎನ್ನುತ್ತವೆ ಶಾಸಕರ ಆಪ್ತ ಮೂಲಗಳು. 'ಗಂಟಮಲ್ಲಮ್ಮ' ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ಬಹುದೊಡ್ಡ ಯೋಜನೆ. ನಂದಿಗಿರಿಧಾಮದಲ್ಲಿ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಈ ಯೋಜನೆಗೆ ಅಂಗೀಕಾರ ದೊರೆಯಿತು. ಕಾಮಗಾರಿಗೆ ಕಾರ್ಯಾದೇಶವೂ ಆಗಿದೆ. ರೂ. 200 ಕೋಟಿ ವೆಚ್ಚದಲ್ಲಿ ಅಣೆಕಟ್ಟೆ ನಿರ್ಮಾಣವಾಗಲಿದೆ.

ಶಾಸಕ ಸುಬ್ಬಾರೆಡ್ಡಿ ಅವರ ದಶಕಗಳ ಕನಸು ಈಗ ನನಸಾಗುತ್ತಿದೆ. ಈ ಹಿಂದಿನಿಂದಲೂ ಅವರು ಗಂಟಮಲ್ಲಮ್ಮ ಅಣೆಕಟ್ಟೆ ನಿರ್ಮಿಸುವುದಾಗಿ ಭರವಸೆ ನೀಡಿದ್ದರು. ಇಂತಹ ಮಹತ್ವದ ಯೋಜನೆಯ ಶಂಕುಸ್ಥಾಪನೆ ತಮ್ಮ ಕ್ಷೇತ್ರದಲ್ಲಿಯೇ ಆಗಬೇಕು ಎನ್ನುವುದು ಸುಬ್ಬಾರೆಡ್ಡಿ ಅವರ ಪಟ್ಟು ಮತ್ತು ಇಚ್ಛೆ.



ಆದರೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್, ಜಿಲ್ಲೆಯ ಎಲ್ಲಾ ಅಭಿವೃದ್ಧಿ ಕಾಮಗಾರಿಗಳ ಭೂಮಿ ಪೂಜೆ ಮತ್ತು ಶಂಕುಸ್ಥಾಪನೆಯನ್ನು ಮುಖ್ಯಮಂತ್ರಿ ಅವರಿಂದ ಮಾಡಿಸಲು ಮುಂದಾಗಿದ್ದಾರೆ. ಈ ಸಂಬಂಧ ಇತ್ತೀಚೆಗೆ ಜಿಲ್ಲಾಡಳಿತ ಭವನದಲ್ಲಿ ಸಭೆ ನಡೆಸಿದ ಸಚಿವರು, 1 ಸಾವಿರ ಕೋಟಿಗೂ ಹೆಚ್ಚು ವಿವಿಧ ಕಾಮಗಾರಿಗಳಿಗೆ ಮುಖ್ಯಮಂತ್ರಿ ಚಾಲನೆ ನೀಡುವರು' ಎಂದಿದ್ದರು. ಹೀಗೆ ಚಾಲನೆ ನೀಡುವ ಪಟ್ಟಿಯಲ್ಲಿ ಗಂಟಮಲ್ಲಮ್ಮ ಅಣೆಕಟ್ಟೆಯ ವಿಚಾರವನ್ನೂ ಪ್ರಸ್ತಾಪಿಸಿದ್ದರು. ಮುಖ್ಯಮಂತ್ರಿ ಅವರ ಕಾರ್ಯಕ್ರಮದಲ್ಲಿ ಗಂಟಮಲ್ಲಮ್ಮ ಅಣೆಕಟ್ಟೆಯ ಭೂಮಿ ಪೂಜೆ ಕಾಮಗಾರಿ ನಡೆಯುವುದೇ ಅಥವಾ ಬಾಗೇಪಲ್ಲಿಯಲ್ಲಿ ಉಪಮುಖ್ಯಮಂತ್ರಿ ಅವರ ನೇತೃತ್ವದಲ್ಲಿ ಅಣೆಕಟ್ಟೆಗೆ ಶಂಕುಸ್ಥಾಪನೆ ನೆರವೇರಲಿದೆಯೇ ಎನ್ನುವ ಚರ್ಚೆ ಬಾಗೇಪಲ್ಲಿ ಕ್ಷೇತ್ರದಲ್ಲಿ ಜೋರಾಗಿದೆ.

# ಕೌಂಟಿಂಗ್ ಬಳಿಕ ಮಾಜಿ ಶಾಸಕ ಮಾಲೂರು ಬಿಡ್ತಾರೆ: ಕೆ.ವೈ.ನಂಜೇಗೌಡ

• **ಉದಯವಾಹಿನಿ, ಕೋಲಾರ**

ವಿಧಾನಸಭೆ ಚುನಾವಣೆಯ ಮರು ಮತ ಎಣಿಕೆ ಬಳಿಕ ಕೆ.ಎಸ್.ಮಂಜುನಾಥಗೌಡ ಮಾಲೂರು ಬಿಡುವುದು ಖಚಿತ. ಶಾಂತಿ ಸ್ವಭಾವದ ಮಾಲೂರು ತಾಲ್ಲೂಕು ಅವರಂಥವರನ್ನು ಸಹಿಸಲ್ಲ. ಈಗಾಗಲೇ ಅವರ ದೌರ್ಜನ್ಯ, ದಬ್ಬಾಳಿಕೆಯನ್ನು ಜನ ನೋಡಿದ್ದಾರೆ ಎಂದು ಶಾಸಕ ಕೆ.ವೈ.ನಂಜೇಗೌಡ ವಾಗ್ದಾಳಿ ನಡೆಸಿದರು.

ನಗರ ಹೊರವಲಯದಲ್ಲಿರುವ ಜಿಲ್ಲಾ ಹಾಲು ಒಕ್ಕೂಟದ ಕೋಮುಲ್ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಸೋಲಿನ ಸುಳಿವು ಸಿಕ್ಕಿ ಈಗ ಮತ್ತೊಂದು ಅನುಮಾನ ವ್ಯಕ್ತಪಡಿಸುತ್ತಿದ್ದು ಎಣಿಕೆ ನಡೆದು ತುಂಬಾ ದಿನಗಳಾಗಿದೆ. ಮತ ಯಂತ್ರಗಳು ಕೆಟ್ಟು ಹೋಗಿರುವ ಸಾಧ್ಯತೆಗಳಿವೆ ಎಂದಿದ್ದಾರೆ. ಮರು ಚುನಾವಣೆ ನಡೆದರೂ ನಡೆಯಬಹುದು ಎಂದಿದ್ದಾರೆ. ಮರು ಎಣಿಕೆಯಾದರೆ ಗೆಲ್ಲಲ್ಲ ಎಂಬುದು ಅವರಿಗೆ ಗೊತ್ತಾಗಿದೆ' ಎಂದು ಟೀಕಿಸಿದರು. ನವೆಂಬರ್‌ನಲ್ಲಿ ಮರು ಮತ ಎಣಿಕೆ ನಡೆದು ನನ್ನ ಪರ ಫಲಿತಾಂಶ ಬರಲಿದೆ. ಅವರು ಏನು ಭಾವಿಸಿದ್ದಾರೆಯೋ ಅದು ಮೂರನೇ ಬಾರಿ ಸುಳ್ಳಾಗಲಿದೆ. ಯಾವುದೇ ಕಾರಣಕ್ಕೂ ನನಗೆ ಭಯ ಇಲ್ಲ, ಅಧಿಕಾರ ದಾಹವೂ ಇಲ್ಲ ಎಂದರು. ಕೊಮ್ಮನಹಳ್ಳಿ ಬಚ್ಚೇಗೌಡರ ಮನೆ, ಎಲ್ಲೇಗೌಡರ ಕುಟುಂಬ ಅಂದರೆ ಒಂದು ಇತಿಹಾಸ ಇದೆ. ಜಮೀನ್ದಾರ ಹಾಗೂ ಗೌರವಸ್ಥ ಕುಟುಂಬ ನಮ್ಮದು. ನನಗೆ ರಾಜಕಾರಣದ ಹಿನ್ನೆಲೆ ಇಲ್ಲ. ನಾನೇ ರಾಜಕೀಯ ಅವಕಾಶ ಸೃಷ್ಟಿ ಮಾಡಿಕೊಂಡೆ. 1986ರಲ್ಲಿ ರಾಜಕೀಯ ಪ್ರವೇಶ ಮಾಡಿದೆ. ನನ್ನನ್ನು ತಾಲ್ಲೂಕಿನ ಜನ ಬೆಳೆಸಿದ್ದಾರೆ' ಎಂದು ಹೇಳಿದರು. ಮಾಲೂರು ತಾಲ್ಲೂಕಿನ ಜನ ತುಂಬಾ ಸೂಕ್ಷ್ಮ ಸ್ವಭಾವದವರು. ತುಂಬಾ ತೂಕ ಹಾಕುತ್ತಾರೆ.



ಯಾರು ಗೌರವಯುತವಾಗಿ ನಡೆದುಕೊಳ್ಳುತ್ತಾರೆ ಎಂಬುದನ್ನು ಗಮನಿಸುತ್ತಿರುತ್ತಾರೆ. 2028ರ ವಿಧಾನಸಭೆ ಚುನಾವಣೆಯ ಮತ ಎಣಿಕೆಯನ್ನೂ ನೋಡಲಿ. ಜನ ಯಾವ ರೀತಿ ತೀರ್ಮಾನ ಮಾಡುತ್ತಾರೆ ಎಂಬುದು ಗೊತ್ತಾಗಲಿದೆ ಎಂದು ಸವಾಲು ಹಾಕಿದರು.

2023ರ ವಿಧಾನಸಭೆ ಚುನಾವಣೆ ಮತ ಎಣಿಕೆ ವೇಳೆ ರಾಜ್ಯದಲ್ಲಿ ಇದ್ದದ್ದು ಬಿಜೆಪಿ ಸರ್ಕಾರ. ನಾನು 248 ವೋಟುಗಳಲ್ಲಿ ಗೆದ್ದಿದ್ದೆ. ಮರು ಮತ ಎಣಿಕೆಗೆ ನಾನು ಯಾವತ್ತೂ ವಿರೋಧ ಮಾಡಿಲ್ಲ. ಅವರು ನ್ಯಾಯಾಲಯಕ್ಕೆ ಹೋಗಿದ್ದಕ್ಕೆ ನಾನು ಹೋದೆ. ಮರು ಮತ ಎಣಿಕೆಗೆ ಸೂಚಿಸಿದರೆ ನಾನು ಮೇಲ್ಮನವಿ ಮಾಡುವುದಿಲ್ಲವೆಂದು ಹಿಂದೆಯೇ ಹೇಳಿದ್ದೆ. ಆದರೆ, ಅಸಿಂಧುಗೊಳಿಸಿದ ಕಾರಣ ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಿದೆ. ಸುಪ್ರೀಂ ಕೋರ್ಟಿನಲ್ಲಿ ನಾನಂದುಕೊಂಡಂತೆ ಆಯಿತು. ನ್ಯಾಯದೇವತೆ ಕೈಬಿಡಲಿಲ್ಲ. ನಾಲ್ಕು ವಾರದಲ್ಲಿಯೇ ಮತ ಎಣಿಕೆ ನಡೆಯಬೇಕೆಂದೇನೂ ಸುಪ್ರೀಂ ಕೋರ್ಟ್ ಹೇಳಿಲ್ಲ. ಬೇಗ ನಡೆಯಲಿ ಎಂಬುದು ನನ್ನ ಆಸೆ. ಎಣಿಕೆ ಸಂಬಂಧ ನನಗೆ ಯಾವುದೇ ಅನುಮಾನ ಇಲ್ಲ. ಮತ್ತೆ ನಾನೇ ಗೆಲ್ಲುತ್ತೇನೆ ಎಂದರು.

**ಸುಪ್ರೀಂ ಕೋರ್ಟ್ ತೀರ್ಮಾನ ಸಮಾಧಾನ ಉಂಟು ಮಾಡಿದೆ. ಆದಷ್ಟು ಬೇಗನೇ ಮರು ಎಣಿಕೆ ನಡೆಯಬೇಕೆನ್ನುವುದು ನನ್ನ ಆಸೆ. ಚುನಾವಣಾ ಆಯುಕ್ತರು, ಜಿಲ್ಲಾ ಆಡಳಿತ ಈ ಸಂಬಂಧ ಬೇಗನೇ ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು.**

# ಸಹಕಾರ ಕ್ಷೇತ್ರದಲ್ಲಿ ದೇಶಕ್ಕೆ ಮಾದರಿ ಕಾಯ್ದೆ: ಕೆ.ಎನ್.ರಾಜಣ್ಣ

• **ಉದಯವಾಹಿನಿ, ತುಮಕೂರು**

ಸಹಕಾರ ಕ್ಷೇತ್ರದಲ್ಲಿ ದೇಶಕ್ಕೆ ಮಾದರಿ ಆಗುವಂತಹ ಕಾಯ್ದೆ ಜಾರಿಗೆ ತರಲಾಗಿದೆ ಎಂದು ಮಾಜಿ ಸಹಕಾರ ಸಚಿವರೂ ಆದ ಶಾಸಕ ಕೆ.ಎನ್. ರಾಜಣ್ಣ ಇಲ್ಲಿ ಹೇಳಿದರು.'ನಾನು ಸಚಿವನಾಗಿದ್ದಾಗ ತಿದ್ದುಪಡಿ ಮಾಡಿ ರೂಪಿಸಿರುವ ಕಾನೂನು ಪೂರ್ಣ ಪ್ರಮಾಣದಲ್ಲಿ ಜಾರಿಗೆ ಬಂದ ನಂತರ ಅದರ ಮಹತ್ವ ಜನರಿಗೆ ಅರಿವಾಗುತ್ತದೆ. ಸಹಕಾರ ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣೆ ತರಲಾಗಿದೆ. ಹೊಸ ಕಾಯ್ದೆ ಬಗ್ಗೆ ಅಕ್ಕಪಕ್ಕದ ರಾಜ್ಯದವರೂ ಮಾಹಿತಿ ಪಡೆದುಕೊಳ್ಳುತ್ತಿದ್ದಾರೆ' ಎಂದು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಸಹಕಾರ ಸಂಘ, ಸಂಸ್ಥೆಗಳಲ್ಲಿ ಚುನಾವಣೆಗೆ ಸ್ಪರ್ಧಿಸುವವರು ತಮ್ಮ ಆಸ್ತಿ ವಿವರ ಸಲ್ಲಿಸುವುದು ಕಡ್ಡಾಯ ಮಾಡಲಾಗಿದೆ.

ವಿಧಾನಸಭೆ, ಲೋಕಸಭೆ ಚುನಾವಣೆಯಲ್ಲಿ ಆಸ್ತಿ ವಿವರ ಸಲ್ಲಿಸುವ ರೀತಿಯಲ್ಲಿ ಸಹಕಾರ ಕ್ಷೇತ್ರದ ಚುನಾವಣೆಯಲ್ಲೂ ಆಸ್ತಿ ವಿವರ ನೀಡುವುದು ಕಡ್ಡಾಯವಾಗಿದೆ ಎಂದರು. ಹಾಲು ಉತ್ಪಾದಕರ ಸಹಕಾರ ಸಂಘಗಳು, ವ್ಯವಸಾಯ ಸೇವಾ ಸಹಕಾರ ಸಂಘಗಳು, ಡಿಸಿಸಿ ಬ್ಯಾಂಕ್, ಅಪೆಕ್ಸ್ ಬ್ಯಾಂಕ್‌ನಲ್ಲಿ ಅಧ್ಯಕ್ಷ, ಉಪಾಧ್ಯಕ್ಷರ ಸ್ಥಾನಕ್ಕೂ ಮೀಸಲಾತಿ ತರಲಾಗಿದೆ. ಗ್ರಾಮ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷರಿಗೆ ಇರುವಂತೆ ಇಲ್ಲೂ ಮೀಸಲಾತಿ ಕಲ್ಪಿಸಲಾಗಿದೆ. ಸಹಕಾರ ಸಂಘ, ಸಂಸ್ಥೆಗಳ ಲೆಕ್ಕಪರಿಶೋಧನೆಗೂ ಬದಲಾವಣೆ ತರಲಾಗಿದೆ ಎಂದು ವಿವರಿಸಿದರು. ಪಾವಗಡ ತಾಲ್ಲೂಕು ತಿರುಮಣಿಯಲ್ಲಿ ಅ. 31ಕ್ಕೆ ಬ್ಯಾಂಕ್ ಶಾಖೆ ಉದ್ಘಾಟನೆ ಆಗಲಿದ್ದು, ತುರುವೇಕೆರೆ ತಾಲ್ಲೂಕಿನ ದಬ್ಬೆಘಟ್ಟ, ಕುಣಿಗಲ್ ತಾಲ್ಲೂಕಿನ ಅಮೃತೂರಿನಲ್ಲಿ ಶಾಖೆ ತೆರೆಯುವಂತೆ ಬೇಡಿಕೆ ಬಂದಿದೆ. ಸಮೀಕ್ಷೆ ನಂತರ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದರು.



**ಸರ್ಕಾರದ ನೆರವು ಪಡೆಯುವ ಖಾಸಗಿ ಸಂಸ್ಥೆಗಳು, ಡೇರಿ, ವ್ಯವಸಾಯ ಸೇವಾ ಸಂಘಗಳು ಸೇರಿದಂತೆ ಎಲ್ಲಾ ಸಹಕಾರ ಸಂಸ್ಥೆಗಳಿಗೂ ಮೂವರು ನಾಮನಿರ್ದೇಶನ ಮಾಡುವ ಕಾನೂನು ಜಾರಿಯಾಗಿದೆ. ಅದರಲ್ಲಿ ತಲಾ ಒಬ್ಬರು ಎಸ್‌ಸಿ, ಎಸ್‌ಟಿ ಇತರರು ಇರುತ್ತಾರೆ. ಆಯ್ಕೆ ಆಗಿರುವ ಸದಸ್ಯರ ಜಾತಿಯನ್ನು ಹೊರತುಪಡಿಸಿ, ಇತರೆ ಜಾತಿಯವರನ್ನು ನಾಮನಿರ್ದೇಶನ ಮಾಡಬೇಕಿದೆ ಎಂದು ಮಾಹಿತಿ ನೀಡಿದರು.**

**ಡಿಸಿಸಿ ಬ್ಯಾಂಕ್ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ (ಡಿಸಿಸಿ ಬ್ಯಾಂಕ್) ಸರಿಯಾದ ದಾರಿಯಲ್ಲಿ ಸಾಗಿದ್ದು, ಕಳೆದ ಆರ್ಥಿಕ ಸಾಲಿನಲ್ಲಿ ರೈತರಿಗೆ ರೂ.800 ಕೋಟಿ, ಕೃಷಿಯೇತರ ರೂ. 1,130 ಕೋಟಿ ಸಾಲ ನೀಡಲಾಗಿದೆ. ಪ್ರಸ್ತುತ ಮರಳಿ ಬಾರದ ಸಾಲದ ಪ್ರಮಾಣವನ್ನು (ಎನ್‌ಪಿಎ) ಶೇ 3.18ರಿಂದ ಶೇ 2.90ಕ್ಕೆ ಇಳಿಸಲಾಗಿದೆ. ಮುಂದಿನ ವರ್ಷದ ವೇಳೆಗೆ ಈ ಪ್ರಮಾಣವನ್ನು ಮತ್ತಷ್ಟು ಕಡಿಮೆ ಮಾಡಲಾಗುವುದು ಎಂದು ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಾಜಣ್ಣ ಹೇಳಿದರು.**

# ಮತಗಳ್ಳತನದ ಬಗ್ಗೆ ಸಮಗ್ರ ತನಿಖೆ ನಡೆಸಬೇಕು ಎಂದು ಆಗ್ರಹ

## ಕಾಂಗ್ರೇಸ್ ನಗರ, ಗ್ರಾಮಾಂತರ ಸಮಿತಿಗಳ ಪದಾಧಿಕಾರಿಗಳು, ಕಾರ್ಯಕರ್ತರು ಇಲ್ಲಿ ಸಹಿ ಸಂಗ್ರಹ

• **ಉದಯವಾಹಿನಿ, ಮೈಸೂರು**

ಮತಗಳ್ಳತನದ ಬಗ್ಗೆ ಸಮಗ್ರ ತನಿಖೆ ನಡೆಸಬೇಕು' ಎಂದು ಆಗ್ರಹಿಸಿ ಕಾಂಗ್ರೇಸ್ ನಗರ, ಗ್ರಾಮಾಂತರ ಸಮಿತಿಗಳ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಇಲ್ಲಿ ಸಹಿ ಸಂಗ್ರಹ ಅಭಿಯಾನ ನಡೆಸಿದರು. ಗಾಂಧಿ ವೃತ್ತದಲ್ಲಿ ಜಮಾಯಿಸಿದ ಕಾರ್ಯಕರ್ತರು ಕೇಂದ್ರ ಸರ್ಕಾರ ಹಾಗೂ ಬಿಜೆಪಿ ವಿರುದ್ಧ ಘೋಷಣೆ ಕೂಗಿದರು.

ಪಕ್ಷದ ಗ್ರಾಮಾಂತರ ಜಿಲ್ಲಾ ಸಮಿತಿಯ ಅಧ್ಯಕ್ಷ ಬಿ.ಜೆ.ವಿಜಯ್ ಕುಮಾರ್ ಮಾತನಾಡಿ, 'ಮತಗಳ್ಳತನದ ಬಗ್ಗೆ ತನಿಖೆ ನಡೆಸಲು, ಪ್ರಿಯಾಂಕ್ ಖರ್ಗೆ ಅವರಿಗೆ ಕೊಲೆ ಬೆದರಿಕೆ ಹಾಕಿದವರನ್ನು ಬಂಧಿಸಲು ಹಾಗೂ ಆರ್‌ಎಸ್‌ಎಸ್ ಸಹಿತ ಬಿಜೆಪಿ ಅಂಗ ಸಂಸ್ಥೆಗಳು ಜಾತಿ ಹೆಸರಿನಲ್ಲಿ ಗಲಭೆ ಎಬ್ಬಿಸುತ್ತಿರುವುದನ್ನು ಖಂಡಿಸಿ ಹೋರಾಟ ನಡೆಸುತ್ತಿದ್ದು, ಸಹಿ ಸಂಗ್ರಹಿಸಿ ರಾಷ್ಟ್ರಪತಿಯವರಿಗೆ ಕಳುಹಿಸಿಕೊಡುತ್ತೇವೆ ಎಂದು ತಿಳಿಸಿದರು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, 'ಬಿಜೆಪಿಯವರು ಪ್ರತಿ ಬಾರಿ ಒಂದೊಂದು ನಾಟಕವನ್ನಾಡಿ ಅಧಿಕಾರಕ್ಕೆ ಬರುತ್ತಿದ್ದಾರೆ. ಕೆ.ಆರ್. ಕ್ಷೇತ್ರದಲ್ಲಿ ಹಿಂದೆ ಒಂದೇ ಸೈಟ್‌ನಲ್ಲಿ ಹಲವು ಜನ ಮತದಾರರಿದ್ದದ್ದನ್ನು ಕಂಡುಹಿಡಿದಿದ್ದೆವು. ಈ ಬಗ್ಗೆ ಅಧಿಕಾರಿಗಳ ಗಮನಕ್ಕೆ ತಂದು 26ಸಾವಿರ ಹೆಸರು ತೆಗೆಸಿದ್ದೆವು. ಬಿಜೆಪಿ ಇದೇ ಕೆಲಸವನ್ನು ನಿರಂತರವಾಗಿ ಮಾಡುತ್ತಿದೆ. ಕಾಂಗ್ರೇಸ್ ಮತ ಹೆಚ್ಚಿರುವ ಕಡೆಗಳಲ್ಲಿ ಮತ ಸೇರಿಸುತ್ತಿದ್ದಾರೆ' ಎಂದು ಆರೋಪಿಸಿದರು.

ಕಾಂಗ್ರೇಸ್ ನಗರ ಜಿಲ್ಲಾ ಸಮಿತಿಯ ಅಧ್ಯಕ್ಷ ಆರ್.ಮೂರ್ತಿ, ಮಾಜಿ ಶಾಸಕ ನಂಜುಂಡಸ್ವಾಮಿ, ಕೆಪಿಸಿಸಿ ವಕ್ತಾರ ಎಚ್.ಎ. ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಬಿ.ಎಂ. ರಾಮು, ವಕ್ತಾರ ಕೆ. ಮಹೇಶ್ ಭಾಗವಹಿಸಿದ್ದರು.

**'ಬಿಜೆಪಿಯು ಜಾತಿ, ಧರ್ಮದ ಹೆಸರಿನಲ್ಲಿ ಅಧಿಕಾರಕ್ಕೆ ಬರುತ್ತಿತ್ತು. ಅದು ಸಾಧ್ಯವಾಗದೇ ಇದ್ದಾಗ ಮತಗಳ್ಳತನ ಮಾಡುತ್ತಿದೆ. ವಿಧಾನಸಭಾ ಚುನಾವಣೆಯಲ್ಲೂ ಮತಕಳ್ಳತನ ಆಗಿದೆ. ಇಲ್ಲದಿದ್ದರೆ ಕಾಂಗ್ರೇಸ್ ಇನ್ನಷ್ಟು ಸ್ಥಾನಗಳಲ್ಲಿ ಗೆಲುವು ಸಾಧಿಸುತ್ತಿತ್ತು' ಎಂದರು.**

**ವಿಧಾನಪರಿಷತ್ ಮಾಜಿ ಉಪಸಭಾಪತಿ ಮರಿತಿಬ್ಬೇಗೌಡ**



**'ನಮ್ಮಲ್ಲಿ ಶಿಸ್ತಿಲ್ಲದ ಕಾರಣ ಬಿಜೆಪಿಗರನ್ನು ಎದುರಿಸಲು ಆಗುತ್ತಿಲ್ಲ. ಪ್ರಜಾಪ್ರಭುತ್ವ ಉಳಿಸುವ ಜವಾಬ್ದಾರಿ ಕಾಂಗ್ರೇಸ್ ಮೇಲಿದೆ. ಇಂದಿನ ಹೋರಾಟದಲ್ಲಿ ನೂರಾರು ಜನ ಭಾಗವಹಿಸಬೇಕಿತ್ತು. ದೇಶಕ್ಕಾಗಿ ಬಿಜೆಪಿಯ ಹೋರಾಟ, ಕೊಡುಗೆ ಏನೂ ಇಲ್ಲ. ಕಾಂಗ್ರೇಸ್ ಕಾರ್ಯಕರ್ತರು ಸಕ್ರಿಯರಾಗಿ ರುವವರೆಗೆ ಬಿಜೆಪಿಗರು ಸಂವಿಧಾನ ಮುಟ್ಟಲು ಸಾಧ್ಯವಿಲ್ಲ. ಬಿಜೆಪಿ ಹುನ್ನಾರಗಳ ಬಗ್ಗೆ ಸಮಗ್ರ ತನಿಖೆ ಆಗಬೇಕು' ಎಂದು ಆಗ್ರಹಿಸಿದರು.**

**ಮಾಜಿ ಸಂಸದ ವಿ.ಎಸ್. ಉಗ್ರಪ್ಪ**

# ಮಿನಿ ನ್ಯೂಸ್

## ಮಾಗಡಿ ಪುರಸಭೆಗೆ ಅಧ್ಯಕ್ಷ ಆಯ್ಕೆ

• **ಉದಯವಾಹಿನಿ, ಮಾಗಡಿ**

ಮಾಗಡಿ ಪುರಸಭೆ ಅಧ್ಯಕ್ಷ ಸ್ಥಾನಕ್ಕೆ 13 ಮತ ಪಡೆದ ಕಾಂಗ್ರೇಸ್‌ನ ಶಿವರುದ್ರಮ್ಮ ವಿಜಯಕುಮಾರ್ ನೂತನ ಅಧ್ಯಕ್ಷರಾಗಿ ಘೋಷಣೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ತಹಶೀಲ್ದಾರ್ ಶರತ್ ಕುಮಾರ್ ತಿಳಿಸಿದರು. ಪುರಸಭೆಯಲ್ಲಿ ಹೈಕೋರ್ಟ್ ನೀಡಿದ ಆದೇಶದಂತೆ ಪುರಸಭೆ ನೂತನ ಅಧ್ಯಕ್ಷರಾಗಿ ಆಯ್ಕೆಯಾದರು. ತಡೆಯಾಜ್ಞೆ ಹಿನ್ನಲೆಯಲ್ಲಿ ಫಲಿತಾಂಶ ಘೋಷಣೆ ಮಾಡಿರಲಿಲ್ಲ. ಕೇವಲ 21 ದಿನಗಳ ಕಾಲ ಅಧಿಕಾರ ಇರುವುದರಿಂದ ದೊಡ್ಡ ಅಭಿವೃದ್ಧಿ ಕಾರ್ಯ ಮಾಡಲು ಸಾಧ್ಯವಾಗುವುದಿಲ್ಲ. ಕಾಮಗಾರಿಗಳಿಗೆ ವೇಗ ನೀಡಲಾಗುವುದು ಎಂದರು. ಪುರಸಭಾ ಉಪಾಧ್ಯಕ್ಷ ರಿಯಾಜ್ ಸದಸ್ಯರಾದ ಅಶ್ವಥ್, ಶಿವಕುಮಾರ್, ರಂಗಹನುಮಯ್ಯ, ರಹಮತ್, ಮುಖಂಡರಾದ ಮೂರ್ತಿ, ಮಂಜುನಾಥ್, ರೂಪೇಶ್ ಕುಮಾರ್, ಪುರಸಭೆ ಮುಖ್ಯಾಧಿಕಾರಿ ಶ್ರೀನಿವಾಸ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಗ್ರಾಮದ ರೈತನ ಮೇಲೆ ದಾಳಿ ಮಾಡಿದ್ದ ಹುಲಿ ಸೆರೆ

• **ಉದಯವಾಹಿನಿ, ಸರಗೂರು**

ತಾಲ್ಲೂಕಿನ ಬಡಗಲಪುರ ಗ್ರಾಮದ ರೈತನ ಮೇಲೆ ದಾಳಿ ನಡೆಸಿ ಕಾಡಿನತ್ತ ಓಡಿದ್ದ ಹುಲಿಯನ್ನು ಅರಣ್ಯ ಇಲಾಖೆ ಸಿಬ್ಬಂದಿ ಸೆರೆ ಹಿಡಿದಿದ್ದಾರೆ. ಬೆಳಿಗ್ಗೆ ಮಹೇಂದ್ರ, ಅಭಿಮನ್ಯು, ಭೀಮ, ಭಗೀರಥ ಸಾಕಾನೆಗಳ ಸಹಾಯದಿಂದ ಕೂಂಬಿಂಗ್ ಕಾರ್ಯಾಚರಣೆ ಆರಂಭಿಸಿದ ಅರಣ್ಯ ಇಲಾಖೆ ಸಿಬ್ಬಂದಿ, ಯಡಿಯಾಲ ಸಮೀಪದ ಜಮೀನೊಂದರಲ್ಲಿ ಎರಡು ಡ್ರೋನ್ ನೆರವಿನಿಂದ ಹುಲಿ ಇರುವ ಸ್ಥಳ ಪತ್ತೆ ಹಚ್ಚಿದರು. ಬಳಿಕ ಪಶುವೈದ್ಯ ಡಾ.ವಸೀಂ ಮಿರ್ಜಾ, ಡಾ.ರಮೇಶ್, ಶಾರ್ಪ್ ಶೂಟರ್ ರಂಜನ್ ಅವರು ಹುಲಿಗೆ ಅರಿವಳಿಕೆ ಚುಚ್ಚುಮದ್ದು ನೀಡಿ ಸೆರೆ ಹಿಡಿಯುವಲ್ಲಿ ಯಶಸ್ವಿಯಾದರು. ಕಳೆದ ಕೆಲ ದಿನಗಳಿಂದಲೂ ಹುಲಿ ಸೆರೆಗಾಗಿ ಅರಣ್ಯ ಇಲಾಖೆಯು ವಿವಿಧ ತಂಡಗಳನ್ನು ರಚಿಸಿಕೊಂಡು ಮೂರು ಕಡೆ ಬೋನು ಇರಿಸಿ ಸೆರೆ ಕಾರ್ಯಾಚರಣೆ ಆರಂಭಿಸಿತ್ತು. ಸೆರೆಯಾಗದ ವ್ಯಾಘ್ರ ಪತ್ತೆಗೆ ಇಲಾಖೆ ಕ್ಯಾಮೆರಾ ಅಳವಡಿಸಿತ್ತು. ಮಧ್ಯಾಹ್ನದ ವೇಳೆಗೆ ಖಚಿತ ಮಾಹಿತಿ ಪಡೆದು ಕಾರ್ಯಾಚರಣೆ ನಡೆಸಿ ಹುಲಿ ಸೆರೆ ಹಿಡಿದಿದ್ದಾರೆ. ಇದು ಮೂರು ವರ್ಷದ ಹೆಣ್ಣು ಹುಲಿಯಾಗಿದ್ದು, ಗಾಯಗೊಂಡಿದೆ. ಸುಮಾರು 70 ಸಿಬ್ಬಂದಿ. ಡ್ರೋನ್ ಕ್ಯಾಮೆರಾ ತಂಡ ಹಾಗೂ ಪಶುವೈದ್ಯರು ಜತೆಗೆ ಸ್ಥಳೀಯ ಜನರ ಸಹಕಾರದಿಂದ ಸೆರೆ ಹಿಡಿಯಲಾಗಿದ್ದು, ಹುಲಿಯ ಆರೈಕೆಗಾಗಿ ಬನ್ನೇರುಘಟ್ಟ ಪುನರ್ವಸತಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ ಎಂದು ನುಗು ಅರಣ್ಯ ಇಲಾಖೆ ಅಧಿಕಾರಿ ವಿವೇಕ್ ತಿಳಿಸಿದರು.

## ಟೋಲ್ ವಿರೋಧಿಸಿ ಉಗ್ರ ಹೋರಾಟಕ್ಕೆ ನಿರ್ಧಾರ

• **ಉದಯವಾಹಿನಿ, ಗುಬ್ಬಿ**

ತಾಲ್ಲೂಕಿನ ಸಿಎಸ್ ಪುರ ಮಾರ್ಗವಾಗಿ ಹಾದು ಹೋಗಿರುವ ರಾಜ್ಯ ಹೆದ್ದಾರಿ 84ರ ಜಿ. ಹೊಸಹಳ್ಳಿಯ ಬಳಿ ಹೆದ್ದಾರಿ ಪ್ರಾಧಿಕಾರದವರು ಅವೈಜ್ಞಾನಿಕವಾಗಿ ಟೋಲ್ ನಿರ್ಮಿಸಿ ಶುಲ್ಕ ವಸೂಲಾತಿಗೆ ಮುಂದಾಗಿದ್ದಾರೆ ಎಂದು ಆರೋಪಿಸಿ ರೈತ ಸಂಘ ಹಾಗೂ ಸ್ಥಳೀಯರು ಪಟ್ಟಣದಲ್ಲಿ ಸಭೆ ನಡೆಸಿದರು. ಟೋಲ್ ಸಂಗ್ರಹ ನಿಲ್ಲಿಸದಿದ್ದರೆ ಅಕ್ಟೋಬರ್ 27ರಂದು ಪ್ರತಿಭಟನೆ ನಡೆಸಲು ತೀರ್ಮಾನಿಸಿದರು.ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಎ. ಗೋವಿಂದರಾಜು ಮಾತನಾಡಿ, ಹೆಚ್ಚು ವಾಹನಗಳು ಸಂಚರಿಸಿದ ಈ ರಸ್ತೆಯಲ್ಲಿ ಟೋಲ್ ಸಂಗ್ರಹ ಕೇಂದ್ರ ನಿರ್ಮಿಸಲು ಮುಂದಾಗಿರುವುದು ಖಂಡನೀಯ. ರೈತರು ಹಾಗೂ ಸ್ಥಳೀಯರಿಗೆ ತೊಂದರೆ ಕೊಡುವ ಉದ್ದೇಶದಿಂದಲೇ ಟೋಲ್ ಸಂಗ್ರಹಕ್ಕೆ ಮುಂದಾಗಿದ್ದಾರೆ. ಯಾವುದೋ ಕಾರ್ಪೊರೇಟ್ ಸಂಸ್ಥೆಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಸ್ಥಳೀಯರಿಗೆ ತೊಂದರೆ ಕೊಡುತ್ತಿದ್ದಾರೆ. ಸಂಬಂಧಿಸಿದವರು ತಕ್ಷಣ ಎಚ್ಚೆತ್ತು ಸಂಗ್ರಹ ನಿಲ್ಲಿಸದಿದ್ದಲ್ಲಿ ಹೋರಾಟ ಅನಿವಾರ್ಯ ಎಂದು ಎಚ್ಚರಿಸಿದರು. ಮುಖಂಡ ಕಳ್ಳಿಪಾಳ್ಯ ಲೋಕೇಶ್ ಮಾತನಾಡಿ, ಟೋಲ್ ನಿರ್ಮಾಣದಿಂದಾಗಿ ಸ್ಥಳೀಯರಿಗೆ ಸಾಕಷ್ಟು ತೊಂದರೆಯಾಗುವುದು ಎನ್ನುವುದನ್ನು ಶಾಸಕರ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ದೂರಿದರು. ಈಗಾಗಲೇ ಟೋಲ್ ಸಂಗ್ರಹಕ್ಕೆ ದರ ನಿಗದಿಪಡಿಸಲಾಗಿದೆ ಎಂಬ ಮಾಹಿತಿ ಇದ್ದು, ಶಾಸಕರು ತಕ್ಷಣ ಸ್ಥಳೀಯರ ಪರವಾಗಿ ಧ್ವನಿ ಎತ್ತಬೇಕಿದೆ ಎಂದು ಹೇಳಿದರು.

ಮುಖಂಡ ಹೊನ್ನಗಿರಿಗೌಡ ಮಾತನಾಡಿ, ಸ್ಥಳೀಯರ ಹಿತದೃಷ್ಟಿಯಿಂದ ಪಕ್ಷಾತೀತವಾಗಿ ಪ್ರತಿಭಟನೆ ನಡೆಸಲು ಮುಂದಾಗಿದ್ದೇವೆ. ಖಾಸಗಿ ಕಂಪನಿ ಹಿತಕ್ಕಾಗಿ ಟೋಲ್ ನಿರ್ಮಾಣವಾಗುತ್ತಿದ್ದು, ಯಾವುದೇ ಕಾರಣಕ್ಕೂ ಸ್ಥಳೀಯರಿಗೆ ಅನ್ಯಾಯವಾಗಲು ಬಿಡುವುದಿಲ್ಲ. ಹೆದ್ದಾರಿ ಸುತ್ತಲಿನ ಗ್ರಾಮಸ್ಥರ ಸೇರಿಸಿ ಪ್ರತಿಭಟನೆ ನಡೆಸುತ್ತೇವೆ ಎಂದು ಹೇಳಿದರು. ರೈತ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ವೆಂಕಟೇಗೌಡ ಮಾತನಾಡಿ, ಟೋಲ್ ನಿರ್ಮಾಣದಿಂದಾಗಿ ರೈತರು, ವಿದ್ಯಾರ್ಥಿಗಳಿಗೆ ಸಾಕಷ್ಟು ತೊಂದರೆಯಾಗಲಿದೆ. ಅಧಿಕಾರಿಗಳು ಹಾಗೂ ತಾಲ್ಲೂಕು ಆಡಳಿತ ಎಚ್ಚೆತ್ತುಕೊಂಡು ನಿರ್ಮಾಣ ನಿಲ್ಲಿಸದಿರುವುದರಿಂದ ಪ್ರತಿಭಟನೆ ಅನಿವಾರ್ಯವಾಗುತ್ತಿದೆ ಎಂದು ಹೇಳಿದರು.

# ನಾಲೆ ಆಧುನೀಕರಣಕ್ಕೆ ರೂ.43 ಕೋಟಿ ಅನುದಾನ

• **ಉದಯವಾಹಿನಿ, ಕೆ.ಆರ್.ನಗರ**

ಕ್ಷೇತ್ರದ ಅಭಿವೃದ್ಧಿಗಾಗಿ ಈವರೆಗೆ ರೂ.600 ಕೋಟಿಗೂ ಹೆಚ್ಚು ಅನುದಾನ ತಂದಿದ್ದೇನೆ' ಎಂದು ಶಾಸಕ ಡಿ.ರವಿಶಂಕರ್ ಹೇಳಿದರು.ತಾಲ್ಲೂಕಿನ ಸೌತನಹಳ್ಳಿಯಲ್ಲಿ ಸಿಸಿ ರಸ್ತೆ, ಚರಂಡಿ, ಶಾಲಾ ಕೊಠಡಿ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ತಾಲ್ಲೂಕಿನ ಹೊಸೂರು ಕಲ್ಲಹಳ್ಳಿ, ಸೌತನಹಳ್ಳಿ, ಸಾತಿಗ್ರಾಮ ದೆಗ್ಗನಹಳ್ಳಿ, ಚಾಮಲಾಪುರ, ತಿಪ್ಪೂರು, ಕನುಗನಹಳ್ಳಿ, ಗೊರಗುಂಡಿ, ನಾರಾಯಣಪುರ, ಕಗ್ಗೆರೆ, ಕಾಮೇನಹಳ್ಳಿ, ಬೋರೆ ಕಲ್ಲಹಳ್ಳಿ ಪ್ರತಿವರ್ಷ ನೀರಿನ ಸಮಸ್ಯೆ ಎದುರಿಸುತ್ತಿವೆ. ಈ ಭಾಗದ ಗ್ರಾಮಗಳಿಗೆ ನೀರು ಒದಗಿಸಲು ನಾಲಾ ಆಧುನೀಕರಣಕ್ಕಾಗಿ ರೂ.43 ಕೋಟಿ ಅನುದಾನ ಮಂಜೂರಾಗಿದ್ದು, ಈಗಾಗಲೇ ಟೆಂಡರ್ ಹಂತ ಮುಗಿದಿದೆ, ಡಿಸೆಂಬರ್ ವೇಳೆಗೆ ಕಾಮಗಾರಿ ಪ್ರಾರಂಭವಾಗಲಿದೆ' ಎಂದು ಭರವಸೆ ನೀಡಿದರು.

ಕ್ಷೇತ್ರದಲ್ಲಿ ಶಾಸಕನಾಗಿ ಜನಪರ ಕೆಲಸಗಳು ಮಾಡಬೇಕಾಗಿರುವುದು ನನ್ನ ಜವಾಬ್ದಾರಿ, ಅದರಂತೆ ಕೆಲಸ ಮಾಡಿಕೊಂಡು ಬರುತ್ತಿದ್ದೇನೆ, ವಿರೋಧಿಗಳು ನನ್ನ ಮೇಲೆ ಇಲ್ಲಸಲ್ಲದ ಆರೋಪ ಮಾಡುತ್ತಿರುವುದು ಸರಿಯಲ್ಲ. ಅಭಿವೃದ್ಧಿ ಹಿತದೃಷ್ಟಿಯಿಂದ ರಾಜಕಾರಣ ಮಾಡಬೇಕೇ ಹೊರತು, ವೈಯಕ್ತಿಕ ವಿಚಾರ ಇಟ್ಟುಕೊಂಡು ರಾಜಕಾರಣ ಮಾಡಬಾರದು' ಎಂದು ತಿರುಗೇಟು ನೀಡಿದರು.



ಮಹಿಳೆಯೊಬ್ಬರ ಮೇಲೆ ನಡೆದ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾತನಾಡಿ, 'ಈ ಹಿಂದೆ ವ್ಯಕ್ತಿಯೊಬ್ಬ ನನ್ನೊಂದಿಗೆ ಫೋಟೊ ತೆಗೆಸಿಕೊಂಡ ಮಾತ್ರಕ್ಕೆ ಅವನು ನನ್ನ ಬಲಗೈ ಭಂಟ ಆಗಲು ಹೇಗೆ ಸಾಧ್ಯ' ಎಂದು ಪ್ರಶ್ನಿಸಿದ ಅವರು, 'ಇದರಲ್ಲಿ ಕಾಣದ ಕೈಗಳು ಕೆಲಸ ಮಾಡುತ್ತಿವೆ. ಅವನಿಗೂ ನನಗೂ ಯಾವುದೇ ಸಂಬಂಧ ಇಲ್ಲದೇ ಹೋದರೂ ವಿರೋಧಿಗಳಿಂದ ನನ್ನ ಹೆಸರಿಗೆ ಮಸಿ ಬಳಿಯುವ ಕೆಲಸ ನಡೆಯುತ್ತಿದೆ' ಎಂದರು.




























Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966